₹ 4 | ಪುಟ: 4 | ಸಂಪುಟ: 4 | ಸಂಚಿಕೆ 64 | newsbelagavi@gmail.com | 9900332089 | 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ

Volume : 4 | Issue: 64 | Sunday, 23, APRIL, 2023 | RNI: KARKAN/2020/79084 | Regn,No:G-2/PMG/KA/NK/BM/139/2021-23 | 24

## ಸರ್ಕಾರಿ ಬಂಗಲೆ ತೊರೆದ ರಾಹುಲ್ ಗಾಂಧಿ



ನವದೆಹಲಿ: ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಅವರು ಕೇಂದ್ರ ದೆಹಲಿಯಲ್ಲಿರುವ ತಮ್ಮ ಅಧಿಕೃತ ನಿವಾಸವನ್ನು ಖಾಲಿ ಮಾಡಿದ್ದಾರೆ.

ರಾಹುಲ್ ಗಾಂಧಿ ಹಾಗೂ ಅವರ ಸಹೋದರಿ ಪ್ರಿಯಾಂಕಾ ಗಾಂಧಿ ವಾದ್ರಾ ಅವರು ಬೆಳಗ್ಗೆಯಿಂದ 2 ಬಾರಿ ಬಂಗಲೆಗೆ ಭೇಟಿ ನೀಡಿದ್ದಾರೆ. ನಂತರ ಮಧ್ಯಾಹ್ನದ ವೇಳೆಗೆ ರಾಹುಲ್ ಗಾಂಧಿ ಕೀಗಳನ್ನು ಹಸ್ತಾಂತ-ರಿಸಿದ್ದಾರೆ.

2005 ರಿಂದ ರಾಹುಲ್ ಗಾಂಧಿ 12 ತುಘಲಕ್ ಲೇನ್ ಬಂಗಲೆಯಲ್ಲಿ ವಾಸಿಸುತ್ತಿದ್ದರು. ಆದರೆ ಕಳೆದ ತಿಂಗಳ ಕೊನೆಯಲ್ಲಿ ಸಂಸತ್ ಸದಸ್ಯ ಸ್ಥಾನದಿಂದ ರಾಹುಲ್ ಗಾಂಧಿ ಅನರ್ಹಗೊಂಡಿದ್ದರು. ಇದರ ಬೆನ್ನಲ್ಲೇ ಬಿಜೆಪಿ ಸಂಸದ ಸಿ.ಆರ್. ಪಾಟೀಲ್ ನೇತೃತ್ವದ ಲೋಕಸಭೆಯ ವಸತಿ ಸಮಿತಿಯು ಏಪ್ರಿಲ್ 22ರೊಳಗೆ ದೆಹಲಿಯಲ್ಲಿರುವ ತುಘಲಕ್ ಲೇನ್ ಬಂಗಲೆ ತೊರೆಯುವಂತೆ ಲೋಕಸಭಾ ವಸತಿ ಸಮಿತಿ ನೋಟಿಸ್ ನೀಡಿತ್ತು. ಮನೆ ಖಾಲಿ ಮಾಡಲು ಒಪ್ಪಿಗೆ ಸೂಚನೆ ನೀಡುತ್ತಿದ್ದಂತೆ ರಾಹುಲ್ ಗಾಂಧಿಗೆ ಪಕ್ಷದ ನಾಯಕರಿಂದ ಮನೆ ಆಫರ್‌ಗಳು ಹರಿದು ಬಂದಿತ್ತು.

ಆದರೆ ರಾಹುಲ್ ಗಾಂಧಿ ಅವರು ಸೋನಿಯಾ ಗಾಂಧಿ ಅವರ ಜನಪಥ್ ನಿವಾಸಕ್ಕೆ ತೆರಳುತ್ತಿದ್ದಾರೆ. ಆದರೂ ರಾಹುಲ್ ಗಾಂಧಿ ಅವರು ಕೆಲವು ನಿಯಮಗಳ ಪ್ರಕಾರ ಬಂಗಲೆಯಿಂದ ಹೊರಹೋಗಬೇಕಾಗಿದೆ. ಕಾಂಗ್ರೆಸ್ ನಾಯಕರು ಕೇಂದ್ರದ ವಿರುದ್ಧ ರಾಜಕೀಯ ಸೇಡಿನ ಆರೋಪ ಮಾಡಿದ್ದಾರೆ.

ಕಳೆದ ವಾರ ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಅವರು ತಮ್ಮ ಮನೆಯನ್ನು ಖಾಲಿಗೊಳಿಸುತ್ತಿದ್ದು, ಈ ಹಿನ್ನೆಲೆಯಲ್ಲಿ ತುಘಲಕ್ ಲೇನ್ನ ಬಂಗಲೆ ಹೊರಗೆ 2 ಟ್ರಕ್ಗಳಲ್ಲಿ ಕಾರ್ಮಿಕರು ಮನೆಯಲ್ಲಿದ್ದ ವಸ್ತುಗಳನ್ನು ತೆಗೆದುಕೊಂಡು ಹೋಗಿದ್ದಾರೆ.

## ಕಾಂಗ್ರೆಸ್ ಅಭ್ಯರ್ಥಿಗಳ ನಾಮಪತ್ರ ತಿರಸ್ಕೃತಗೊಳಿಸಲು ಸಿಎಂ ಕಚೇರಿಯಿಂದಲೇ ಯತ್ನ: ಡಿ.ಕೆ ಶಿವಕುಮಾರ್ ಗಂಭೀರ ಆರೋಪ




ಬೆಂಗಳೂರು: ಕಾಂಗ್ರೆಸ್ ಅಭ್ಯರ್ಥಿಗಳ ನಾಮಪತ್ರ ತಿರಸ್ಕೃತಗೊಳಿಸಲು ಮತ್ತು ಬಿಜೆಪಿ ಅಭ್ಯರ್ಥಿಗಳ ನಾಮಪತ್ರ ಅನುಮೋದಿಸುವಂತೆ ಸಿಎಂ ಕಚೇ-ರಿಯಿಂದಲೇ ಯತ್ನಗಳು ನಡೆಯುತ್ತಿದ್ದು, ಈ ಬಗ್ಗೆ ಚುನಾವಣಾ ಆಯೋಗ ಕ್ರಮ ಕೈಗೊಳ್ಳಬೇಕೆಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ ಶಿವಕುಮಾರ್ ಗಂಭೀರ ಆರೋಪ ಮಾಡಿದ್ದಾರೆ.

ಸುದ್ದಿಗಾರರೊಂದಗೆ ಮಾತನಾಡಿದ ಅವರು, ಕಾಂಗ್ರೆಸ್ ಅಭ್ಯರ್ಥಿಗಳ ನಾಮಪತ್ರ ತಿರಸ್ಕೃತಗೊಳಿಸಲು ಯತ್ನ ನಡೆಯುತ್ತಿದೆ. ಸಿಎಂ ಕಚೇರಿ, ಸಿಎಂ ಲೀಗಲ್ ಟೀಂನಿಂದ ಅಧಿಕಾರ ದುರ್ಬಳಕೆ ಮಾಡಲಾಗುತ್ತಿದೆ. ನಮ್ಮ ಅಭ್ಯರ್ಥಿಗಳ ಅಫಿಡವಿಟ್ ಡೌನ್ಲೋಡ್ ಮಾಡಿಕೊಳ್ಳಲಾಗುತ್ತಿದೆ. ಖುದ್ದು ಸಿಎಂ ಕಚೇರಿಯ ಸೂಚನೆ ಮೇರೆಗೆ ಇದೆಲ್ಲ ನಡೆಯುತ್ತಿದೆ ಎಂದು ಆರೋಪಿಸಿದ್ದಾರೆ.

ಕಾಂಗ್ರೆಸ್ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸುವ ದೊಡ್ಡ ಷಡ್ಯಂತ್ರ ನಡೆಯುತ್ತಿದೆ. ಸವದತ್ತಿ ಯಲ್ಲಮ್ಮ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿಗಳ ಕೆಲವು ಅರ್ಜಿಗಳು ದೋಷಪೂರಿತವಾಗಿವೆ. ಆದ-'ರೆ ಮುಖ್ಯಮಂತ್ರಿಗಳ ಕಚೇರಿ ನೇರವಾಗಿ ಅಧಿಕಾರಿಯನ್ನು ಕರೆದು ಬದಲಾವಣೆ ಮಾಡುವಂತೆ ಸೂಚಿಸಿದ್ದಾರೆ. ಇದಕ್ಕೆ ಸಿಎಂ ಬೊಮ್ಮಾಯಿಯೇ ನೇರಹೊಣೆ ಹೊರಬೇಕಾಗುತ್ತೆ. ಮುಖ್ಯಮಂತ್ರಿಗಳ ಕಚೇರಿಯ ಕಾಲ್ ಡೀಟೇಲ್ಸ್ ತೆಗೆಯಬೇಕು. ಈ ಬಗ್ಗೆ ಚುನಾವಣಾ ಆಯೋಗ ಕ್ರಮಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ನನ್ನ ಅರ್ಜಿಯನ್ನು ತಿರಸ್ಕರಿಸಲು ದೊಡ್ಡ ತಂಡವೊಂದು ಯಾವ ರೀತಿಯ ಪ್ರಯತ್ನಗಳನ್ನು ನಡೆಸುತ್ತಿದೆ ಎಂಬುದನ್ನು ವಿವರಿಸುವ ಅಗತ್ಯವಿಲ್ಲ. ಅದರ ಬಗ್ಗೆ ನಿಮಗೆಲ್ಲರಿಗೂ ತಿಳಿದೇ ಇದೆ. ಈವರೆಗೂ 10 ಬಾರಿ ನಾಮಪತ್ರ ಸಲ್ಲಿಸಿದ್ದ ನನಗೆ ಈ ರೀತಿ ಮಾಡುತ್ತಿದ್ದಾರೆಂದರೆ ಸಾಮಾನ್ಯ ಅಭ್ಯರ್ಥಿಗೆ ಏನು ಮಾಡಬಹುದು ಎಂಬುದನ್ನು ನೀವೇ ಊಹಿಸಿಕೊಳ್ಳಿ. ಸರ್ಕಾರ ಎಲ್ಲಾ ಚುನಾವಣಾಧಿಕಾ-ರಿಗಳ ಮೇಲೆ ಒತ್ತಡ ಹೇರುತ್ತಿದ್ದು, ಅಧಿಕಾರ ದುರ್ಬಳಕೆಯಾಗುತ್ತಿದೆ. ಇದನ್ನು ಚುನಾವಣಾ ಆಯೋಗ ಗಮನಿಸಬೇಕು, ತನಿಖೆ ನಡೆಸಬೇಕು ಎಂದು ಒತ್ತಾಯಿಸಿದ್ದಾರೆ.

ಇದೇ ವೇಳೆ ವಿಧಾನಸಭೆ ಚುನಾವಣೆಗೆ ಸ್ಪರ್ಧಿಸಲು ಟಿಕೆಟ್ ನೀಡಿದ ಅಭ್ಯರ್ಥಿಗಳಿಂದ ಕಾಂಗ್ರೆಸ್ ಲಂಚ ಪಡೆಯುತ್ತಿದೆ ಎಂಬ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆರೋಪಕ್ಕೆ ತಿರುಗೇಟು ನೀಡಿದ ಅವರು, ನಾನು ಶೇ.40 ಕಮಿಷನ್ ಹೊಡೆದಿಲ್ಲ, ಅಭ್ಯರ್ಥಿಗಳ ಟಿಕೆಟ್ ಅರ್ಜಿಗೆ ಹಣ ಪಡೆದಿದ್ದೇವೆ. ಕಟ್ಟಡ ನಿಧಿ ಎಂದು ಪಡೆದಿದ್ದೇವೆ.

ಸಾಮಾನ್ಯ ಅಭ್ಯರ್ಥಿಗಳಿಂದ 2 ಲಕ್ಷ ಮತ್ತು ಎಸ್‌ಸಿ/ಎಸ್‌ಟಿ ಅಭ್ಯರ್ಥಿಗಳಿಂದ 1 ಲಕ್ಷ ರೂಪಾಯಿ ಸಂಗ್ರಹಿಸುತ್ತಿದ್ದೇವೆ. ನಿಮ್ಮ ಶೇ.40 ಕಮಿಷನ್ ಗೆ ಹಲವು ಸಾಕ್ಷ್ಯಗಳು ಸಿಕ್ಕಿವೆ. ಮಾಡಾಳ್ ವಿರೂಪಾಕ್ಷಪ್ಪ ಪ್ರಕರಣವೇ ಇದಕ್ಕೆ ಸಾಕ್ಷಿ ಎಂದರು.

ವಿಜಯಪುರ, ಕಲ್ಯಾಣ ಕರ್ನಾಟಕ ಭಾಗದ ನಾಯಕರು ಬಿಜೆಪಿ ತೊರೆದು ಕಾಂಗ್ರೆಸ್ ಪಕ್ಷ ಸೇರುತ್ತಿದ್ದಾರೆ. ಕಾಂಗ್ರೆಸ್ ಪಕ್ಷದ ತತ್ವ, ಸಿದ್ಧಾಂತಗಳನ್ನು ಒಪ್ಪಿ ಪಕ್ಷಕ್ಕೆ ಸೇರ್ಪಡೆಯಾಗುತ್ತಿದ್ದಾರೆ. ಕಷ್ಟ ಕಾಲದಲ್ಲಿ ಬಿಜೆಪಿ ಯಾವ ರೀತಿ ನಡೆಸಿಕೊಳ್ಳುತ್ತಿದೆ ಎಂಬುದು ಗೊತ್ತಿದೆ. ಯಾರಾದರೂ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗುವ ಇಚ್ಛೆ ಇದ್ದರೇ ಜಿಲ್ಲಾ ಕಾಂಗ್ರೆಸ್ ಕಚೇ-ರಿಯಲ್ಲಿ ಸೇರ್ಪಡೆಯಾಗಿ. ನಮಗೆ ಶಕ್ತಿ ತುಂಬಿ. ಇಂದು ಬಿಜೆಪಿಯಿಂದ ಅರವಿಂದ್ ಚೌಹಾಣ್, ಮಾಜಿ ಶಾಸಕ ವಿಶ್ವನಾಥ ಪಾಟೀಲ್ ಹೆಬ್ಬಾರ್ ಸೇ-ರಿದಂತೆ ಹಲವು ನಾಯಕರು ಪಕ್ಷಕ್ಕೆ ಸೇರ್ಪಡೆಗೊಳ್ಳುತ್ತಿದ್ದಾರೆಂದು ತಿಳಿಸಿದರು.

ರಾಜ್ಯದಲ್ಲಿ ಮೇ 10 ರಂದು ಒಂದೇ ಹಂತದಲ್ಲಿ ಮತದಾನ ನಡೆಯಲಿದ್ದು, ಮೇ 13 ರಂದು ಫಲಿತಾಂಶ ಹೊರಬೀಳಲಿದೆ.

## ವೇಶ್ಯಾವಾಟಿಕೆಗೆ ಪ್ರೋತ್ಸಾಹಿಸುತ್ತಿದ್ದ ನಟಿ ಬಂಧನ



ಮುಂಬೈ: ಮಹಿಳಾ ರೂಪದರ್ಶಿಗಳನ್ನು ವೇಶ್ಯಾವಾಟಿಕೆಗೆ ಬಲವಂತಪಡಿಸುತ್ತಿದ್ದ ಆರೋಪದ ಮೇಲೆ ಭೋಜ್ಪುರಿ ನಟಿಯನ್ನು ಬಂಧಿಸಲಾಗಿದೆ. ಬಂಧಿತ ಆರೋಪಿ ನಟಿಯನ್ನು ಸುಮನ್ ಕುಮಾರಿ ಎಂದು ಗುರುತಿಸಲಾಗಿದೆ. ಈಕೆ ಕೆಲ ಮಹಿಳಾ ರೂಪದರ್ಶಿಗಳನ್ನು ಬಲವಂತವಾಗಿ ವೇಶ್ಯಾವಾಟಿ-ಕೆಯಲ್ಲಿ ತೊಡಗಿಸಿಕೊಳ್ಳುವಂತೆ ಪ್ರೋತ್ಸಾಹ ನೀಡುತ್ತಿದ್ದಳು ಎಂದು ಮುಂಬೈ ಅಪರಾಧ ವಿಭಾಗದ ಪೊಲೀಸರು ತಿಳಿಸಿದ್ದಾರೆ. ನಟಿಯ ಜಾಲದಲ್ಲಿ ಸಿಕ್ಕಿಬಿದ್ದಿದ್ದ ಮೂವರು ರೂಪದರ್ಶಿಯನ್ನು ರಕ್ಷಿಸಲಾಗಿದ್ದು, ನಂತರ ಸುಮನ್ ಕುಮಾರಿಯನ್ನು ಬಂಧಿಸಲಾಗಿದೆ ಎಂದು ಪೊಲೀಸರು ವಿವರಣೆ ನೀಡಿದ್ದಾರೆ. ನಟಿಯ ಜತೆ ಇನ್ನಿತರ ಕೆಲ ನಟ ನಟಿಯರ ಪಾತ್ರವಿರುವ ಬಗ್ಗೆ ಅನುಮಾನವಿದ್ದು, ಎಲ್ಲ ಕೋನಗಳಿಂದಲೂ ತನಿಖೆ ನಡೆಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

## ಬಿಜೆಪಿ ಮಹಿಳಾ ಉಪಾಧ್ಯಕ್ಷೆ ಕಾಂಗ್ರೆಸ್ ಸೇರ್ಪಡೆ



ವಿಜಯನಗರ: ಅರಣ್ಯ ಸಚಿವ ಆನಂದ್ ಸಿಂಗ್ ಸಹೋದರಿ, ರಾಜ್ಯ ಬಿಜೆಪಿ ಮಹಿಳಾ ಘಟಕದ ಉಪಾಧ್ಯಕ್ಷೆ ರಾಣಿ ಸಂಯುಕ್ತಾ ಕಾಂಗ್ರೆಸ್ ಗೆ ಸೇರ್ಪಡೆಯಾಗಿದ್ದಾರೆ. ಹೊಸಪೇಟೆ ಬಿಜೆಪಿ ಟಿಕೆಟ್ ಆಕಾಂಕ್ಷಿಯಾಗಿದ್ದ ರಾಣಿ ಸಂಯುಕ್ತಾ ಅವರಿಗೆ ಬಿಜೆಪಿ ಟಿಕೆಟ್ ಕೈತಪ್ಪಿದ ಹಿನ್ನೆಲೆಯಲ್ಲಿ ಪಕ್ಷದ ವಿರುದ್ಧವೇ ಸಿಡಿದೆದ್ದಿದ್ದು, ಕಾಂಗ್ರೆಸ್ ಸೇರ್ಪಡೆಯಾಗಿದ್ದಾರೆ.

ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಸಮ್ಮುಖದಲ್ಲಿ ಶನಿವಾರ ಆನಂದ್ ಸಿಂಗ್ ಸಹೋದರಿ ರಾಣಿ ಸಂಯುಕ್ತಾ ಕಾಂಗ್ರೆಸ್ ಗೆ ಸೇರ್ಪಡೆಯಾದರು.

## ನನ್ನನ್ನು ಸೋಲಿಸಲೆಂದೇ ವರುಣಾಕ್ಕೆ ಬಿ.ಎಲ್. ಸಂತೋಷ್ ಬಂದಿದ್ದಾರೆ ಎಂದ ಸಿದ್ದರಾಮಯ್ಯ



ಮೈಸೂರು: ನನ್ನನ್ನು ಹೇಗಾದರೂ ಮಾಡಿ ಸೋಲಿಸಬೇಕು ಎಂಬುದು ಬಿಜೆಪಿ ಉದ್ದೇಶ. ಅದಕ್ಕಾಗಿಯೇ ಬಿಜೆಪಿ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿಎಲ್ ಸಂತೋಷ್ ವರುಣಾ ವಿಧಾನಸಭೆ ಕ್ಷೇತ್ರಕ್ಕೆ ಬಂದಿದ್ದಾರೆ ಎಂದು ಕಾಂಗ್ರೆಸ್ ನಾಯಕ ಸಿದ್ದರಾಮಯ್ಯ ಹೇಳಿದ್ದಾರೆ.

ಮೈಸೂರು ಜಿಲ್ಲೆಯ ನಂಜನಗೂಡು ತಾಲೂಕಿನ ಸುತ್ತೂರು ಮಠದ ಹೆಲಿಪ್ಯಾಡ್ನಲ್ಲಿ ಶನಿವಾರ ಮಾತನಾಡಿದ ಅವರು, ವಿ. ಸೋಮಣ್ಣರನ್ನು ವರುಣಕ್ಕೆ ಕರೆತಂದು ನಿಲ್ಲಿಸಿರುವುದೇ ಸಂತೋಷ್. ಸಂತೋಷ್ ಆರ್‌ಎಸ್‌ಎಸ್ನ ವ್ಯಕ್ತಿ. ನನಗೆ ಅವರ ಬಗ್ಗೆ ವೈಯಕ್ತಿಕವಾಗಿ ದ್ವೇಷವಿಲ್ಲ. ನಾನು ಕೋಲಾರದಿಂದ ಸ್ಪರ್ಧಿಸುತ್ತೇನೆ ಎಂದಾಗ ಅಲ್ಲಿಗೂ ಬಂದಿದ್ದರು. ಈಗ ವರುಣಾ ಕ್ಷೇತ್ರಕ್ಕೆ ಬಂದು ನನ್ನ ವಿರುದ್ಧ ಕೆಲಸ ಮಾಡುತ್ತಿದ್ದಾರೆ. ಅವರು ದ್ವೇಷದ ರಾಜಕಾರಣ ಮಾಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಆದರೆ ನನ್ನನ್ನು ಸೋಲಿಸಬೇಕೆಂದು ಬರುವ ಇವರು ಯಾರೂ ವರುಣಾ ಕ್ಷೇತ್ರದ ಮತದಾರರಲ್ಲ. ನನ್ನನ್ನು ಗೆಲ್ಲಿಸುವುದು ವರುಣಾ ವಿಧಾನಸಭಾ ಕ್ಷೇತ್ರದ ಮತದಾರರು. 1 ಲಕ್ಷಕ್ಕೂ ಹೆಚ್ಚು ಮತಗಳ ಅಂತರದಿಂದ ನನ್ನನ್ನು ಗೆಲ್ಲಿಸುತ್ತಾರೆ ಎಂದು ಸಿದ್ದರಾಮಯ್ಯ ಹೇಳಿದ್ದಾರೆ. ಒಂದು ದಿನ ಮಾತ್ರ ವರುಣಾದಲ್ಲಿ ಪ್ರಚಾರ ಮಾಡುತ್ತೇನೆ ಎಂದು ನಾಮಪತ್ರ ಸಲ್ಲಿಕೆ ವೇಳೆ ಸಿದ್ದರಾಮಯ್ಯ ಹೇಳಿದ್ದರು. ಆದರೆ ಇದೀಗ ವರುಣಾ ಕ್ಷೇತ್ರಕ್ಕೆ ತೆರಳಿದ್ದು ಶನಿವಾರ ಇಡೀ ದಿನ ಕ್ಷೇತ್ರದ ವಿವಿಧೆಡೆ ಪ್ರಚಾರ ಕಾರ್ಯದಲ್ಲಿ ನಿರತರಾಗಿದ್ದಾರೆ.

## ಸಚಿವ ಮುರುಗೇಶ್ ನಿರಾಣಿ ಫೋಟೋ ಇರುವ 27ಕೆಜಿ ಬೆಳ್ಳಿ ದೀಪಗಳು ಜಪ್ತಿ



ಬಾಗಲಕೋಟೆ: ಮುಧೋಳ ವಿಧಾನಸಭಾ ಕ್ಷೇತ್ರದಲ್ಲಿ ಚುನಾವಣಾಧಿಕಾರಿಗಳು ಭರ್ಜರಿ ಬೇಟೆಯಾಡಿದ್ದಾರೆ. ಮತದಾರ-ರಿಗೆ ಹಂಚಲು ಇಟ್ಟಿದ್ದ ಬರೋಬ್ಬರಿ 27ಇರಿ 867 ಗ್ರಾಂ ಬೆಳ್ಳಿಯ ದೀಪಗಳನ್ನ ಜಪ್ತಿ ಮಾಡಲಾಗಿದೆ.

ಮುಧೋಳ ತಹಶೀಲ್ದಾರ್, ಚುನಾವಣಾ ಫ್ಲೈಯಿಂಗ್ ಸ್ಕ್ವಾಡ್, ಪೊಲೀಸರು ಜಂಟಿಯಾಗಿ ಈ ಕಾರ್ಯಾಚರಣೆ ನಡೆಸಿದ್ದಾರೆ. ದಾಳಿ ವೇಳೆ 21 ಲಕ್ಷ 45 ಸಾವಿರ ಮೌಲ್ಯದ ಒಟ್ಟು 27 ಕೆಜಿ 867 ಗ್ರಾಂ ಬೆಳ್ಳಿ ದೀಪಗಳನ್ನ ಜಪ್ತಿ ಮಾಡಲಾಗಿದೆ. ಬೆಳ್ಳಿ ದೀಪಗಳ ತಳಭಾಗದಲ್ಲಿ ಸಚಿವ ಮುರುಗೇಶ್ ನಿರಾಣಿ ಭಾವಚಿತ್ರಗಳು ಇವೆ.

ಮುರುಗೇಶ್ ನಿರಾಣಿ ಅವರು ಬೀಳಗಿ ವಿಧಾನಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ. ಒಟ್ಟು 10 ಬಾಕ್ಸ್‌ಗಳಲ್ಲಿ ಈ ಬೆಳ್ಳಿ ದೀಪಗಳನ್ನ ತುಂಬಿ ಇಡಲಾಗಿತ್ತು. ಚುನಾವಣಾ ಫ್ಲೈಯಿಂಗ್ ಸ್ಕ್ವಾಡ್ ಜೀವನ್ ಮಾನೆ ಅವರು ದೂರು ನೀಡಿದ್ದು, ಮುಧೋಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮುಧೋಳ ನಗರದ ನಿರಾಣಿ ಸಕ್ಕರೆ ಕಾರ್ಖಾನೆ ವಸತಿ ಗೃಹಗಳಲ್ಲಿ ಈ ಬಾಕ್ಸ್‌ಗಳನ್ನು ಸಂಗ್ರಹಿಸಿಟ್ಟಿರುವ ಆರೋಪ ಕೇಳಿ ಬಂದಿದೆ.

## ನಿವೃತ್ತ ಎಸ್ಪಿ ಪುತ್ರನಿಂದ ವ್ಯಾಪಾರಿ ಮೇಲೆ ಫೈರಿಂಗ್

ಮಡಿಕೇರಿ: ನಿವೃತ ಎಸ್ಪಿ ಪುತ್ರನೊಬ್ಬವ್ಯಾಪಾರಿ ಮೇಲೆ ರಿವಾಲ್ವಾರ್ನಿಂದ ಮೂರು ಸುತ್ತು ಗುಂಡು ಹಾರಿಸಿದ ಘಟನೆ ವಿರಾಜಪೇಟೆ ತಾಲ್ಲೂಕಿನ ಅಮ್ಮತಿ ಗ್ರಾಮದಲ್ಲಿ ನಡೆದಿದೆ.

ರಂಜನ್ ಚಿಣ್ಣಪ್ಪ ಎಂಬಾತ ಗುಂಡು ಹಾರಿಸಿದ ವ್ಯಕ್ತಿ. ಸಿದ್ದಾಪುರ ರಸ್ತೆಯ ವ್ಯಾಪಾರಿ ಕೆ.ಬೋಪಣ್ಣ ಅವರ ಮೇಲೆ ಮೂರು ಸುತ್ತು ಗುಂಡು ಹಾರಿಸಿದ್ದು, ಕೂದಲಳೆಯ ಅಂತರದಿಂದ ಪಾರಾಗಿದ್ದಾರೆ.

ರಂಜನ್ಗೆ ಸೇರಿದ ಮನೆಯ ಮುಂಭಾಗದ ಅಂಗಡಿ ಮಳಿಗೆಯಲ್ಲಿ ಬೊಪಣ್ಣ ಮತ್ತು ಆತನ ಪಾಲುದಾರರು ಅಡಿಕೆ ಮಂಡಿಯನ್ನು ನಡೆಸುತ್ತಿದ್ದರು. ಅಂಗಡಿ ಮಳಿಗೆಯನ್ನು ಖಾಲಿ ಮಾಡುವಂತೆ ಈ ಹಿಂದೆ ರಂಜನ್ ಸೂಚಿಸಿದ್ದ. ಇದಕ್ಕೆ ಬೋಪಣ್ಣ ಕಾಲಾವಕಾಶವನ್ನು ಕೇಳಿದ್ದರು ಎನ್ನಲಾಗಿದೆ. ಮತ್ತೆ ಪುನಃ ರಂಜನ್ ಬೊಪಣ್ಣರವರ ಅಂಗಡಿಗೆ ತೆರಳಿ ಖಾಲಿ ಮಾಡುವಂತೆ ಕೇಳಿಕೊಂಡಾಗ ಇಬ್ಬರ ನಡುವೆ ಮಾತಿನ ಚಕಮುಕಿ ನಡೆದಿದೆ. ಈ ವೇಳೆ ರಂಜನ್ ತನ್ನ ಬಳಿ ಇದ್ದ ರಿವಾಲ್ವಾರ್ ನಿಂದ ಏಕಾಏಕಿ ಗುಂಡು ಹಾರಿಸಿದ್ದಾನೆ.

ಬಳಿಕ ರಂಜನ್ ಮೇಲೆ ಕೂಡ ಹಲ್ಲೆ ನಡೆದಿದ್ದು, ಆತನನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಾಮ್ ರಾಜನ್ ಮತ್ತು ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ. ಘಟನೆ ಸಂಬಂಧಿಸಿದಂತೆ ವಿರಾಜಪೇಟೆ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## 70.560 ಲೀಟರ್ ಗೋವಾ ಮದ್ಯ ವಶ



ಕರ್ನಾಟಕ ವಿಧಾನಸಭೆ ಚುನಾವಣೆಯ ಮುಂಜಾಗ್ರತಾ ಕ್ರಮವಾಗಿ ಮಾನ್ಯ ಶ್ರೀ ಟಿ ನಾಗರಾಜಪ್ಪ ಅಬಕಾರಿ ಜಂಟಿ ಆಯುಕ್ತರು ಮಂಗಳೂರು ವಿಭಾಗ ಮಂಗಳೂರು. ಹಾಗೂ ಮಾನ್ಯ ಶ್ರೀ ಜಗದೀಶ ಎನ್ ಕೆ ಅಬಕಾರಿ ಉಪ ಆಯುಕ್ತರು ಉತ್ತರ ಕನ್ನಡ ಜಿಲ್ಲೆ ಕಾರವಾರರವರ ನಿರ್ದೇಶನದ ಮೇರೆಗೆ ಹಾಗೂ ಶ್ರೀ ಶಂಕರಗೌಡ ಪಾಟೀಲ ಮಾನ್ಯ ಅಬಕಾರಿ ಉಪ ಅಧೀಕ್ಷಕರು ಯಲ್ಲಾಪುರ ಉಪವಿಭಾಗ ಯಲ್ಲಾಪುರ ರವರ ಮಾರ್ಗದರ್ಶನ ಮೇರೆಗೆ ಚುನಾವಣೆಯ ನಿಮಿತ್ತ ಅಬಕಾರಿ ತನಿಖಾಠಾಣೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೊಲೀಸ ಸಿಬ್ಬಂದಿ ಹಾಗೂ ಎಸ್. ಎಸ್. ಟಿ ತಂಡದವರೊಂದಿಗೆ ಜಂ-ಟಿಯಾಗಿ ದಿನಾಂಕ: 22/04/ 2023 ರಂದು ಬೆಳಿಗ್ಗೆ 11:30 ಗಂಟೆ ಸಮಯಕ್ಕೆ ಜೋಯಿಡಾ ತಾಲೂಕಿನ ಅನಮೋಡ ಗ್ರಾಮದ ಅಬಕಾರಿ ತನಿಖಾ ಠಾಣೆಯ ಮುಂಭಾಗದಲ್ಲಿ ಖಚಿತ ಮಾಹಿತಿ ಮೇರೆಗೆ ವಾಹನ ತಪಾಸಣೆ ಮಾಡುತ್ತಿದ್ದಾಗ ಟಾಟಾ ಕಂಪನಿ ಲಾರಿ ವಾಹನ ನೋಂದಣಿ ಸಂಖ್ಯೆ KA 22 B 0738 ದರಲ್ಲಿ 70.560 ಲೀಟರ್ ಗೋವಾ ಮದ್ಯ ಸಾಗಾಟ ಮಾಡುತ್ತಿದ್ದ ಸಂತೋಷ ರಾಯಪ್ಪ ಚೌಗಲೆ .ಸಾಕೀನ:ನಂದಿಹಳ್ಳಿ, ತಾ/ಜಿ/ ಬೆಳಗಾವಿ. ಎಂಬುವವರನ್ನು ದಸ್ತಗಿರಿ ಮಾಡಲಾಗಿದ್ದು ವಾಹನ ಮಾಲೀಕನನ್ನು ಪತ್ತೆ ಹಚ್ಚಬೇಕಾಗಿದೆ. ಅಬಕಾರಿ ದಾಳಿಯಲ್ಲಿ ಅಬಕಾರಿ ಉಪನಿರೀಕ್ಷಕರಾದ ಶ್ರೀಕಾಂತ ಬಿ ಅಸೂದೆ, ಅಬಕಾರಿ ಪೇದೆಗಳಾದ, ಆರ್. ವಿ. ಭಟ್ಕಳ್, ಯು ಎನ್ ತುಳಜಿ. ಹಾಗೂ ಪೋಲಿಸ ಸಿಬ್ಬಂದಿಗಳಾದ ಶ್ರೀ ಬಿ.ಎಮ್.ದೊಡಮನಿ ಅನುಪಮಾ ಘೂಗರೆ .ಮತ್ತು ಎಸ್. ಎಸ್. ಟಿ ತಂಡದ ಶ್ರೀ ಪ್ರವೀಣ ಕುಲಕರ್ಣಿ, ವಿನೋದ ಗಾವಡೆ. ಪಾಲ್ಗೊಂಡಿ ರುತ್ತಾರೆ. ಅಬಕಾರಿ ಸ್ವತ್ತು ಹಾಗೂ ವಾಹನದ ಅಂ-ದಾಜು ಮೌಲ್ಯ 803536 /- ಆಗಿರುತ್ತದೆ-ಎಂದು ಅಂದಾಜಿಸಲಾಗಿದೆ. ತನಿಖೆಯನ್ನು ಮುಂದುವರಿಸಲಾಗಿದೆ.

# ವಿಧಾನಸಭಾ ಚುನಾವಣೆ: ಜಿಲ್ಲಾಡಳಿತದ ಕಾರ್ಯವೈಖರಿಗೆ ಪ್ರಶಂಸೆ



ಕೊಪ್ಪಳ: ಕರ್ನಾಟಕ ವಿಧಾನಸಭಾ ಸಾರ್ವತ್ರಿಕ ಚುನಾವಣೆ-2023ರ ಹಿನ್ನೆಲೆಯಲ್ಲಿ ಕೊಪ್ಪಳ ಜಿಲ್ಲೆಗೆ ಈಗಾಗಲೇ ಆಗಮಿಸಿ ಕಾರ್ಯಪ್ರವೃತ್ತರಾಗಿರುವ ಚುನಾವಣಾ ಸಾಮಾನ್ಯ ವೀಕ್ಷಕರು, ವೆಚ್ಚ ವೀಕ್ಷಕರು ಹಾಗೂ ಪೊಲೀಸ್ ವೀಕ್ಷಕರ ಸಮ್ಮುಖದಲ್ಲಿ, ಜಿಲ್ಲಾ ಚುನಾವಣಾಧಿಕಾರಿಗಳಾದ ಎಂ.ಸುಂದರೇಶಬಾಬು ಅವರ ಅಧ್ಯಕ್ಷತೆಯಲ್ಲಿ ಏಪ್ರೀಲ್ 21ರಂದು ವಿಶೇಷ ಸಭೆ ನಡೆಯಿತು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಚುನಾವಣಾ ಸಾಮಾನ್ಯ ವೀಕ್ಷಕರಾದ ಯಲಬುರ್ಗಾ ಮತ್ತು ಗಂಗಾವತಿ ವಿಧಾನಸಭಾ ಕ್ಷೇತ್ರಗಳ ವಿ.ಸಂಪತ್, ಕುಷ್ಟಗಿ ಮತ್ತು ಕನಕಗಿರಿ ವಿಧಾನಸಭಾ ಕ್ಷೇತ್ರಗಳ ಸ್ವಪ್ನಿಲ್ ಎಂ ನಾಯಕ, ಕೊಪ್ಪಳ ವಿಧಾನಸಭಾ ಕ್ಷೇತ್ರದ ಭಾನಾ ಪ್ರಕಾಶ ಯಾತರಾ, ಚುನಾವಣಾ ವೆಚ್ಚ ವೀಕ್ಷಕರಾದ ಕುಷ್ಟಗಿ ಮತ್ತು ಕನಕಗಿರಿ ವಿಧಾನಸಭಾ ಕ್ಷೇತ್ರಗಳ ಜಿ.ವಿವೇಕಾನಂದ, ಯಲಬುರ್ಗಾ ಮತ್ತು ಕೊಪ್ಪಳ ವಿಧಾನಸಭಾ ಕ್ಷೇತ್ರಗಳ ಎಸ್.ಆರ್.ನೆಡುಮಾರನ್, ಗಂಗಾವತಿ ವಿಧಾನಸಭಾ ಕ್ಷೇತ್ರದ ಡಾ ಎ.ವೆಂಕಟೇಶ ಬಾಬಾ, ಅದೇ ರೀತಿ ಜಿಲ್ಲೆಯ ಐದು ವಿಧಾನಸಭಾ ಕ್ಷೇತ್ರಗಳ ಪೊಲೀಸ್ ವೀಕ್ಷಕರಾದ ಮನೋಜ್ ತಿವಾರಿ ಅವರು ಸಭೆಯಲ್ಲಿ ಉಪಸ್ಥಿತ-ರಿದ್ದು, ಸ್ವೀಪ್ ಕಾರ್ಯಕ್ರಮಗಳು, ಮತಗಟ್ಟೆಗಳು ಮತ್ತು ಮತ ಎಣಿಕಾ ಕೇಂದ್ರದ ಸಿದ್ಧತೆ, ವಿವಿಧ ತಂಡಗಳ ಕಾರ್ಯವೈಖರಿ, ಮಾದರಿ ನೀತಿ ಸಂಹಿತೆ ಅನುಷ್ಠಾನ ಸೇರಿದಂತೆ ವಿವಿಧ ವಿಷಯಗಳ ಬಗ್ಗೆ ಸಮಗ್ರ ಮಾಹಿತಿ ಪಡೆದರು.

ಮಾದರಿ ನೀತಿ ಸಂಹಿತೆ ಅನುಷ್ಠಾನ ಮತ್ತು ಇತರೆ ಕಾರ್ಯಗಳನ್ನು ಜಿಲ್ಲಾಡಳಿತವು ಅಚ್ಚುಕಟ್ಟಾಗಿ ವ್ಯವಸ್ಥೆ ಮಾಡಿದೆ ಎಂದು ಚುನಾವಣಾ ವೀಕ್ಷಕರುಗಳು ಪ್ರಶಂಶಿಸಿದರು. ಚುನಾವಣೆಯನ್ನು ಮುಕ್ತ, ನ್ಯಾಯಸಮ್ಮತ ಮತ್ತು ಶಾಂತ-ರೀತಿಯಿಂದ ನಡೆಸಲು ಅಗತ್ಯ ಕ್ರಮವಹಿಸಿ ಯಶಸ್ವಿಗೊಳಿಸಲು ಸಲಹೆ ಮಾಡಿದರು.

ಕಳೆದ ಚುನಾವಣೆಗಳಲ್ಲಿ ಕಡಿಮೆ ಮತದಾನವಾದ ಮತಗಟ್ಟೆಗಳನ್ನು ಗುರುತಿಸಿ ಆ ಮತಗಟ್ಟೆ ವ್ಯಾಪ್ತಿಯಲ್ಲಿ ಮತದಾರರಿಗೆ ಮತದಾನದ ಕು-ರಿತು ಅರಿವು ಮೂಡಿಸಲು ಕಾರ್ಯಕ್ರಮ ವೇಳಾಪಟ್ಟಿ ರೂಪಿಸಲಾಗಿದ್ದು, ವೇಳಾಪಟ್ಟಿಯಂತೆ ವಿವಿಧ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಇದೇ ರೀತಿ ನಗರ ಪ್ರದೇಶಗಳಲ್ಲಿ ಸಹ ಕಡಿಮೆ ಪ್ರಮಾಣದಲ್ಲಿ ಮತದಾನವಾದ ವಾರ್ಡಗಳಲ್ಲಿ ಮತದಾರರಲ್ಲಿ ಮತದಾನದ ಕುರಿತು ಆಸಕ್ತಿ ಮೂಡಿಸಲು ವಿವಿಧ ಕಾರ್ಯಕ್ರಮಗಳನ್ನು ಕೈಗೊಳ್ಳಲು ಕ್ರಮವಹಿಸುವುದಾಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಸ್ವೀಪ್ ನೋಡಲ್ ಅಧಿಕಾ-ರಿಗಳಾದ ರಾಹುಲ್ ರತ್ನಂ ಪಾಂಡೆಯ ಅವರು ತಿಳಿಸಿದರು.

ಚುನಾವಣೆ ಘೋಷಣೆಯಾದ ನಂತರ ಮಾದರಿ ನೀತಿ ಸಂಹಿತೆ ತಂಡಗಳು, ಪೊಲೀಸ್ ಇಲಾಖೆ ಹಾಗೂ ಅಬಕಾರಿ ಇಲಾಖೆಯಿಂದ ಉತ್ತಮ ರೀತಿಯಲ್ಲಿ ಕಾರ್ಯಾಚರಣೆ ನಡೆದಿದೆ. ಮಾರ್ಚ 29ರಿಂದ ಏಪ್ರಿಲ್ 21ರವರೆಗೆ 73,65,400 ರೂ.ನಗದು, 42,40,957.07 ರೂ. ಮೌಲ್ಯದ ಮದ್ಯೆ, 7,40,000 ರೂ.ಮೌಲ್ಯದ ಬಂಗಾರ, 1,36,500 ರೂ.ಮೌಲ್ಯದ 2.395 ಕೆ.ಜಿ ಮಾದಕ ದ್ರವ್ಯ, 13,61,100 ರೂ. ಮೌಲ್ಯದ ವಿವಿಧ ಸಾಮಗ್ರಿಗಳನ್ನು ವಶಕ್ಕೆ ಪಡೆಯಲಾಗಿದೆ. ಚುನಾವಣೆ ಸಂಬಂಧ 24 ಎಫ್.ಐ.ಆರ್‌ಗಳನ್ನು ದಾಖಲಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಯಶೋಧಾ ವಂಟಗೋಡಿ ಅವರು ಸಭೆಗೆ ತಿಳಿಸಿದರು.

ಭಾರತ ಚುನಾವಣಾ ಆಯೋಗದ ನಿರ್ದೇಶನದನ್ವಯ ವಿಕಲಚೇತನ ಮತದಾರರರು, ಕೋವಿಡ್-19 ಸೋಂಕಿತ ಮತದಾರರು ಮತ್ತು 80+ ವಯಸ್ಸಿನ ಮತದಾರರಿಗೆ ಹಾಗೂ ಅಗತ್ಯ ಸೇವೆಗಳಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ ಸಿಬ್ಬಂದಿಗೆ ಅಂಚೆ ಮತಪತ್ರದ ವ್ಯವಸ್ಥೆ ಕಲ್ಪಿಸಿದ್ದು, ಈವರೆಗೂ ಜಿಲ್ಲೆಯಲ್ಲಿ 6,269 ಮತದಾರರಿಂದ ಅಂಚೆ ಮತಪತ್ರ ಒದಗಿಸಲು ಅರ್ಜಿಗಳು ಸ್ವೀಕೃತವಾಗಿರುತ್ತವೆ ಎಂದು ಅಪರ ಜಿಲ್ಲಾಧಿಕಾರಿಗಳು ಸಭೆಗೆ ತಿಳಿಸಿದರು.

ಕೊಪ್ಪಳ ಜಿಲ್ಲೆಯಲ್ಲಿ ಏಪ್ರೀಲ್ 10ರವರೆಗೆ ನೋಂದಣಿಗಾಗಿ ಸ್ವೀಕೃತಿಯಾದ ಅರ್ಜಿಗಳನ್ನು ನಿಯಮಾನುಸಾರ ವಿಲೇಗೊಳಿಸಿದ ನಂತರ ಐದು ವಿಧಾನಸಭಾ ಕ್ಷೇತ್ರಗಳಲ್ಲಿ 5,66,381 ಪುರುಷರು, 5,70,407 ಮಹಿಳೆಯರು ಮತ್ತು 50 ಇತರೆ ಸೇರಿ ಒಟ್ಟು 11,36,838 ನೋಂದಾಯಿತ ಮತದಾರರಿದ್ದಾರೆ. ಮತದಾರರ ಪಟ್ಟಿಗಳ ಪರಿಷ್ಕರಣಾ ಅವಧಿಯಿಂದ ಏಪ್ರೀಲ್ 10ರವರೆಗೆ ನೋಂದಾಯಿತ ಮತದಾರರಿಗೆ ಹಾಗೂ ತಿದ್ದುಪಡಿ, ಸ್ಥಳಾಂತರ ಮತ್ತು ಮತದಾರರ ಗುರುತಿನ ಚೀಟಿ ನೀಡಲು ಅರ್ಜಿ ಸಲ್ಲಿಸಿದ 76,070 ಮತದಾರರಿಗೆ ಭಾವಚಿತ್ರವಿರುವ ಮತದಾರರ ಗುರುತಿನ ಚೀಟಿ ನೀಡಲು ಕ್ರಮವಹಿಸಲಾಗಿದ್ದು, ಈಗಾಗಲೇ 68,363 ಮತದಾರ-ರಿಗೆ ಶೀಘ್ರ ಅಂಚೆಯ ಮೂಲಕ ರವಾನಿಸಲಾಗಿದೆ ಎಂದು ಮತದಾರರ ನೋಂದಣಾಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಚುನಾವಣೆ ಸಂಬಂಧ ಎಲ್ಲಾ 1,322 ಮತಗಟ್ಟೆಗಳಲ್ಲಿ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ಶೌಚಾಲಯ, ವಿದ್ಯುತ್ ವ್ಯವಸ್ಥೆ, ವಿಕಲಚೇತನರಿಗೆ ರ್ಯಾಂಪ್ ವ್ಯವಸ್ಥೆ ಕಲ್ಪಿಸಲಾಗಿದೆ. ಕುಷ್ಟಗಿ ಕ್ಷೇತ್ರದಲ್ಲಿ ಸ್ವೀಕೃತಿಯಾದ 37 ನಾಮಪತ್ರಗಳ ಪೈಕಿ 34 ನಾಮಪತ್ರಗಳನ್ನು ಅಂಗೀಕ-ರಿಸಲಾಗಿದ್ದು 3 ನಾಮಪತ್ರಗಳು ತಿರಸ್ಕೃತವಾಗಿವೆ. ಕನಕಗಿರಿ ಕ್ಷೇತ್ರದಲ್ಲಿ ಸ್ವೀಕೃತಿಯಾದ 32 ನಾಮಪತ್ರಗಳ ಪೈಕಿ 24 ನಾಮಪತ್ರಗಳನ್ನು ಅಂಗೀಕ-ರಿಸಲಾಗಿದ್ದು 8 ನಾಮಪತ್ರಗಳು ತಿರಸ್ಕೃತವಾಗಿವೆ. ಗಂಗಾವತಿ ಕ್ಷೇತ್ರದಲ್ಲಿ ಸ್ವೀಕೃತಿಯಾದ 33 ನಾಮಪತ್ರಗಳ ಪೈಕಿ 31 ನಾಮಪತ್ರಗಳನ್ನು ಅಂಗೀಕ-ರಿಸಲಾಗಿದ್ದು 2 ನಾಮಪತ್ರಗಳು ತಿರಸ್ಕೃತವಾಗಿವೆ. ಯಲಬುರ್ಗಾ ಕ್ಷೇತ್ರದಲ್ಲಿ ಸ್ವೀಕೃತಿಯಾದ 25 ನಾಮಪತ್ರಗಳ ಪೈಕಿ 23 ನಾಮಪತ್ರಗಳನ್ನು ಅಂಗೀಕರಿಸಲಾಗಿದ್ದು 2 ನಾಮಪತ್ರಗಳು ತಿರಸ್ಕೃತವಾಗಿವೆ. ಕೊಪ್ಪಳ ವಿಧಾನಸಭಾ ಕ್ಷೇತ್ರದಲ್ಲಿ ಸ್ವೀಕೃತಿಯಾದ 22 ನಾಮಪತ್ರಗಳ ಪೈಕಿ 21 ನಾಮಪತ್ರಗಳು ಅಂಗೀಕರಿಸಲಾಗಿದ್ದು 1 ನಾಮಪತ್ರ ತಿರಸ್ಕೃತವಾಗಿದೆ ಎಂದು ಆಯಾ ವಿಧಾನಸಭಾ ಕ್ಷೇತ್ರಗಳ ಚುನಾವಣಾಧಿಕಾರಿಗಳು ನಾಮಪತ್ರಗಳ ಪರಿಶೀಲನೆಯ ನಂತರದ ಮಾಹಿತಿಯನ್ನು ಸಭೆಗೆ ತಿಳಿಸಿದರು.

ಕೊಪ್ಪಳ ಜಿಲ್ಲೆಯಲ್ಲಿ ಸಿ-ವಿಜಿಲ್ ಆಪ್ ಮೂಲಕ ಮಾದರಿ ನೀತಿ ಸಂಹಿತೆ ಉಲ್ಲಂಘನೆ ಕುರಿತು ಐದು ವಿಧಾನಸಭಾ ಕ್ಷೇತ್ರಗಳಲ್ಲಿ 108 ದೂರುಗಳು ಸ್ವೀಕೃತವಾಗಿದ್ದು ಎಲ್ಲವನ್ನು ವಿಲೇವಾರಿ ಮಾಡಲಾಗಿದೆ ಎಂದು ಸಿ-ವಿಜಿಲ್ ನೋಡಲ್ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಈ ವೇಳೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾ-ರಿಗಳಾದ ಎಂ.ಸುಂದರೇಶಬಾಬು ಅವರು ಮಾತನಾಡಿ, ಆಯಾ ವಿಧಾನಸಭಾ ಕ್ಷೇತ್ರಗಳಲ್ಲಿ ಪ್ರಚಾರ ಕಾರ್ಯಕ್ರಮಗಳು, ರ್ಯಾಲಿ ಮತ್ತು ಇತರೆ ಕಾರ್ಯಕ್ರಮಗಳ ಮೇಲೆ ನಿಗಾವಹಿಸಲು ಮತ್ತು ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಅಗತ್ಯ ಕ್ರಮವಹಿಸಲು ಆಯಾ ಕ್ಷೇತ್ರಗಳ ಚುನಾವಣಾಧಿಕಾರಿಗಳಿಗೆ ಸೂಚಿಸಿದರು. ಚುನಾವಣಾ ಪ್ರಚಾರ ಕಾರ್ಯಕ್ರಮಗಳಿಗೆ ರಾಜಕೀಯ ಪಕ್ಷಗಳು, ಅಭ್ಯರ್ಥಿಗಳು ಅನುಮತಿ ಕೋರಿ ಅರ್ಜಿ ಸಲ್ಲಿಸಿದಲ್ಲಿ ನಿಗದಿತ ಅವಧಿಯೊಳಗಡೆ ನಿಯಮಾನುಸಾರ ಪರಿಶೀಲಿಸಿ, ಅನುಮತಿ ನೀಡಲು ಕ್ರಮಕೈಗೊಳ್ಳಲು ಚುನಾವಣಾಧಿಕಾ-ರಿಗಳಿಗೆ ಸೂಚಿಸಿದರು.

ಮಾದರಿ ನೀತಿ ಸಂಹಿತೆ ತಂಡಗಳಾದ ಫ್ಲೈಯಿಂಗ್ ಸ್ಕ್ವಾಡ್ ತಂಡಗಳು ಚೆಕ್‌ಪೋಸ್ಟ್ಗಳನ್ನು ಚುರುಕುಗೊಳಿಸಲು ಮತ್ತು ಹಣ, ಮದ್ಯೆ ಮತ್ತು ಮತದಾರರಿಗೆ ಆಮಿಷ ಒಡ್ಡುವಂತಹ ಸಾಮಗ್ರಿಗಳ ಸಾಗಣೆ ಹಾಗೂ ಹಂಚಿಕೆ ಮೇಲೆ ನಿಗಾವಹಿಸಲು ಸೂಚಿಸಿದರು. ಸಭೆಯಲ್ಲಿ ವಿವಿಧ ಸಮಿತಿಗಳ ನೋಡಲ್ ಅಧಿಕಾರಿಗಳು ಮತ್ತು ಇನ್ನೀತರರು ಇದ್ದರು.

## ವಿಧಾನಸಭೆ ಚುನಾವಣೆ: ಸಾಮಾನ್ಯ ವೀಕ್ಷಕರ ಆಗಮನ; ಸಾರ್ವಜನಿಕ ಭೇಟಿಗೆ ಲಭ್ಯ

ಬೆಳಗಾವಿ: ಕರ್ನಾಟಕ ವಿಧಾನಸಭೆ ಸಾರ್ವತ್ರಿಕ ಚುನಾವಣೆ–2023 ರ ಹಿನ್ನೆಲೆಯಲ್ಲಿ ಬೆಳಗಾವಿ ಜಿಲ್ಲೆಯ ಹದಿನೆಂಟು ವಿಧಾನಸಭಾ ಮತಕ್ಷೇತ್ರಗಳಿಗೆ ಚುನಾವಣಾ ಆಯೋಗದಿಂದ ನೇಮಿಸಲಾಗಿರುವ ಸಾಮಾನ್ಯ ಪರಿವೀಕ್ಷಕರು ಜಿಲ್ಲೆಗೆ ಆಗಮಿಸಿದ್ದು, ಸಾರ್ವಜನಿಕರ ಭೇಟಿಗೆ ಲಭ್ಯವಿರುತ್ತಾರೆ.

**ಮತಕ್ಷೇತ್ರಗಳು ಹಾಗೂ ಚುನಾವಣಾ ಸಾಮಾನ್ಯ ವೀಕ್ಷಕರ(ಜನರಲ್ ಅಬ್ಸರ್ವರ್) ವಿವರ:**

* 01–ನಿಪ್ಪಾಣಿ ಹಾಗೂ 02–ಚಿಕ್ಕೋಡಿ–ಸದಲಗಾ ಕ್ಷೇತ್ರ: ಧನಂಜಯಸಿಂಗ್ ಭದೋರಿಯಾ, ಐಎಎಸ್
ಮೊಬೈಲ್ ಸಂಖ್ಯೆ– 8296825758,
ಭೇಟಿಯ ಸಮಯ: ಬೆಳಿಗ್ಗೆ 10 ರಿಂದ 11 ಗಂಟೆವರೆಗೆ
ಸ್ಥಳ: ಪಿಡಬ್ಲ್ಯೂಡಿ ಐ.ಬಿ ಸರ್ಕ್ಯೂಟ್ ಹೌಸ್ ನಿಪ್ಪಾಣಿ, ವಿ.ಐ.ಪಿ ಸೂಟ್. ನಂ–1, ಪಿಡಬ್ಲ್ಯೂಡಿ ಐ.ಬಿ. ಚಿಕ್ಕೋಡಿ ವಿ.ಐ.ಪಿ ಸೂಟ್. ನಂ–1 ರಲ್ಲಿ ಲಭ್ಯವಿರುತ್ತಾರೆ.

* 03–ಅಥಣಿ ಮತ್ತು 04–ಕಾಗವಾಡ ಕ್ಷೇತ್ರ: ನವೀನಕುಮಾರ್ ಜಿ.ಎಸ್. (ಐ.ಎ.ಎಸ್)
ಮೊಬೈಲ್ ಸಂಖ್ಯೆ: 7204913637
ಭೇಟಿಯ ಸಮಯ: ಬೆಳಿಗ್ಗೆ 10 ರಿಂದ 11 ಗಂಟೆವರೆಗೆ
ಸ್ಥಳ: ಪಿಡಬ್ಲ್ಯೂಡಿ ಐ.ಬಿ ಅಥಣಿ ವಿ.ಐ.ಪಿ ಸೂಟ್. ನಂ–1, ಪಿಡಬ್ಲ್ಯೂಡಿ ಐ.ಬಿ. ಕಾಗವಾಡ ವಿ.ಐ.ಪಿ ಸೂಟ್. ನಂ–1 ರಲ್ಲಿ ಲಭ್ಯವಿರುತ್ತಾರೆ.

* 05–ಕುಡಚಿ(ಎಸ್‌ಸಿ) ಮತ್ತು 06–ರಾಯಬಾಗ(ಎಸ್‌ಸಿ) ಕ್ಷೇತ್ರ: ಡಾ॥ ಆದಿತ್ಯ ಪ್ರಕಾಶ (ಐ.ಎ.ಎಸ್)
ಮೊಬೈಲ್ ಸಂಖ್ಯೆ: 8792175859
ಭೇಟಿಯ ಸಮಯ: ಬೆಳಿಗ್ಗೆ 10 ರಿಂದ 11 ಗಂಟೆವರೆಗೆ
ಸ್ಥಳ: ಪಿಡಬ್ಲ್ಯೂಡಿ ಐ.ಬಿ ಕುಡಚಿ ವಿ.ಐ.ಪಿ ಸೂಟ್. ನಂ–1, ಪಿಡಬ್ಲ್ಯೂಡಿ ಐ.ಬಿ. ರಾಯಬಾಗ ವಿ.ಐ.ಪಿ ಸೂಟ್. ನಂ–1 ರಲ್ಲಿ ಲಭ್ಯವಿರುತ್ತಾರೆ.

* 07–ಹುಕ್ಕೇರಿ ಮತ್ತು 08–ಅರಭಾವಿ ಕ್ಷೇತ್ರ: ಬಿ.ಜಾನ್ ತ್ಲಂಗ್‌ಟಿನ್‌ಖುಮಾ (ಐ.ಎ.ಎಸ್)
ಮೊಬೈಲ್ ಸಂಖ್ಯೆ: 8792498028
ಭೇಟಿಯ ಸಮಯ: ಬೆಳಿಗ್ಗೆ 10 ರಿಂದ 11 ಗಂಟೆವರೆಗೆ
ಸ್ಥಳ: ಹುನ್ನುರ ಐ.ಬಿ ವಿ.ಐ.ಪಿ ಸೂಟ್. ನಂ–1, ಪಿಡಬ್ಲ್ಯೂಡಿ ಐ.ಬಿ. ಅರಭಾವಿ ಸೂಟ್. ನಂ–1 ರಲ್ಲಿ ಲಭ್ಯವಿರುತ್ತಾರೆ.

* 09–ಗೋಕಾಕ ಮತ್ತು 10–ಯಮಕನಮರಡಿ(ಎಸ್‌ಟಿ) ಕ್ಷೇತ್ರ: ಎಸ್ ಮಾಲಾರ್‌ವಿಜ್ಞ (ಐ.ಎ.ಎಸ್)
ಮೊಬೈಲ್ ಸಂಖ್ಯೆ: 8904214849
ಭೇಟಿಯ ಸಮಯ: ಬೆಳಿಗ್ಗೆ 10 ರಿಂದ 11 ಗಂಟೆವರೆಗೆ
ಸ್ಥಳ: ಪಿಡಬ್ಲ್ಯೂಡಿ ಐ.ಬಿ. ಗೋಕಾಕ ವಿ.ಐ.ಪಿ ಸೂಟ್. ನಂ–1, ಪಿಡಬ್ಲ್ಯೂಡಿ ಐ.ಬಿ. ಸಂಕೇಶ್ವರ ವಿ.ಐ.ಪಿ ಸೂಟ್. ನಂ–1 ರಲ್ಲಿ ಲಭ್ಯವಿರುತ್ತಾರೆ.

* 11–ಬೆಳಗಾವಿ ಉತ್ತರ ಮತ್ತು 12–ಬೆಳಗಾವಿ ದಕ್ಷಿಣ ಕ್ಷೇತ್ರ: ಪಂಕಜ ಯಾದವ (ಐ.ಎ.ಎಸ್)
ಮೊಬೈಲ್ ಸಂಖ್ಯೆ: 7899419697
ಭೇಟಿಯ ಸಮಯ: ಬೆಳಿಗ್ಗೆ 10 ರಿಂದ 11 ಗಂಟೆವರೆಗೆ
ಸ್ಥಳ: ಹೊಸ ಸರ್ಕ್ಯೂಟ್ ಹೌಸ್ ಬೆಳಗಾವಿ ಕೊಠಡಿ ಸಂಖ್ಯೆ–1 ರಲ್ಲಿ ಲಭ್ಯವಿರುತ್ತಾರೆ.

* 13–ಬೆಳಗಾವಿ ಗ್ರಾಮೀಣ ಮತ್ತು 14–ಖಾನಾಪೂರ ಕ್ಷೇತ್ರ: ಕುನಾಲ ಸಿಲ್ಕು (ಐ.ಎ.ಎಸ್)
ಮೊಬೈಲ್ ಸಂಖ್ಯೆ: 8105465859
ಭೇಟಿಯ ಸಮಯ: ಬೆಳಿಗ್ಗೆ 10 ರಿಂದ 11 ಗಂಟೆವರೆಗೆ
ಸ್ಥಳ: ಪಿಡಬ್ಲ್ಯೂಡಿ ಹೊಸ ಸರ್ಕ್ಯೂಟ್ ಹೌಸ್ ಕೊಠಡಿ ಸಂಖ್ಯೆ–4 ಬೆಳಗಾವಿ, ಪಿಡಬ್ಲ್ಯೂಡಿ ಐ.ಬಿ. ಖಾನಾಪೂರ ಕೊಠಡಿ ಸಂಖ್ಯೆ–1 ರಲ್ಲಿ ಲಭ್ಯವಿರುತ್ತಾರೆ.

* 15–ಕಿತ್ತೂರ ಮತ್ತು 16–ಬೈಲಹೊಂಗಲ ಕ್ಷೇತ್ರ: ಅಮೀತ ಕುಮಾರ (ಐ.ಎ.ಎಸ್)
ಮೊಬೈಲ್ ಸಂಖ್ಯೆ: 7204906869
ಭೇಟಿಯ ಸಮಯ: ಬೆಳಿಗ್ಗೆ 10 ರಿಂದ 11 ಗಂಟೆವರೆಗೆ
ಸ್ಥಳ: ಪಿಡಬ್ಲ್ಯೂಡಿ ಐ.ಬಿ. ಡೊಂಬರಕೊಪ್ಪ ಹೊಸ ಬಿಎಲ್‌ಡಿಜಿ ವಿಆಯ್‌ಪಿ ಕೊಠಡಿ, ಪಿಡಬ್ಲ್ಯೂಡಿ ಐ.ಬಿ. ವಿಆಯ್‌ಪಿ ಕೊಠಡಿ, ಬೈಲಹೊಂಗಲ ರಲ್ಲಿ ಲಭ್ಯವಿರುತ್ತಾರೆ.

* 17–ಸವದತ್ತಿ ಯಲ್ಲಮ್ಮ ಮತ್ತು 18–ರಾಮದುರ್ಗ ಕ್ಷೇತ್ರ: ರತ್ನಾಕರ ಝಾ (ಐ.ಎ.ಎಸ್)
ಮೊಬೈಲ್ ಸಂಖ್ಯೆ: 9035153007
ಭೇಟಿಯ ಸಮಯ: ಬೆಳಿಗ್ಗೆ 10 ರಿಂದ 11 ಗಂಟೆವರೆಗೆ
ಸ್ಥಳ: ಪಿಡಬ್ಲ್ಯೂಡಿ ಐ.ಬಿ. ಸವದತ್ತಿ, ಪಿಡಬ್ಲ್ಯೂಡಿ ಐ.ಬಿ. ರಾಮದುರ್ಗ ರಲ್ಲಿ ಲಭ್ಯವಿರುತ್ತಾರೆ

ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ಮಾಹಿತಿ ಅಥ ವಾ ದೂರುಗಳಿದ್ದರೆ ಸಾರ್ವಜನಿಕರು ಸಂಬಂಧಿಸಿದ ಮತಕ್ಷೇತ್ರದ ಚುನಾವಣಾ ವೀಕ್ಷಕರಿಗೆ ಸಲ್ಲಿಸಬಹುದು ಎಂದು ಬೆಳಗಾವಿ ಜಿಲ್ಲಾ ಚುನಾವಣಾಧಿಕಾರಿಗಳು ಮತ್ತು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ತವ್ಯ ಲೋಪ: ನಾಲ್ವರು ಅಧಿಕಾರಿಗಳು ಸಸ್ಪೆಂಡ್

ವಿಜಯಪುರ: ವಿಜಯಪುರ ಜಿಲ್ಲೆಯ ಮುದ್ದೇಬಿಹಾಳದಲ್ಲಿ ಚುನಾವಣಾ ಕರ್ತವ್ಯ ಲೋಪ ಹಿನ್ನೆಲೆ ವಿವಿಧ ಇಲಾಖೆಗಳ ನಾಲ್ವರು ಅಧಿಕಾರಿಗಳನ್ನು ಜಿಲ್ಲಾ ಚುನಾವಣಾಧಿಕಾರಿ ಅಮಾನತುಗೊಳಿಸಿ ಆದೇಶ ಹೊರಡಿಸಿದ್ದಾರೆ.

ಜಿಲ್ಲಾಧಿಕಾರಿ ವಿಜಯಮಹಾಂತೇಶ ದಾನಮ್ಮನವರ್ ಸೇವೆಯಿಂದ ಅಮಾನತುಗೊಳಿಸಿ ಆದೇಶಿಸಿದ್ದಾರೆ.

ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯ ಎಸ್‌ಡಿಸಿ ಸಂಜೀವ ಲಮಾಣಿ, ಸಹಾಯಕ ತೋಟಗಾರಿಕೆ ಅಧಿಕಾರಿ ಶಿವನಿಂಗಪ್ಪ ಕುಂಬಾರ, ಪಂಚಾಯತ್ ರಾಜ್ ಇಂಜನೀಯರಿಂಗ್ ಉಪ ವಿಭಾಗದ ಕಿರಿಯ ಅಭಿಯಂತರ ವಿಜಯಕುಮಾರ ನಾಯಕ, ಕೋಳೂರು ಗ್ರಾಪಂ ಪಿಡಿಓ ರಂಗರಾಜು ಬಿ.ಆರ್ ಅಮಾನತುಗೊಂಡವರು.

ಬಿಜೆಪಿ ಕಾರ್ಯಕರ್ತನೊಬ್ಬ ಹಣ ಹಂಚುತ್ತಿರುವ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿತ್ತು. ಇವರು ಚುನಾವಣಾ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ತಡೆಯಲು ರಚಿಸಲಾದ ಫ್ಲೈಯಿಂಗ್ ಸ್ಕ್ವಾಡ್ ತಂಡ–6 ಮತ್ತು ಮಧ್ಯಾಹ್ನ 2 ರಿಂದ ರಾತ್ರಿ 8ರವರೆಗಿನ ಫ್ಲೈಯಿಂಗ್ ಸ್ಕ್ವಾಡ್ ತಂಡ–4ರ ಸದಸ್ಯರಾಗಿದ್ದರು.

ಮುದ್ದೇಬಿಹಾಳ ವಿಧಾನಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ಚಂದ್ರಕಾಂತ ಪವಾರ ಕಾರ್ಯಾಲಯಕ್ಕೆ ಕರೆಸಿ ವಿಡಿಯೋ ವೈರಲ್ ಆದ ಬಗ್ಗೆ ಎಫ್‌ಐಆರ್ ದಾಖಲಿಸಲು ತಿಳಿಸಿದರು. ಇವರು ಎಫ್‌ಐಆರ್ ದಾಖಲಿಸಲು ನಿರಾಕರಿಸಿದ್ದರು.

ಹೀಗಾಗಿ ಇವರು ಚುನಾವಣಾ ಕರ್ತವ್ಯ ನಿಭಾಯಿಸಲು ನಿರಾಕರಿಸಿದ್ದರಿಂದ ಇವರ ಮೇಲೆ ಸೂಕ್ತ ಕ್ರಮಕ್ಕೆ ಚುನಾವಣಾಧಿಕಾರಿ ಪವಾರ ಶಿಫಾರಸು ಮಾಡಿದ್ದರು.

# ಸಾವಳಗಿ ಗ್ರಾಮದಲ್ಲಿ ರಂಜಾನ್ ಹಬ್ಬವನ್ನು ಅತಿ ವಿಜೃಂಭಣೆಯಿಂದ ಆಚರಣೆ

ಸಾವಳಗಿ: ಗೋಕಾಕ ತಾಲೂಕಿನ ಸಾವಳಗಿ ಗ್ರಾಮದಲ್ಲಿ ರಂಜಾನ್ ಹಬ್ಬವನ್ನು ಅತಿ ವಿಜೃಂಭಣೆಯಿಂದ ಆಚರಣೆ ಮಾಡಿದರು.



ಇದೆ ಸಮಯದಲ್ಲಿ ಮುಸ್ಲಿಂ ಸಮುದಾಯದ ಮುಖಂಡರು ಮಾತನಾಡಿ. ಮುಸ್ಲಿಮರ ಪವಿತ್ರ ಹಾಗೂ ದೊಡ್ಡ ಹಬ್ಬಗಳಲ್ಲಿ ರಂಜಾನ್ ಮೊದಲನೆಯದು. ಈ ಹಬ್ಬವು ಹೆಚ್ಚಿನ ಪ್ರಾಮುಖ್ಯತೆಯನ್ನು ಹೊಂದಿದೆ. ಪ್ರವಾದಿ ಮುಹಮ್ಮದ್ ಈ ತಿಂಗಳು ಪವಿತ್ರ ಕುರಾನ್‌ನ ಬಹಿರಂಗ ಪಡಿಸಿದರು ಎಂದು ನಂಬಲಾಗಿದೆ.

ರಂಜಾನ್ ತಿಂಗಳಲ್ಲಿ ರೋಜಾ ಅಥ–ವಾ ಉಪವಾಸಕ್ಕೆ ಅದರದೇ ಆದ ಮಹತ್ವವಿದೆ. ಸೂರ್ಯೋದಯಕ್ಕೆ ಮುಂಚಿನ ತಿಂಡಿಯನ್ನು ಸೋಹರ್ ಎಂದು ಕರೆಯಲಾಗುತ್ತದೆ ಮತ್ತು ಸೂರ್ಯಾಸ್ತದ ನಂತರ ಉಪವಾಸವನ್ನು ಮುಕ್ತಾಯಗೊಳಿಸುವ ಪ್ರಕ್ರಿಯೆಯನ್ನು ಇಫ್ತಾರ್ ಎಂದು ಕರೆಯಲಾಗುತ್ತದೆ. ಇನ್ನು ರಂಜಾನ್ ಸಮಯದಲ್ಲಿ ಕೇವಲ ದೇಹಕ್ಕೆ ಮಾತ್ರವಲ್ಲ ಮನಸ್ಸಿಗೂ ಉಪವಾಸ ಮಾಡಿಸಲಾಗುತ್ತದೆ. ಮುಸ್ಲಿಮರು ಉಪವಾಸದ ವೇಳೆ ಸಿಗರೇಟ್, ಮದ್ಯ, ತಂಬಾಕು ಸೇವನೆ, ಬೆಳೆಸುವುದನ್ನೂ ಕೂಡ ತಪ್ಪಿಸುತ್ತಾರೆ. ಏಕೆಂದರೆ ಉಪವಾಸದ ಸಮಯದಲ್ಲಿ ಇಂಥ ಚಟುವಟಿಕೆಗಳನ್ನು ಪಾಪ ಎಂದು ಪರಿಗಣಿಸಲಾಗುತ್ತದೆ. ರಂಜಾನ್ ತಿಂಗಳಲ್ಲಿ ಮುಸ್ಲಿಮರು ತಮ್ಮನ್ನು ಅಧ್ಯಾತ್ಮ ಪ್ರವೃತ್ತಿಗೆ ಅರ್ಪಿಸಿಕೊಳ್ಳುತ್ತಾರೆ.

ಈದ್ ಹಬ್ಬವು ಚಂದ್ರನನ್ನು ನೋಡಿದ ನಂತರವೇ ಪ್ರಾರಂಭವಾಗುತ್ತದೆ. ಈದ್ ಉಲ್–ಫಿತರ್ ಉಪವಾಸದ ಅಂತ್ಯವನ್ನು ಸೂಚಿಸುತ್ತದೆ. ಪ್ರವಾದಿ ಮೊಹಮ್ಮದ್ ಅವರ ಬೋಧನೆಗಳ ದಾಖಲೆಯಾದ ಸುನ್ನತ್ ಅನ್ನು ಅನುಸರಿಸಿ, ಹಬ್ಬದಂದು ಮುಸ್ಲಿಮರು ಮುಂಜಾನೆ ಬೇಗನೆ ಎದ್ದು ತಮ್ಮ ಸಲಾತ್ ಉಲ್–ಫಜ್ರ್ (ದೈನಂದಿನ ಪ್ರಾರ್ಥನೆಗಳು) ಸಲ್ಲಿಸಿ, ಸ್ನಾನ ಮಾಡಿ ಹೊಸ ಬಟ್ಟೆ ತೊಟ್ಟು ಇತ್ತರ್ (ಸುಗಂಧ ದ್ರವ್ಯ) ಧರಿಸುತ್ತಾರೆ. ಬಳಿಕ ಹಬ್ಬದ ಪ್ರಾರ್ಥನೆಗೆ ಹೋಗುವ ಮುನ್ನ ಮನೆಯಲ್ಲಿ ತಯಾರಿಸಿದ ಸಿಹಿ ತಿಂಡಿಯನ್ನು ಸೇವಿಸುತ್ತಾರೆ. ಹುಡುಗರು, ಯುವಕರು ಸೇರಿದಂತೆ ಈದ್ಗ ಬಳಿ ಎಲ್ಲಾ ಮುಸ್ಲಿಮರು ಒಟ್ಟಿಗೆ ಸೇರಿ ಹಬ್ಬದ ವಿಶೇಷ ಸಭೆಯಲ್ಲಿ ಪ್ರಾರ್ಥನೆಗಳನ್ನು ಮಾಡುತ್ತಾರೆ. ಆದ್ರೆ ಹೆಣ್ಣು ಮಕ್ಕಳು, ಮಹಿಳೆಯರು ಮನೆಯಲ್ಲೇ ಹಬ್ಬನ ನಮಾಜ್ ಮಾಡುತ್ತಾರೆ.

ಜನರು ಬೆಳಿಗ್ಗೆ ಸಿಹಿ ತಿನ್ನುವ ಮೂಲಕ ದಿನವನ್ನು ಪ್ರಾರಂಭಿಸಿದರೆ ಅದನ್ನು ನಿಜವಾಗಿಯೂ ಮಂಗಳಕರವೆಂದು ಪರಿಗಣಿಸಲಾಗುತ್ತದೆ. ಆದ್ದರಿಂದ ಈ ಈದ್ ಅನ್ನು ಮೀಥಿ ಈದ್ ಎಂದು ಕರೆಯಲಾಗುತ್ತದೆ. ಫಿರ್ಣಿ ಮತ್ತು ಖೀರ್, ಶೀರ್ ಕುರ್ಮಾ ಮುಂತಾದ ಖಾದ್ಯಗಳನ್ನು ಎಲ್ಲಾ ಮನೆಗಳಲ್ಲಿ ತಯಾರಿಸಲಾಗುತ್ತದೆ. ಹೆಂಗಸರೂ ಕೈಗೆ ಗೋರಂಟಿ ಹಚ್ಚಿಕೊಂಡು ಹೊಸ ಬಟ್ಟೆ ಧರಿಸುತ್ತಾರೆ. ಈ ದಿನದಂದು ಮಕ್ಕಳು ತಮ್ಮ ಕುಟುಂಬದ ಹಿರಿಯ–ರಿಂದ ಈದಿ (ಹಣ) ಪಡೆಯುತ್ತಾರೆ, ಇದು ಅವರಿಗೆ ಹಬ್ಬವನ್ನು ಹೆಚ್ಚು ವಿಶೇಷವಾಗಿಸುತ್ತದೆ. ತಿಂಗಳ ಉಪವಾಸದ ಅಂತ್ಯವನ್ನು ಗುರುತಿಸಲು, ಮನೆಗಳಲ್ಲಿ ಅದ್ದೂರಿ ಹಬ್ಬಗಳನ್ನು ಆಯೋಜಿಸಲಾಗುತ್ತದೆ.

## ಲೋಕಾಯುಕ್ತ ಬಲೆಗೆ ಬಿದ್ದ ಪಿಎಸ್‌ಐ ಹಾಗೂ ಸಿಬ್ಬಂದಿ



ದಾವಣಗೆರೆ : ದಾವಣಗೆರೆ ನಗರದಲ್ಲಿ ನಾಪತ್ತೆಯಾದ ಮಹಿಳೆಯನ್ನು ಹುಡುಕಿಕೊಡಲು ಲಂಚಕ್ಕೆ ಬೇಡಿಕೆ ಇಟ್ಟಿದ್ದ ಪಿಎಸ್‌ಐ ಮತ್ತು ಸಿಬ್ಬಂದಿ ಲೋಕಾಯುಕ್ತ ಪೊಲೀಸರ ಕೈಗೆ ರೆಡ್‌ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ.

ದಾವಣಗೆರೆ ಗ್ರಾಮಾಂತರ ಪೊಲೀಸ್ ಠಾಣೆಯ ಎಸ್ಐ ಶಿವನಗೌಡ ಹಾಗೂ ಪಿಸಿ ಲಿಂಗರಾಜ್ ನಾಯ್ಕ ರೆಡ್‌ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ.

ಇವರು ಮಹಿಳೆಯನ್ನು ಹುಡುಕಿ ಕೊಡಲು ಆಕೆಯ ಪತಿಗೆ ಪಿಎಸ್‌ಐ 50 ಸಾವಿರ ರೂ. ಬೇಡಿಕೆ ಇಟ್ಟಿದ್ದರು. ಈ ಬಗ್ಗೆ ಬಂದ ದೂರಿನ ಅನ್ವಯ ತನಿಖೆ ಪ್ರಾರಂಭಿಸಿದ ದಾವಣಗೆರೆ ಲೋಕಾಯುಕ್ತ ಎಸ್ಪಿ ಎಂಎಸ್ ಕೌಲಾಪುರೆ ನೇತೃತ್ವದಲ್ಲಿ ಇನ್ಸ್‌ಪೆಕ್ಟರ್‌ಗಳಾದ ರಾಷ್ಟ್ರಪತಿ ಹಾಗೂ ಅಂಜನೇಯ ಅವರು ಇಬ್ಬರನ್ನು ಬಂಧಿಸಿದ್ದಾರೆ.

ಚಿತ್ರದುರ್ಗ ಮೂಲದ ರಂಗಸ್ವಾಮಿ ಎಂಬವರ ಪತ್ನಿ ನಾಪತ್ತೆಯಾಗಿದ್ದು, ಚಿತ್ರದುರ್ಗ ಮಹಿಳಾ ಠಾಣೆಯಲ್ಲಿ ನಾಪತ್ತೆ ಪ್ರಕಣ ದಾಖಲಾಗಿದೆ. ಈ ನಡುವೆ ಆಕೆ ದಾವಣಗೆರೆಯಲ್ಲಿ ಇರುವ ಬಗ್ಗೆ ಮಾಹಿತಿ ತಿಳಿದುಬಂದ ಹಿನ್ನೆಲೆ ದಾವಣಗೆರೆ ಗ್ರಾಮಾಂತರ ಪೊಲೀಸ್ ಠಾಣೆಗೆ ಮಾಹಿತಿ ನೀಡಲಾಗಿದೆ. ಆದರೆ ಠಾಣಾ ಪಿಎಸ್‌ಐ ಮತ್ತು ಶಿವನಗೌಡ ಹಾಗೂ ಪಿಸಿ ಲಿಂಗರಾಜ್ ನಾಯ್ಕ ಅವರು 50 ಸಾವಿರ ರೂ. ಲಂಚಕ್ಕೆ ಬೇಡಿಕೆ ಇಟ್ಟಿದ್ದಾರೆ.

## ಮಾರಣಾಂತಿಕ ಹಲ್ಲೆ: ದುಷ್ಕರ್ಮಿಗಳು ಪರಾರಿ

ನಿಪನ್ಯಾಳ: ಮಾಮಾನ ಬುಲೆಟ್ ಗಾಡಿ ಹಾಡಿನ ಗಾಯಕನ ಮೇಲೆ ನಾ ಡ್ರೈವರ್ ನನ್ನ ಲವರ್ ಎಂಬ ಹಾಡಿನ ಗಾಯಕನಿಂದ ಮಾರಣಾಂತಿಕ ಹಲ್ಲೆ.

ನಿಪ್ಪಾಣಿ ಮುದೋಳ ರಾಜ್ಯ ಹೆದ್ದಾರಿ ಮೇಲೆ ತಡರಾತ್ರಿ ಖ್ಯಾತ ಜಾನಪದ ಗಾಯಕ ಪರಸು ಕೂಲೂರ ಹತ್ಯೆಗೆ ಹಾಕಿದ್ರಾ ಸ್ಕೆಚ್! ಹೌದು ರಾಯಬಾಗ ತಾಲೂಕಿನ ಮಂಟೂರ ಗ್ರಾಮದಲ್ಲಿ ಬೀರೇಶ್ವರ ಜಾತ್ರಾ ನಿಮಿತ್ಯ ಜಾನಪದ, ಚಿತ್ರ ರಸಮಂಜರಿ(ಆರ್ಕೆಸ್ಟ್ರಾ) ಕಾರ್ಯಕ್ರಮ ಒಂದನ್ನು ಏರ್ಪಡಿಸಲಾಗಿತ್ತು.



ಈ ಕಾರ್ಯಕ್ರಮಕ್ಕೆ ಖ್ಯಾತ ಜಾನಪದ ಗಾಯಕ ಪರಶು ಕೊಲುರ ಹಾಗೂ ತಂಡ ಆಗಮಿಸಿತ್ತು. ಪರಶು ಕೋಲೂರ ಈ ಕಾರ್ಯಕ್ರಮಕ್ಕೆ ಆಗಮಿಸಿದ್ದನ್ನು ಮೊದಲೇ ತಿಳಿದು ದುಷ್ಕರ್ಮಿಗಳು ಉದ್ದೇಶ ಪೂರ್ವಕವಾಗಿ ಕಾರ್ಯಕ್ರಮ ಮುಗಿಸಿ ಊರಿಗೆ ಹೊರಡುವ ಸಮಯದಲ್ಲಿ ಮಹಾಲಿಂಗಪುರ ಚಿಕ್ಕೋಡಿಯ ಮುಖ್ಯರಸ್ತೆಯಲ್ಲಿ ಬರುವ ರೇಷ್ಮೆ ಫಾರ್ಮ್ ಹತ್ತಿರ ಪರಸು ಕೊಲೂರ ಕಾರನ್ನ ಬುಲೆರೋ ಕಾರೊಂದು ಹಿಂಬಾಲಿಸಿ ಬಂದು ಪರಸು ಕೊಲುರ ಕಾರನ್ನು ತೆಗ್ಗಿಗೆ ತಳ್ಳಿ ಕಾರಿನಲ್ಲಿದ್ದ ಓರ್ವ ಗಾಯಕಿ ಹೆಣ್ಣುಮಗಳನ್ನು ಸೇರಿ ಒಟ್ಟು ನಾಲ್ಕು ಜನರನ್ನು ದುಷ್ಕರ್ಮಿಗಳು ಮನಬಂದಂತೆ ತಳಿಸಿ ಪರಾ–ರಿಯಾಗಿರುತ್ತಾರೆ.

ಮೂಲತಃ ಪರಸು ಕೊಲಾರ ಎಂಬ ಗಾಯಕ ತಂಡವು ಮಂಟೂರ ಗ್ರಾಮದಲ್ಲಿನ ಕಾರ್ಯಕ್ರಮ ಮುಗಿಸಿಕೊಂಡು ಮರಳಿ ಸ್ವಗ್ರಾಮಕ್ಕೆ ಹೊಗುವಾಗ ಮಾಳು ನಿಪನ್ಯಾಳ ಎಂಬ ಕೀಚಕ ಪಾಪಿ ಪರಸು ಕೊಲಾರ ಗಾಯಕರ ಹಾಗೂ ಗಾಯಕಿರ ಮೇಲೆ ಮಾರಣಾಂತಿಕ ಹಲ್ಲೆ ಮಾಡಿ ಕಾರು ನುಜ್ಜು ಗುಜ್ಜು ಮಾಡಿ ಪರಾರಿಯಾಗಿದ್ದಾರೆ.

ಹ' ಲ್' ಗ' ಉ ಳ' ಗ ಾ ದ' ಗಾಯಕರು ಹೆದರಿ ಅಥ–'ಣಿ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡಯುತ್ತಿದ್ದಾರೆ. ಈ ನಿಟ್ಟಿನಲ್ಲಿ ರಾಯಬಾಗ ಪೋಲಿಸರು ಸ್ಥಳಕ್ಕೆ ಭೆಟಿ ನೀಡಿ ಪರಿಶಿಲನೆ ನಡೆಸಿದ್ದಾರೆ.

ಇನ್ನೂ ಗಾಯಕರಲ್ಲಿ ಹಾಡುವ ಮೂಲಕ ನಾ ಹೆಚ್ಚು ನೀ ಹೆಚ್ಚು ಎಂಬ ದ್ವೇಷವನ್ನ ಇಟ್ಟುಕೊಟ್ಟಿಂದ ಹಾಗಾಗಿ ನನ್ನ ವ್ಯಾಪ್ತಿಯ ಗ್ರಾಮದ ಆಜು ಬಾಜು ಹಳ್ಳಿಗೆ ನನ್ನ ವಿರೋಧಿಯನ್ನ ಕರೆಯಿಸಿ ಹಾಡನ್ನು ಹಾಡಿಸಿದ್ದಾರೆ ಎಂಬ ದೂರುಗಳು ಗ್ರಾಮಸ್ಥರ ಬಾಯಲ್ಲಿ ಕೇಳಿ ಬರುತ್ತಿವೆ.

ಇನ್ನೂ ಕಾನೂನಿನ ಪ್ರಕಾರ ಕ್ರಮ ಕೈಗೊಂಡು ಹಲ್ಲೆ ಮಾಡಿದವರ ವಿರುದ್ಧ ಸೂಕ್ತ ಕ್ರಮ ಕೈಗೊಂಡು ಜೈಲಿಗಟ್ಟ ಬೆಕಿದೆ.

## ನೈಸರ್ಗಿಕ ಪರಿಸರ ಉಳಿಸಿ ಬೆಳೆಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ

ದಾವಣಗೆರೆ: ಪ್ಲಾಸ್ಟಿಕ್ ಬಳಕೆಯಿಂದ ನಮ್ಮ ಜೀವನಕ್ಕೆ ಮಾರಕ, ಮಾನವನ ಜೊತೆಯಲ್ಲಿ ಪ್ರಾಣಿಗಳಿಗೂ ತಮ್ಮ ಜೀವಕ್ಕೆ ಆತಂಕ ತರುವ ಪರಿಸ್ಥಿತಿ ಮೂಡಿ ಬರುತ್ತದೆ. ನಾವುಗಳು ಯಾವುದೇ ಸರ್ಕಾರಕ್ಕೆ, ಮಹಾನಗರ ಪಾಲಿಕೆ, ಇಲಾಖೆಗಳ ಮೇಲೆ ಅವಲಂಬಿತರಾಗದೇ ನಮ್ಮ ನಮ್ಮ ಮನೆಗಳ ಸ್ವಚ್ಛತೆ ಕಾಪಾಡುವುದು ನಮ್ಮ ಮನೆಗಳ ಸುತ್ತಮುತ್ತ ನೈಸರ್ಗಿಕ ಪರಿಸರ ಉಳಿಸಿ, ಬೆಳೆಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ ಎಂದು ಹಿರಿಯ ಪರಿಸರವಾದಿ ಸ್ತ್ರೀರೋಗ ತಜ್ಞೆ ಡಾ॥ ಶಾಂತಾ ಶ್ರೀಪಾದ್ ಭಟ್ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.


ದಾವಣಗೆರೆಯ ಕಲಾಕುಂಚ ಸಾಂಸ್ಕೃತಿ–ಕ ಸಂಸ್ಥೆಯ ಆಶ್ರಯದಲ್ಲಿ ಸಂಸ್ಥೆಯ ಕಛೇರಿ ಸಭಾಂಗಣದಲ್ಲಿ ನಿನ್ನೆ ನಡೆದ "ಕಸದ–ರಿಂದ ರಸ" ಕಾರ್ಯಾಗಾರಕ್ಕೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಹಿಳೆಯ–ರಿಗೆ ಪ್ರತಿ ಹಂತದಲ್ಲೂ ಮನೆಯ ಅನವಶ್ಯಕ ವಸ್ತುಗಳನ್ನು ಹೇಗೆ ಸದ್ಬಳಕೆ ಮಾಡುವ ರೀತಿ–ನೀತಿಯನ್ನು ಮನದಟ್ಟು ಮಾಡಿ ಉಪನ್ಯಾಸ ನೀಡಿದರು.



ಸಂಸ್ಥೆಯ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈಯವರು 'ಮನೆ ಅಡುಗೆ' ವಿಷಯ ಕುರಿತು ಕಾರ್ಯಾಗಾರ ನಡೆಸಿ, ಅಡುಗೆ ಮನೆಯಲ್ಲಿ ಇರುವ ಎಲ್ಲಾ ಪರಿಕರದೊಂದಿಗೆ ಸುಲಭವಾಗಿ ನಮ್ಮ ಅನಾರೋಗ್ಯದ ಸಮಸ್ಯೆಗಳ ಪರಿಹಾರದ ಬಗ್ಗೆ ತಿಳಿ ಹೇಳಿದರು. ಸಮಾರಂಭದ ಅಧ್ಯಕ್ಷತೆಯನ್ನು ಕಲಾಕುಂಚದ ಅಧ್ಯಕ್ಷರಾದ ಕೆ.ಹೆಚ್. ಮಂಜುನಾಥ್ ಮಾತನಾಡಿ ಪ್ರಸ್ತುತ ವಾತಾವರಣದಲ್ಲಿ ಇಂತಹ ಕಾರ್ಯಾಗಾರ ಸೂಕ್ತ ನಿರಂತರವಾಗಿ ಈ ಸಂಸ್ಥೆ ಹೊಸ ಹೊಸ ಪರಿಕಲ್ಪನೆಯೊಂದಿಗೆ ವಿವಿಧ ಕಾರ್ಯಕ್ರಮ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಶ್ರೀಮತಿ ಜಯಶ್ರೀರಾಜು ರವರ ಪ್ರಾರ್ಥ–ನೆಯೊಂದಿಗೆ ಪ್ರಾರಂಭವಾದ ಸಮಾರಂಭಕ್ಕೆ ಶ್ರೀಮತಿ ಸಂಧ್ಯಾ ಶ್ರೀನಿವಾಸ್ ಸ್ವಾಗತಿಸಿದರು. ಕಲಾಕುಂಚ ಸಿದ್ದವೀರಪ್ಪ ಬಡಾವಣೆ ಶಾಖೆ ಅಧ್ಯಕ್ಷರಾದ ಶ್ರೀಮತಿ ಲಲಿತಾ ಕಲ್ಲೇಶ್ ಅಚ್ಚುಕಟ್ಟಾಗಿ ಕಾರ್ಯಕ್ರಮ ನಿರೂಪಿಸಿದರು.

## ಮದುವೆಗೆಂದು ಹೊರಟಿದ್ದ ಬಸ್ ಗೆ ಹೆದ್ದಾರಿಯಲ್ಲಿ ಬೆಂಕಿ



ಮಂಡ್ಯ : ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನ ಗಣಂಗೂರಿ ಬಳಿಯ ಮೈಸೂರು ಹೆದ್ದಾರಿಯಲ್ಲಿ ಮದುವೆ ಕಾರ್ಯಕ್ರಮ ಕ್ಕೆಂದು ಹೊರಟಿದ್ದ ಬಸ್ ಗೆ ಬೆಂಕಿ ತಗುಲಿದೆ.

ಬಸ್ ನೋಡ ನೋಡುತ್ತಿದ್ದಂತೆ ಹೊತ್ತಿ ಉರಿದಿದ. ಅದೃಷ್ಟವಶಾತ್ ಯಾರಿಗೂ ತೊಂದರೆಯಾಗಿಲ್ಲ, ಯಾವುದೇ ಪ್ರಾಣಾಪಾಯವಾಗಿಲ್ಲ.

ಆ ಬಸ್ ನಲ್ಲಿ ಸುಮಾರು 30 ಜನ ಪ್ರಯಾಣಿಸುತ್ತಿದ್ದರು. ಬಸ್ ನಲ್ಲಿ ಸ್ವಲ್ಪ ಹೊಗೆ ಕಾಣಿಸಿಕೊಂಡಿದೆ. ಜನ ಬಸ್ ನಿಲ್ಲಿಸಲು ಹೇಳಿ, ಕೆಳಗೆ ಇಳಿದಿದ್ದಾರೆ. ಜನ ಇಳಿದ ತಕ್ಷಣ ಬಸ್ ಗೆ ಮತ್ತಷ್ಟು ಬೆಂಕಿ ಹೊತ್ತಿಕೊಂಡಿದೆ. ಅದೃಷ್ಟಕ್ಕೆ ಎಲ್ಲರು ಬಸ್ ನಿಂದ ಕೆಳಗೆ ಇಳಿದಿದ್ದರು.

ಮದುವೆಯಿದ್ದ ಹಿನ್ನೆಲೆ ಬೆಂಗಳೂರಿನಿಂದ ಖಾಸಗಿ ಬಸ್ ನಲ್ಲಿ ಹೊರಟಿದ್ದರು.

ತಕ್ಷಣ ಅಗ್ನಿಶಾಮಕ ದಳಕ್ಕೆ ಕರೆ ಮಾಡಿ ಸುದ್ದಿ ತಿಳಿಸಿದ್ದಾರೆ. ಸದ್ಯ ಬೆಂಕಿ ನಂದಿಸುವ ಕೆಲಸ ನಡೆದಿದ್ದು, ಬಸ್ ಸಂಪೂರ್ಣ ಭಸ್ಮವಾಗಿದೆ.

## ಒಂದೇ ಕುಟುಂಬದ ಐವರ ಸಾವು

ರಾಮನಗರ : ರಾಮನಗರ ಜಿಲ್ಲೆ ಚನ್ನಪಟ್ಟಣ ತಾಲೂಕಿನ ಲಂಬಾಣಿ ತಾಂಡಾ ಬಳಿ ಬೆಂಗಳೂರು ಮೈಸೂರು ಎಕ್ಸ್‌ಪ್ರೆಸ್ ವೇನಲ್ಲಿ ಶನಿವಾರ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಐವರು ಮೃತಪಟ್ಟ ದುರ್ಘಟನೆ ಸಂಭವಿಸಿದೆ.

ಅಪಘಾತದಲ್ಲಿ ಮೃತಪಟ್ಟವರು ರವಿ ಪೂಜಾರ್ (45), ಲಕ್ಷ್ಮೀ ಪೂಜಾರ್(40), ಇಂಚರಾ ಪೂಜಾರ್ (15), ಶಾಂತಲಾ ಪೂಜಾರ್(10), ಸಿರಿ ಪೂಜಾರ್ (3) ಎಂದು ತಿಳಿದು ಬಂದಿದೆ.

ಬೆಂಗಳೂರಿನಿಂದ ಮೈಸೂರಿಗೆ ತೆರಳುತ್ತಿದ್ದ ಆಲ್ಟೊ ಕಾರು ಟೈರ್ ಸ್ಫೋಟಗೊಂಡು ನಿಯಂತ್ರಣತಪ್ಪಿ ಡಿವೈಡರ್ ದಾಟಿ ಪಕ್ಕದ ರಸ್ತೆಯಲ್ಲಿ ಮೈಸೂರಿನಿಂದ ಬೆಂಗಳೂರಿಗೆ ಬರುತ್ತಿದ್ದ ಇನ್ನೋವಾ ಕಾರಿಗೆ ಡಿಕ್ಕಿ ಹೊಡೆದಿದೆ. ಡಿಕ್ಕಿ ರಭಸಕ್ಕೆ ಆಲ್ಟೋ ಕಾರಿನಲ್ಲಿದ್ದ ಮೂವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

## ಬೆಸ್ಟ್ ಪಿ.ಯು ಕಾಲೇಜ ತಾಳಿಕೋಟಿ

ತಾಳಿಕೋಟೆ: ತಾಲೂಕಿನ ಮಿಣ–ಜಗಿಕ್ರಾಸ್‌ದಲ್ಲಿರುವ ಶ್ರೀ ಘನಮಠೇಶ್ವರ ಶಿಕ್ಷಣ ಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ ಬೆಸ್ಟ ಪಿ.ಯುಕಾಲೇಜ2022–23 ನೇ ಸಾಲಿನ ದ್ವಿತೀಯ ಪಿ.ಯು.ಸಿ ಯಲ್ಲಿ 100 ಕ್ಕೆ 100 ರಷ್ಟು ಫಲಿತಾಂಶ ಪಡೆದಿದೆ.

ವಿಜ್ಞಾನ ವಿಭಾಗದಲ್ಲಿ ಪರೀಕ್ಷೆಗೆ ಹಾಜರಾದಒಟ್ಟು99 ವಿದ್ಯಾರ್ಥಿಗಳಲ್ಲಿ 58 ವಿದ್ಯಾರ್ಥಿಗಳು ಡಿಸ್ಟಿಂಕ್ಷನ, 41 ವಿದ್ಯಾರ್ಥಿಗಳು ಪ್ರಥಮದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ.

ಕುಮಾರಿ. ಗಿರಿಜಾ(ಶೇ.96.33) ಪ್ರಥ–'ಮ,ಕುಮಾರಿ. ದೀಪಾ ಬಿರಾದಾರ (ಶೇ.95.84) ದ್ವಿತೀಯ, ಕುಮಾರಿ. ಭಾವನಾ ದೊಡಮನಿ ಮತ್ತು ಕುಮಾರ ಅಬುಬಕರ ಮುಲ್ಲಾ(ಶೇ.95) ತೃತೀಯ ಸ್ಥಾನ ಪಡೆದು ಕೊಂಡಿದ್ದಾರೆ.

ಭೌತಶಾಸ್ತ್ರದಲ್ಲಿ16 ವಿದ್ಯಾರ್ಥಿಗಳು, ರಸಾಯನ ಶಾಸ್ತ್ರದಲ್ಲಿ 08 ವಿದ್ಯಾರ್ಥಿಗಳು, 100ಕ್ಕೆ 100 ಅಂಕ ಪಡೆದಿದ್ದಾರೆ.

ವಾಣಿಜ್ಯ ವಿಭಾಗದಲ್ಲಿ ಪರೀಕ್ಷೆಗೆ ಹಾಜರಾದ ಒಟ್ಟು16 ವಿದ್ಯಾರ್ಥಿಗಳಲ್ಲಿ 02 ವಿದ್ಯಾರ್ಥಿಗಳು ಡಿಸ್ಟಿಂಕ್ಷನ, 12 ವಿದ್ಯಾರ್ಥಿಗಳು ಪ್ರಥಮದರ್ಜೆ ಹಾಗೂ 02 ವಿದ್ಯಾರ್ಥಿಗಳು ದ್ವಿತೀಯದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ.

ಕುಮಾರಿ. ಸೌಜನ್ಯ ಪಡಶೆಟ್ಟಿ (ಶೇ.91.5) ಪ್ರಥಮ, ಕುಮಾರಿ. ಜಗದೇವಿ ಕನ್ನೂರ (ಶೇ.88) ದ್ವಿತೀಯಸ್ಥಾನ ಪಡೆದು ಕೊಂಡಿದ್ದಾರೆ.

ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯಅಧ್ಯಕ್ಷರು ಡಾ॥ ಎಸ್. ಎಮ್.ಸಜ್ಜನ, ಪ್ರಧಾನ ಕಾರ್ಯದರ್ಶಿ ಶ್ರೀ ವಿವೇಕಾನಂದ ಸಜ್ಜನ, ಪ್ರಾಚಾರ್ಯರು ಶ್ರೀ ಬಿ.ಆದಿಶೇಖರರೆಡ್ಡಿ ಮತ್ತು ಶಿಕ್ಷಕ ಸಿಬ್ಬಂದಿ ಹರ್ಷ ವ್ಯಕ್ತಪಡಿಸಿದ್ದಾರೆ.

# ದೇವರ ಹಿಪ್ಪರಗಿ ಕ್ಷೇತ್ರ ಸ್ವಾಭಿಮಾನಿಗಳ ಬೀಡು: ರಾಜುಗೌಡ

ತಾಳಿಕೋಟೆ: ಈ ದೇವರ ಹಿಪ್ಪರಗಿ ಮತಕ್ಷೇತ್ರದ ಜನರು ಚುನಾವಣೆಯಲ್ಲಿ ಹಣ ಹೆಂಡಕ್ಕೆ ಆಮೀಷ ಪಟ್ಟವರಲ್ಲಾ ಸ್ವಾಭಿಮಾನಿಗಳಾಗಿದ್ದಾರೆ ಹೀಗಾಗಿ ನನಗೆ ಕ್ಷೇತ್ರದಲ್ಲಿ ಅಭೂತಪೂರ್ವ ಜನರ ಬೆಂಬಲ ದೊರಕಲು ಕಾರಣವಾಗಿದೆ ಎರಡು ಭಾರಿ ಸೋಲುಂಡಿದ್ದೇನೆ ಈ ಭಾರಿ ಚುನಾವಣೆಯಲ್ಲಿ ನನಗೆ ಆಶೀರ್ವದಿಸಿ ಆಯ್ಕೆಗೊಳಿಸಬೇಕೆಂದು ದೇವರ ಹಿಪ್ಪರಗಿ ಮತಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ರಾಜುಗೌಡ ಪಾಟೀಲ(ಕು.ಸಾಲವಾಡಗಿ) ಅವರು ಹೇಳಿದರು.



ತಾಲೂಕಿನ ಬೇಕಿನಾಳ ಗ್ರಾಮದಲ್ಲಿ ವಿಧಾನ ಸಭಾ ಚುನಾವಣೆಯ ನಿಮಿತ್ಯ ಜೆಡಿಎಸ್ ಪಕ್ಷದ ವತಿಯಿಂದ ಆಯೋಜಿಸಲಾದ ಮನೆ ಮನೆಗೆ ತೆರಳಿ ಪ್ರಚಾರದ ಕಾರ್ಯಕ್ರಮದ ನಂತರ ನಡೆದ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ನೇತೃತ್ವವಹಿಸಿ ಮಾತನಾಡುತ್ತಿದ್ದ ಅವರು ಮೋಸದ ರಾಜಕಾರಣ ಜನರಬಳಿ ನಡಿಯೋಲ್ಲಾ ಸತ್ಯದ ರಾಜಕಾರಣ–ಕ್ಕೆ ಗೆಲುವು ಖಂಡಿತಾ ಇದೆ ಅಧಿಕಾರ ಅನುಭವಿಸಿದ ಬಿಜೆಪಿ ಶಾಸಕರು 5 ವರ್ಷ ಕಾಲಹರಣ ರಾಜಕಾರಣ ಮಾಡಿದ್ದಾರೆ ಕ್ಷೇತ್ರದಲ್ಲಿ ಹೇಳಿಕೊಳ್ಳುವಂತಹ ಯಾವುದೇ ಅಭಿವೃದ್ದಿ ಕಾರ್ಯಗಳು ನಡೆದಿಲ್ಲಾ ಗ್ರಾಮೀಣ ಪ್ರದೇಶಗಳಿಗೆ ಉತ್ತಮ ರಸ್ತೆಗಳಿಲ್ಲಾ, ಕುಡಿಯುವ ನೀರಿನ ಭವಣೆ ಇನ್ನೂ ತಪ್ಪಿಲ್ಲಾ ಕನಿಷ್ಠ ಮೂಲಬೂತ ಸೌಕರ್ಯ ಒದಗಿಸಲಾರದವರು ಮತ್ತೇ ಜನರಬಳಿ ಬರುತ್ತಿದ್ದಾರೆ.

ಆದರೆ ಜನರು ಈ ಭಾರಿ ಯೋಚಿಸಿ ಮತ ಚಲಾಯಿಸಬೇಕಿದೆ ಹಣ ಮತ್ತು ಸ್ವಾಭಿಮಾನದ ನಡುವೆ ಚುನಾವಣೆ ನಡೆಯುತ್ತಿದೆ ಸ್ವಾಭಿಮಾನಿಗಳಾದ ತಾವುಗಳು ಒಂದು ಭಾರಿ ನನಗೆ ಅವಕಾಶ ನೀಡಿ ನಿಮ್ಮೆಲ್ಲರ ಪ್ರೀತಿ ವಿಸ್ವಾಸದೊಂದಿಗೆ ಕ್ಷೇತ್ರದಲ್ಲಿ ಅಭಿವೃದ್ದಿ ರಾಜಕಾರಣ ಮಾಡುತ್ತೇನೆ ಎಲ್ಲ ಜನರ ಸಂಕಷ್ಟಗಳಿಗೆ ಸ್ಪಂದಿಸುವದರೊಂದಿಗೆ ದೇವರ ಹಿಪ್ಪರಗಿ ಮತಕ್ಷೇತ್ರ ಮಾದ–ರಿಯ ಕ್ಷೇತ್ರವನ್ನಾಗಿ ಮಾಡುವ ಜವಾಬ್ದಾರಿ ನನ್ನದಾಗಿದೆ ಕಾಂಗ್ರೇಸ್ ಪಕ್ಷ ಕ್ಷೇತ್ರದಲ್ಲಿ ಸಂಪೂರ್ಣವಾಗಿ ಅಸ್ಥಿತ್ವವನ್ನು ಕಳೆದುಕೊಂಡಿದೆ.

ಹೊಂದಾಣಿಕೆ ರಾಜಕಾರಣದಡಿ ಕಾಂಗ್ರೇಸ್ ಮತ್ತು ಬಿಜೆಪಿ ಸೇರಿಕೊಂಡಿವೆ ಕಾಂಗ್ರೇಸ್ಸಿಗೆ ಮತ ನೀಡಿದರೆ ಬಿಜೆಪಿ ಮತ ನೀಡಿದಂತಾಗುತ್ತದೆ ನಿಮ್ಮೆಲ್ಲರ ಆಶೀರ್ವಾದ ಜೆಡಿಎಸ್ ಪಕ್ಷದ ಮೇಲೆ ಇರಲಿ ಎಂದು ಮನವಿ ಮಾಡಿದ ಅವರು ರೈತರ ಪರವಾಗಿ, ಬಡವರ ಪರವಾಗಿ, ಇರುವಂತಹ ಏಕೈಕ ಪಕ್ಷ ಜೆಡಿಎಸ್ ಪಕ್ಷವಾಗಿದೆ ಮಹಿಳೆಯರಿಗೆ, ನಿರೂದ್ಯಗಿ ಯುವಕರಿಗೆ ಹಲವಾರು ಯೋಜನೆಗಳನ್ನು ಜಾರಿಗೆ ತಂದು ಅನುಷ್ಠಾನಗೊಳಿಸುವಂತಹ ಕಾರ್ಯ ಮಾಜಿ ಮುಖ್ಯಮಂತ್ರಿ ಕುಮಾರಣ್ಣ ಅವರು ಮಾಡಿದ್ದಾರೆ.

ಪ್ರತಿ ರೈತರಿಗೆ ಬಿತ್ತನೆಗೆ ಬೀಜ ಖರೀದಿಗಾಗಿ 10 ಸಾವಿರ ರೂ. ವೃದ್ದ–ರಿಗೆ 5 ಸಾವಿರ ರೂ. ಮಹಿಳಾ ಸ್ವಸಾಯ ಸಂಘಗಳ ಸಾಲ ಮನ್ನಾ ಒಳಗೊಂಡು ಅನೇಕ ಯೋಜನೆಯನ್ನು ಪ್ರನಾಳಿಕೆಯಲ್ಲಿ ಅಳವಡಿಸಿದ್ದಾರೆ ಬಡವರಿಗೆ ಉಚಿತವಾಗಿ ಗ್ಯಾಸ ಕೊಡುತ್ತೇವೆಂದ ಬಿಜೆಪಿ ಪಕ್ಷದವರು ಕನಿಷ್ಠ ಪಕ್ಷ ಅಗ್ಗದ ದರದಲ್ಲಿ ಸಿಗಬೇಕಾದ ಗ್ಯಾಸ್ ಸಿಲೇಂಡರ್ ಇಂದು ದುಭಾರಿಯಾಗಿ ಬಡವರಿಗೆ ಸಂಕಷ್ಟಕ್ಕೆ ನೂಕುವಂತೆ ಮಾಡಿದೆ ಜೆಡಿಎಸ್ ಅಧಿಕಾರಕ್ಕೆ ಬಂದ 24 ಗಂಟೆಯೊಳಗೆ ಅರ್ದದಷ್ಟು ನೇರವಾಗಿ ಸಬ್ಸಿಡಿ ಮೂಲಕ ಬಡವರಿಗೆ ಮುಟ್ಟಿಸುವಂತಹ ಕಾರ್ಯವಾಗಲಿದೆ ನನಗೆ ಒಂದು ಭಾರಿ ಅವಕಾಶ ನೀಡಿ ಬೆಂಬಲಿಸಬೇಕೆಂದು ಮನವಿ ಮಾಡಿದರು.

ಇನ್ನೋರ್ವ ಜೆಡಿಎಸ್ ಪಕ್ಷದ ಮುಖಂಡರಾದ ಶ್ರೀಶೈಲ ಸಂಗಾಪೂರ ಅವರು ಮಾತನಾಡಿ ಜೆಡಿಎಸ್ ಪಕ್ಷದ ಅಭ್ಯರ್ಥಿ ರಾಜುಗೌಡ ಪಾಟೀಲ ಅವರು ಎರಡು ಭಾರಿ ಸೋಲುಂಡರೂ ಕೂಡಾ ದೃತಿಗೆಡದೆ ಜನರೊಂದಿಗೆ ಬೆರೆತು ಜನರ ಸೇವಕನಾಗಿ, ಅವರ ಕಷ್ಟ ಸುಖಃ–ದಲ್ಲಿ ಭಾಗಿಯಾಗಿ ಜನರಿಗಾಗಿ, ಜನ–ರಿಗೋಸ್ಕರಬಹೃದಯ ಮಿಡಿಯುತ್ತಿರುವ ಹೃದಯವಂತ ರಾಜುಗೌಡರಾಗಿದ್ದಾರೆ ಈ ಭಾರಿ ಅವರನ್ನು ಚುನಾವಣೆಯಲ್ಲಿ ಗೆಲ್ಲಿಸುವ ಮೂಲಕ ಕ್ಷೇತ್ರಕ್ಕೆ ಸಮರ್ಥ–'ರ್ ನಾಯಕತ್ವವನ್ನು ಒದಗಿಸಬೇಕಿದೆ ಕಾಂಗ್ರೇಸ್‌ನವರು 60 ವರ್ಷಗಳ ಕಾಲ ಆಳ್ವಿಕೆಯನ್ನು ಮಾಡಿದ್ದರೂ ಕೂಡಾ ಜನರ ವಿಸ್ವಾಸವನ್ನು ಕಳೆದುಕೊಂಡಿದ್ದಾರೆ ಹೀಗಾಗಿ ಗ್ಯಾರೇಂಟಿ ಕಾರ್ಡ ಹಂಚುವದರ ಮೂಲಕ ಜನರನ್ನು ಮತ್ತೇ ವಂಚಿಸಲು ಹೊರಟಿದ್ದಾರೆ ಕಾಂಗ್ರೇಸ್ ಮತ್ತು ಬಿಜೆಪಿ ಪಕ್ಷ ಸುಳ್ಳಿನ ಬರವಸೆಗಳನ್ನು ಕಟ್ಟಿಕೊಂಡು ಹೊರಟಿವೆ ಈ ಭಾರಿ ಜೆಡಿಎಸ್ ಪಕ್ಷಕ್ಕೆ ಬೆಂಬಲಿಸಿ ರಾಜುಗೌಡ–ರಿಗೆ ಆಶೀರ್ವದಿಸಬೇಕೆಂದರು.

ಇದೇ ಸಮಯದಲ್ಲಿ ಬೇಕಿನಾಳ ಗ್ರಾಂಪಂ ಮಾಜಿ ಅಧ್ಯಕ್ಷ ಅಶೋಕಗೌಡ ಪಾಟೀಲ ನೇತೃತ್ವದಲ್ಲಿ ಮಲ್ಲಾರಾವ ಕುಲಕರ್ಣಿ, ವಿನೋದ ಬಿರಾದಾರ, ಸಿದ್ದು ಹಳ್ಳದಮನಿ, ಶಿವಕುಮಾರ ಸಜ್ಜನ, ಈರಯ್ಯ ಆಲ್ಯಾಳಮಠ, ಶಂಕರಯ್ಯ ಬೇನಾಳಮಠ, ಮಂಜು ಹಿರೇಮಠ, ರುದ್ರಸ್ವಾಮಿ ಹಿರೇಮಠ, ಶಣ್ಮುಖಯ್ಯ ಬೇನಾಳಮಠ, ಮಹಾಂತೇಶ ಹಿರೇಮಠ, ಗುತ್ತಯ್ಯ ಬೇನಾಳಮಠ, ಸಿದ್ರಾಮ ಸಜ್ಜನ, ಗುತ್ತಪ್ಪ ಸಜ್ಜನ, ಅಪ್ಪಯ್ಯ ಕರಕಳ್ಳಿಮಠ, ಒಳಗೊಂಡು ನೂರಾರು ಕಾರ್ಯಕರ್ತರು ಕಾಂಗ್ರೇಸ್ ಮತ್ತು ಬಿಜೆಪಿ ಪಕ್ಷ ತೋರೆದು ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಗೊಂಡರು.

## ಚುನಾವಣಾ ಪ್ರಚಾರದಲ್ಲಿ ಮಕ್ಕಳನ್ನು ಬಳಸಿಕೊಳ್ಳದಂತೆ ಸೂಚನೆ

ಕೊಪ್ಪಳ: ಮಕ್ಕಳಿಂದ ಚುನಾವಣಾ ಪ್ರಚಾರ ಮಾಡಿಸಿದ ಹಾಗೂ ಮಕ್ಕಳನ್ನು ಪ್ರಚಾರ ಕಾರ್ಯದಲ್ಲಿ ಬಳಸಿಕೊಂಡ ವಿವಿಧ ರಾಜಕೀಯ ಪಕ್ಷಗಳ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಆದ್ದರಿಂದ ವಿಧಾನಸಭಾ ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ಚುನಾವಣಾ ಪ್ರಚಾರದಲ್ಲಿ ಮಕ್ಕಳನ್ನು ಬಳಸಿಕೊಳ್ಳದಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಪದ್ಮಾವತಿ ಜಿ ಅವರು ತಿಳಿಸಿದ್ದಾರೆ.

ಭಾರತ ಸರಕಾರವು ವಿಶ್ವಸಂಸ್ಥೆಯು ಅನುಮೋದಿತ "ಮಕ್ಕಳ ಹಕ್ಕುಗಳ ಒಡಂಬಡಿಕೆಗೆ 11 ಡಿಸೆಂಬರ 1992ರಲ್ಲಿ ಒಪ್ಪಿ ಅನುಮೋದಿಸಿರುತ್ತದೆ". ಈ ಮಕ್ಕಳ ಹಕ್ಕುಗಳ ಒಡಂಬಡಿಕೆ ಹಾಗೂ ಮಕ್ಕಳ ನ್ಯಾಯ (ಮಕ್ಕಳ ಪೋಷಣೆ ಮತ್ತು ರಕ್ಷಣೆ ಕಾಯ್ದೆ)–2015ರನ್ವಯ '18 ವರ್ಷದೊಳಗಿನ ಎಲ್ಲಾ ಮಾನವಜೀವಿಗಳು ಮಕ್ಕಳು ಎಂದು ಪರಿಗಣಿತವಾಗಿದೆ'.

ಮಕ್ಕಳ ಹಕ್ಕುಗಳ ಒಡಂಬಡಿಕೆಯ ಕಲಂ 32 ಮತ್ತು 36ರಲ್ಲಿ "ಮಕ್ಕಳ ಆರೋಗ್ಯ ಮತ್ತು ಶಿಕ್ಷಣ–ಕ್ಕೆ ಅಪಾಯಕಾರಿಯಾದ ಕ್ಷೇತ್ರಗಳಲ್ಲಿ, ಮಕ್ಕಳು ಕಾರ್ಯನಿರ್ವಹಿಸದಂತೆ ಹಾಗೂ ಮಕ್ಕಳ ಬೆಳವಣಿಗೆಗೆ ತೊಡಕನ್ನುಂಟು ಮಾಡುವ ಯಾವುದೇ ಚಟುವಟಿಕೆಯಲ್ಲಿ ಮಕ್ಕಳು ಭಾಗವಹಿಸದಂತೆ ಸೂಕ್ತ ಕ್ರಮಗಳನ್ನು ಕೈಗೊಳ್ಳಲು ನಿರ್ದೇಶಿಸಿರುತ್ತದೆ".

ಅಧ್ಯಕ್ಷರು, ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ನವದೆಹಲಿ ರವರು 'ಚುನಾವಣಾ ಕಾರ್ಯಗಳಲ್ಲಿ ಮತ್ತು ಯಾವುದೇ ಪಕ್ಷಗಳು ತಮ್ಮ ಚುನಾವಣಾ ಪ್ರಚಾರ ಕಾರ್ಯದಲ್ಲಿ 18 ವರ್ಷದೊಳಗಿನ ಮಕ್ಕಳನ್ನು ಬಳಸಿಕೊಳ್ಳದಂತೆ ಅಗತ್ಯ ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಕೋ–ರಿದ್ದು, ಚುನಾವಣಾಧಿಕಾರಿಗಳು, ಮುಖ್ಯ ಚುನಾವಣಾಧಿಕಾರಿಗಳ ಕಾರ್ಯಾಲಯ, ನವದೆಹಲಿರವರು, ಈ ಕುರಿತು ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿರುತ್ತಾರೆ. ಅಧ್ಯಕ್ಷರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರುರವರು ಬೇಸಿಗೆ ರಜೆಗಳು ಪ್ರಾರಂಭವಾಗಿದ್ದು, ಅಲ್ಲದೇ ರಾಜ್ಯದಲ್ಲಿ ಬಿಸಿಲಿನ ಪ್ರಖರತೆ ಹೆಚ್ಚಾಗಿರುವದರಿಂದಾಗಿ, ಮಕ್ಕಳನ್ನು ಚುನಾವಣಾ ಪ್ರಚಾರ ಕಾರ್ಯದಲ್ಲಿ ಬಳಸಿಕೊಂಡು, ಮಕ್ಕಳನ್ನು ಶೋಷಿಸುವದನ್ನು ತಡೆಗಟ್ಟುವಂತೆ ಕೋರಿರುತ್ತಾರೆ.

ಈ ಎಲ್ಲಾ ಕಾರಣದಿಂದಾಗಿ ಬಾಲ ಕಾರ್ಮಿಕ ಪದ್ಧತಿ ನಿಷೇಧ–1986 ಮತ್ತು ಹದಿ ಹರೆಯದ ಮಕ್ಕಳ ದುಡಿಮೆ ನಿಯಂತ್ರಣ ತಿದ್ದುಪಡಿ ಕಾಯ್ದೆ–2016 ಕಾಯ್ದೆಯನ್ವಯ 14 ವರ್ಷದೊಳಗಿನ ಮಕ್ಕಳು ಯಾವುದೇ ದುಡಿಮೆ ಕಾರ್ಯದಲ್ಲಿ ಅಥ–ವಾ ದುಡಿಮೆ ಚಟುವಟಿಕೆಗಳಲ್ಲಿ ಮಕ್ಕಳನ್ನು ಬಳಸಿಕೊಳ್ಳುವದನ್ನು ನಿಷೇಧಿಸಿದೆ ಮತ್ತು 18 ವರ್ಷದೊಳಗಿನ ಮಕ್ಕಳು ಅಪಾಯಕಾರಿ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುವದನ್ನು ನಿಷೇಧಿಸಿಲಾಗಿದೆ.

ಚುನಾವಣಾ ಕಾರ್ಯದಲ್ಲಿ 18 ವರ್ಷದೊಳಗಿನ ಮಕ್ಕಳನ್ನು ಬಳಕೆ ಮಾಡುವಂತಿಲ್ಲ ಎಂದು ಏಪ್ರಿಲ್ 12ರಂದು ಜಿಲ್ಲಾಧಿಕಾರಿಗಳು ಪತ್ರಿಕಾ ಪ್ರಕಟಣೆಯನ್ನು ಹೊರಡಿಸಿರುತ್ತಾರೆ.

ಅದಾಗ್ಯೂ ವಿವಿಧ ರಾಜಕೀಯ ಪಕ್ಷಗಳು ತಮ್ಮ ಚುನಾವಣಾ ಪ್ರಚಾರ ಕಾರ್ಯದಲ್ಲಿ ಮಕ್ಕಳನ್ನು ಬಳಸಿದ್ದು ಕಂಡುಬಂದಿದ್ದರಿಂದಾಗಿ ಗಂಗಾವತಿ ನಗರ ಪೊಲೀಸ್ ಠಾಣೆಯಲ್ಲಿ ಏಪ್ರಿಲ್ 19ರಂದು ಎಫ್.ಐ.ಆರ್ 76/2023, 77/2023, 78/2023 ಮತ್ತು 79/2023 ರಲ್ಲಿ ಒಟ್ಟು ನಾಲ್ಕು ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಎಂದು ಪ್ರಕಟಣೆ ತಿಳಿಸಿದೆ.

## ಬೆಳಗಾವಿ ಉತ್ತರ ಮತ್ತು ದಕ್ಷಿಣ ಮತಕ್ಷೇತ್ರಗಳಿಗೆ ಸಾಮಾನ್ಯ ಪರಿವಿಕ್ಷಕರ ನೇಮಕ

ಬೆಳಗಾವಿ: ಕರ್ನಾಟಕ ವಿಧಾನಸಭೆ ಸಾರ್ವತ್ರಿಕ ಚುನಾವಣೆ–2023 ರ ಹಿನ್ನೆಲೆಯಲ್ಲಿ 11–ಬೆಳಗಾವಿ ಉತ್ತರ ಮತ್ತು 12–ಬೆಳಗಾವಿ ದಕ್ಷಿಣ ಮತಕ್ಷೇತ್ರಗಳಿಗೆ ಸಾಮಾನ್ಯ ಪರಿವಿಕ್ಷಕರಾಗಿ (General Observer) ಪಂಕಜ ಯಾದವ್ ಐ.ಎ.ಎಸ್ ಇವರನ್ನು ನೇಮಿಸಲಾಗಿದೆ.

ಏಪ್ರಿಲ್.19 2023 ರಿಂದ ಇವರು ಕರ್ತವ್ಯಕ್ಕೆ ಹಾಜರಾಗಿದ್ದು, ಈ ಕ್ಷೇತ್ರದ ಸಾರ್ವಜನಿಕ ದೂರು ಮತ್ತು ಸಲಹೆ ಸೂಚನೆಗಳಿಗಾಗಿ ಸಂಪರ್ಕಿಸಬೇಕಾದ ವಿಳಾಸ: ಪಂಕಜ ಯಾದವ್ ಐ.ಎ.ಎಸ್., ಬೆಳಗಾವಿ ಮಹಾನಗರ ಪಾಲಿಕೆಯ ಮುಖ್ಯ ಕಚೇರಿಯ ಕೊಠಡಿ ಸಂಖ್ಯೆ–03, ದೂರವಾಣಿ ಸಂ 0831–2405301, ಕೊಠಡಿ ಸಂ. 01 ಸರ್ಕಾರಿ ವಸತಿ ಗೃಹ, ಸರ್ಕ್ಯುಟ್ ಹೈಸ್, ಹೊಸ ಕಟ್ಟಡ ಬೆಳಗಾವಿ ಮೊ.ಸಂ. 7899419697. ಗೆ ಸಂಪರ್ಕಿಸಬಹುದು ಎಂದು ಮಹಾನಗರ ಪಾಲಿಕೆ ಆಯುಕ್ತರು ಹಾಗೂ ಮತದಾರರ ನೋಂದಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## 81 ಅಭ್ಯರ್ಥಿಗಳ ನಾಮಪತ್ರಗಳು ಕ್ರಮಬದ್ಧ

ಕೊಪ್ಪಳ: ವಿಧಾನಸಭೆ ಚುನಾವಣೆ–2023ಗೆ ಸಂಬಂಧಿಸಿದಂತೆ ಏಪ್ರೀಲ್ 21ರಂದು ನಾಮಪತ್ರಗಳ ಪರಿಶೀಲನೆ ನಡೆಯಿತು.

ಕುಷ್ಟಗಿ ಕ್ಷೇತ್ರದಲ್ಲಿ 17 ಅಭ್ಯರ್ಥಿಗಳ, ಕನಕಗಿರಿ ಕ್ಷೇತ್ರದಲ್ಲಿ 15, ಗಂಗಾವತಿ ಕ್ಷೇತ್ರದಲ್ಲಿ 21, ಯಲಬುರ್ಗಾ ಕ್ಷೇತ್ರದಲ್ಲಿ 14 ಮತ್ತು ಕೊಪ್ಪಳ ಕ್ಷೇತ್ರದಲ್ಲಿ 14 ಅಭ್ಯರ್ಥಿಗಳ ನಾಮಪತ್ರಗಳು ಕ್ರಮಬದ್ಧವಾಗಿವೆ.

ವಿವಿಧ ವಿಧಾನಸಭಾ ಮತಕ್ಷೇತ್ರಗಳಲ್ಲಿ ಸಲ್ಲಿಕೆಯಾದ ಒಟ್ಟು 149 ನಾಮಪತ್ರಗಳ ಪೈಕಿ ಪರಿಶೀಲನೆಯ ನಂತರ ಕುಷ್ಟಗಿ ಕ್ಷೇತ್ರದಲ್ಲಿ 3, ಕನಕಗಿರಿ ಕ್ಷೇತ್ರದಲ್ಲಿ 8, ಗಂಗಾವತಿ ಕ್ಷೇತ್ರದಲ್ಲಿ 2, ಯಲಬುರ್ಗಾ ಕ್ಷೇತ್ರದಲ್ಲಿ 2 ಮತ್ತು ಕೊಪ್ಪಳ ಕ್ಷೇತ್ರದಲ್ಲಿ 1 ಸೇರಿ ಒಟ್ಟು 16 ನಾಮಪತ್ರಗಳು ತಿರಸ್ಕೃತವಾಗಿವೆ. ಐದು ವಿಧಾನಸಭಾ ಕ್ಷೇತ್ರಗಳಲ್ಲಿ ಸಲ್ಲಿಕೆಯಾದ ನಾಮಪತ್ರಗಳ ಪೈಕಿ ಪರಿಶೀಲನೆಯ ನಂತರ ಬಿಜೆಪಿಯ 5, ಕಾಂಗ್ರೇಸನ 5, ಎಎಪಿಯ 5, ಬಿಎಸ್ಪಿಯ 4, ಜೆಡಿಎಸ್‌ನ 5, ನೋಂದಾಯಿತ ಮಾನ್ಯತೆ ಪಡೆಯದ ರಾಜಕೀಯ ಪಕ್ಷಗಳ 23 ಮತ್ತು ಪಕ್ಷೇತರ 34 ಸೇರಿ ಒಟ್ಟು 81 ಅಭ್ಯರ್ಥಿಗಳ ನಾಮಪತ್ರಗಳು ಕ್ರಮಬದ್ಧವಾಗಿವೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳಾದ ಎಂ.ಸುಂದರೇಶಬಾಬು ಅವರು ತಿಳಿಸಿದ್ದಾರೆ.

# ನಮ್ಮ ಅವಧಿಯ ಅಭಿವೃದ್ದಿಯಿಂದ ಗೆಲುವು ಖಚಿತ: ಬಿ.ಎಂ.ನಾಗರಾಜ್



ಸಿರುಗುಪ್ಪ : ನಗರದ ಜಿ.ಎಸ್.ಲಾಡ್ಜಿನ ಸಭಾಂಗಣದಲ್ಲಿ ತಾಲೂಕು ಬ್ಲಾಕ್‌ಕಾಂಗ್ರೇಸ್ ಪಕ್ಷದ ವತಿಯಿಂದ ಪಕ್ಷದ ದೇಯೋದ್ದೇಶಗಳು ಮತ್ತು ಚುನಾವಣೆ ಪ್ರಣಾಳಿಕೆ, ಸುದ್ದಿಗೋಷ್ಠಿ ನಡೆಯಿತು.

ಸುದ್ದಿಗೋಷ್ಠಿಯನ್ನು ದ್ದೇಶಿಸಿ ಮಾತನಾಡಿದ ಮಾಜಿ ಶಾಸಕ, 2023ರ ಕಾಂಗ್ರೇಸ್ ಅಭ್ಯರ್ಥಿ ಬಿ.ಎಂ.ನಾಗರಾಜ ಅವರು ಎಲ್ಲಾ ಧುರೀಣರು ಹಾಗೂ ಕಾರ್ಯಕರ್ತರು ಯಾವುದೇ ಭಿನ್ನ ಮತವಿಲ್ಲದೇ ಪಕ್ಷದ ಆದೇಶದಂತೆ ಒಗ್ಗಟ್ಟಿನಿಂದ ಪ್ರಚಾರ ಕೈಗೊಳ್ಳುತ್ತಿದ್ದು, ನಮ್ಮ ಅವಧಿಯಲ್ಲಿ ಮನೆಗಳ ನಿರ್ಮಾಣ, ಕುಡಿಯುವ ನೀರಿನ ವ್ಯವಸ್ಥೆಯು ಜಿಡಿಕಾರ್ಯದಂತಹ ಅಭಿವೃದ್ದಿ ಕಾರ್ಯಗಳೇ ಈ ಬಾರಿಯ ಗೆಲುವಿಗೆ ಪೂರಕವಾಗಲಿ ವೆಂದರು.

ನಗರದ ಕುಡಿಯುವ ನೀರಿನ ಕೆರೆಗಾಗಿ 2018 ರ ಬಜೆಟ್ ವೇಳೆ 95 ಕೋಟಿ ಅನುದಾನ ಮಂಜೂರಾತಿಯೊಂದಿಗೆ ಅನುಮೋದನೆ ಸಿಕ್ಕಿತ್ತು. ನಂತರ ಬಂದ ಮುಖ್ಯಮಂತ್ರಿಯಡಿ ಯೂರಪ್ಪನವರು 95 ಕೋಟಿ ಅನುದಾನದಲ್ಲಿ 45 ಕೋಟಿ ಬಿಡುಗಡೆಗೊಳಿಸಿದರು.

ಆದರೆ ಶಾಸಕರಾದ ಸೋಮಲಿಂಗಪ್ಪನವರು ಸರಿಯಾಗಿ ಬಳಕೆ ಮಾಡದಿದ್ದರಿಂದ ಕಾಮಗಾರಿ ನೆನೆಗುದಿಗೆ ಬಿದ್ದಿದ್ದು ಜನಾಶೀರ್ವಾದ ದೊರೆತಲ್ಲಿ ಕಾಮಗಾರಿ ಪೂರ್ಣಗೊಳಿಸುವೆ, ಆಶ್ರಯ, ಆವಾಸ್ ಯೋಜನೆಯಡಿ ಅನೇಕ ಮನೆಗಳನ್ನು ಕೊಟ್ಟಿದ್ದೇವೆ.

ಡ್ರೈವರ್ ಕಾಲೋನಿಯಲ್ಲಿನ 22 ಎಕರೆಯಲ್ಲಿ 700 ಪ್ಲಾಟ್‌ಗಳ ಹಂಚಿಕೆಗೆ ತಕರಾರು ಅರ್ಜಿಗಳು ಬಂದಿದ್ದರಿಂದ ನೆನೆಗುದಿಗೆ ಬೀಳುವಂತಾಯಿತು. ಗೆಲುವಿನ ನಂತರದ ದಿನಗಳಲ್ಲಿ ಜಿ+2 ಮಾದರಿಯಲ್ಲಿ 5800 ಮನೆಗಳ ನಿರ್ಮಾಣಕ್ಕೆ ಶ್ರಮಿಸುವುದಾಗಿ ತಿಳಿಸಿದರು.

ಇದೇ ವೇಳೆ ಸಂಸದೆಜೆಬಿ ಮ್ಯಾಥ–ಾರ್, ಮಾಜಿ ಶಾಸಕ ಟಿ.ಎಂ. ಚಂದ್ರಶೇಖರಯ್ಯ ಸ್ವಾಮಿ, ಬ್ಲಾಕ್ ಕಾಂಗ್ರೇಸ್ ತಾಲೂಕಾಧ್ಯಕ್ಷ ಎನ್.ಕ–ರಿಬಸಪ್ಪ, ಪಿ.ಎಲ್.ಡಿ ಬ್ಯಾಂಕ್‌ಅಧ್ಯಕ್ಷ ಚೊಕ್ಕ ಬಸವನಗೌಡ, ತಾಲೂಕು ಲಾಳಗೊಂಡ ಸಮಾಜದಅಧ್ಯಕ್ಷ ಮುರುಣಿ ಬಸವನಗೌಡ, ನಗರಸಭೆ ಸದಸ್ಯರಾದ ಆರ್.ನಾಗರಾಜ, ಹೆಚ್.ಗಣೇಶ, ಮುಖಂಡರಾದ ಸಿದ್ದರಾಮಸ್ವಾಮಿ, ಹೆಚ್.ಎಮ್. ಮಲ್ಲಿಕಾರ್ಜುನ, ನರಸಿಂಹ ನಾಯಕ, ಶಿವಶಂಕರಗೌಡ, ಚಿಟಗಿ ಹುಸೇನ್‌ಸಾಬ್, ನರೇಂದ್ರ ಸಿಂಹ, ಬಿ.ಕೆ.ರಘು, ಕೊಡ್ಲೆ ಮಲ್ಲಿಕಾರ್ಜುನ, ಹಾಗೂ ಕಾರ್ಯಕರ್ತರು ಇದ್ದರು.

## ರತ್ನಾ ಮಾಮನಿ ನಾಮಪತ್ರ ಅಂಗೀಕಾರ



ಸವದತ್ತಿ: ಸವದತ್ತಿ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ರತ್ನಾ ಮಾಮನಿ ಅವರ ನಾಮಪತ್ರ ಅಂಗೀಕಾರವಾಗಿದೆ.

ರತ್ನಾ ಮಾಮನಿ ಅವರು 2018ರ ಹಳೆಯ ಅಫಿಡವಿಟ್ ಸಲ್ಲಿಸಿದ್ದಾರೆ ಎಂದು ಕಾಂಗ್ರೆಸ್ ಅಭ್ಯರ್ಥಿ ವಿಶ್ವಾಸ ವೈದ್ಯ ಹಾಗೂ ಆಪ್ ಅಭ್ಯರ್ಥಿ ಬಾಪುಗೌಡ ಪಾಟೀಲ ದೂರು ಸಲ್ಲಿಸಿದ್ದರು.

ಈ ಹಿನ್ನೆಲೆಯಲ್ಲಿ ಶನಿವಾರ ಬೆಳಗ್ಗೆ 10 ಗಂಟೆಗೆ ಆರಂಭವಾದ ವಿಚಾರಣೆ ಮುಕ್ತಾಯಗೊಂಡಿದೆ. ವಿಚಾರಣೆ ನಂತರ ಚುನಾವಣಾಧಿಕಾರಿ ಡಾ. ರಾಜೀವ ಕೂಲೇರ್ ತೀಪು ನೀಡಿದ್ದಾರೆ.

## ರಂಜಾನ್ ಪ್ರಯುಕ್ತ ಸಾಮೂಹಿಕ ಪ್ರಾರ್ಥನೆ



ಸಿರುಗುಪ್ಪ :ತಾಲ್ಲೂಕಿನ ತೆಕ್ಕಲಕೋಟೆ ಪಟ್ಟಣದ ನಿಟ್ಟೂರು ರಸ್ತೆಯಲ್ಲಿರುವ ಸುನ್ನೀ ಈದ್ಗಾ ಮೈದಾನದಲ್ಲಿ ಮುಸ್ಲೀಂ ಬಾಂಧವರು ಸೇರಿ ಶ್ರದ್ಧೆ ಭಕ್ತಿಯಿಂದ ಸಾಮೂಹಿಕ ಪ್ರಾಥ–ರ್ನೆ ಸಲ್ಲಿಸಿದರು.

ಮುಸ್ಲಿಮರಿಗೆ ಪವಿತ್ರವಾದ ಮಾಸರಂಜಾನ್ ಸಮಯದಲ್ಲಿ ಅಲ್ಲಾಹುವಿನ ಮೇಲಿನ ಶ್ರದ್ಧಾ ಭಕ್ತಿಯಿಂದಾಗಿ ಉಪವಾಸ, ನಮಾಜ್, ದಾನ ಇನ್ನಿತರ ಧಾರ್ಮಿಕ ಕಾರ್ಯಗಳನ್ನು ಮಾಡಲಾಗುತ್ತದೆ.

ವಿಶೇಷ ರಾತ್ರಿಗಳಲ್ಲಿ ಸಲ್ಲಿಸುವ ಪ್ರಾರ್ಥನೆಗೆ ತರಾವೀಹ್ ಎಂದು ಕರೆಯಲಾಗುತ್ತಿದ್ದು, ಈ ತರಾವೀಹ್ ನಮಾಜ್ ಮಾಡಿದರೆ ಪುಣ್ಯ ಸಿಗುತ್ತದೆಂಬ ಮುಸ್ಲಿಮರ ನಂಬಿಕೆಯಾಗಿದೆ.

ಈ ಹಬ್ಬದ ವಿಶೇಷ ಎಂದರೆ ದಾನ ತನ್ನದೈನಂದಿನ ಖರ್ಚಿನಿಂದ ಉಳಿದ ಮೊತ್ತದಿಂದ ಝಕಾತ್(ದಾನ) ನೀಡುವುದು ಪ್ರತಿಯೊಬ್ಬರ ಕರ್ತವವಾಗಿದೆ. ಈ ಝಕಾತ್ ಈದ್ ನಮಾಜ್‌ಗಿಂತ ಮುಂಚಿತವಾಗಿ ದಾನ ಮಾಡಬೇಕು. ಇದರ ಉದ್ದೇಶಯಾವ ಮುಸ್ಲಿಮರೂ ಹಬ್ಬದ ಸಂಭ್ರಮದಿಂದ ವಂಚಿತವಾಗ ಬಾರದೆಂಬು ದಾಗಿದೆಂಬುದಾಗಿದೆ.

ಇದೇ ವೇಳೆ ಧರ್ಮಗುರುಗಳು, ಮುಸ್ಲೀಂ ಭಾಂದವರು ಇದ್ದರು.

# ಉತ್ತಮ ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನ



ಸಿರುಗುಪ್ಪ :ನಗರದ ಸಿರುಗುಪ್ಪ ವಿದ್ಯಾ ಸಂಸ್ಥೆ ಆಡಳಿತದ ಬಿ.ಇ.ಹನುಮಂತಮ್ಮ ಮೆಮೋ–ರಿಯಲ್ ಪದವಿ ಪೂರ್ವಕಾಲೇಜು ಹಾಗೂ ವಿಕೆಜೆ ಪದವಿ ಪೂರ್ವ ಕಾಲೇಜಿನಲ್ಲಿ ದ್ವಿತಿಯ ಪಿ.ಯು.ಸಿ ಪರೀಕ್ಷೆಯಲ್ಲಿ ಕಲಾ ವಿಭಾಗದಲ್ಲಿ 572 ಅಂಕಗಳನ್ನು ಪಡೆದುತಾಲೂಕಿಗೆ ಪ್ರಥಮ ಸ್ಥಾನ ಪಡೆದಿರುವ ಸಲ್ಮಾನ್ ಹಾಗೂ ಅತಿಹೆಚ್ಚು ಪಡೆದ ವಿದ್ಯಾರ್ಥಿಗಳನ್ನು ಸಂಸ್ಥೆಯ ಅಧ್ಯಕ್ಷ ಬಿ.ಇ.ದೊಡ್ಡಯ್ಯ ಶಾಲು ಹಾಕಿ ಸನ್ಮಾನಿಸಿದರು.

ನಂತರ ಮಾತನಾಡಿದ ಅವರು ನಮ್ಮಕಾಲೇ–ಜಿಗೆ ವಿದ್ಯಾಭ್ಯಾಸಕ್ಕಾಗಿ ಗ್ರಾಮೀಣ ಭಾಗದಿಂದಲೇ ಅತಿಹೆಚ್ಚು ವಿದ್ಯಾರ್ಥಿಗಳು ಬಂದಿದ್ದರೂ ಕಾಲೇಜಿನಲ್ಲಿ ನುರಿತಭೋದಕ ಸಿಬ್ಬಂದಿಗಳ ಉಪನ್ಯಾಸ ಹಾಗೂ ತಮ್ಮಕಠಿಣ ಪರಿಶ್ರಮದಿಂದಾಗಿ ಉತ್ತಮ ಅಂಕಗಳನ್ನು ಪಡೆದುಕಾಲೇಜು, ಪೋಷಕರಿಗೆ ಹಾಗೂ ತಾಲೂಕಿಗೆಕೀರ್ತಿಯನ್ನುತಂದಿದ್ದಾರೆಂದರು.

ಕಾಲೇಜಿನ ಕಲಾ ವಿಭಾಗದಲ್ಲಿ ಎಸ್. ಕಾಳಿಂಗ–559, ನಿರುಪಾದಿ–545, ಪದ್ಮಾ.ಎ.ಆರ್.–522, ಎಮ್.ಗೌತಮ್–519, ಕೆ. ಅಯ್ಯಾಳಪ್ಪ–510, ಅನಿತಾ–503,

ವಾಣಿಜ್ಯ ವಿಭಾಗದ ಚಿಕ್ಕನಗೌಡ ಪಾಟೀಲ್–565, ಶ್ರೇಯಾ.ಪಿ–543, ಅಂಬ್ರೇಶ್–533, ದೀಪಿಕಾ–526, ಆರ್.ಅಮೃತಾ–520, ಚೈತನ್ಯ.ಜಿ–518, ಸಣ್ಣ ರಂಗಸ್ವಾಮಿ–517, ಲಯಾ.ಪಿ–512,

ವಿಜ್ಞಾನ ವಿಭಾಗದಲ್ಲಿಈಶ್ವರ್.ಬಿ–538, ಜಿ.ಮಾರೆಣ್ಣ–537, ಭಾಗ್ಯಶ್ರೀ–533, ವೆಂಕಟೇಶ್. ಹೆಚ್.ಎಮ್–500, ಶೇಕ್ಷಾವಲಿ–483, ಇಂದ್ರಾ.ಸಿ–482, ರೇಣುಕಮ್ಮ–481, ಬಿ.ಎಮ್. ವೀರೇಶ್–480 ಅಂಕಗಳನ್ನು ಪಡೆದಿರುವುದು ಉಪನ್ಯಾಸಕ ಸಿಬ್ಬಂದಿಗೆ ಹೆಮ್ಮೆಯ ವಿಷಯವಾಗಿದೆಂದು ಫಾರ್ಮಸಿ ಕಾಲೇಜಿನ ಪ್ರಾಂಶುಪಾಲ ಅನಿಲ್ ಕುಮಾರ್ ಮತ್ತು ಪಿಯುಸಿ ಕಾಲೇಜಿನ ಪ್ರಾಂಶುಪಾಲ ಸೂರ್ಯಕಾಂತ ಶೆಟ್ಟಿ ತಿಳಿಸಿದರು.

ಇದೇ ವೇಳೆ ವಿಕೆಜೆಕಾಲೇಜಿನ ಪ್ರಾಂಶುಪಾಲ ಶಾಂತನಗೌಡ, ಉಪನ್ಯಾಸಕರುಗಳಾದ ಸಿದ್ದಯ್ಯಸ್ವಾಮಿ, ಕೀರ್ತಿ, ಲಿಂಗಣ್ಣ, ವೆಂಕಟೇಶ, ಸುದರ್ಶನ, ವಿಷ್ಣು, ಮಾನಸ, ಕೆ.ಕೊಂಡಯ್ಯ, ಎನ್.ಜೆ.ಗುರುರಾಜ, ಬಿ.ಅಂಬಿ, ಕೆ.ಟಿ.ಮರಿಸ್ವಾಮಿ, ಗೋಪಾಲ್, ಶಂಕರಪ್ಪ, ಗುರುರಾಯ, ನರೇಂದ್ರ ಇನ್ನಿತರರು ಇದ್ದರು.

## ಒಂದೇ ಕುಟುಂಬದ ಮೂವರು ದುರ್ಮರಣ

ರಾಮನಗರ: ಕುರಿಗಳ ಮೈತೊಳೆಯಲು ಹೋಗಿದ್ದ ಒಂದೇ ಕುಟುಂಬದ ಮೂವರು ದುರ್ಮರಣ ಹೊಂದಿರುವಂತಹ ದಾರುಣ ಘಟನೆಯೊಂದು ಜಿಲ್ಲೆಯ ಮಾಗಡಿ ತಾಲೂಕಿನ ಮುತ್ತಸಾಗರ ಬಳಿ ಕೆರೆಯಲ್ಲಿ ನಡೆದಿದೆ.

ನಾಗರಾಜು(30), ಜ್ಯೋತಿ(35) ಮತ್ತು ಲಕ್ಷ್ಮೀ(22) ಮೃತರು. ಇಬ್ಬರ ಮೃತದೇಹ ಹೊರತೆಗೆದ ಅಗ್ನಿ ಶಾಮಕ ಸಿಬ್ಬಂದಿ, ಮತ್ತೊಂದು ಶವ ಹೊರತೆಗೆಯಲು ಶೋಧಕಾರ್ಯ ನಡೆಸಿದ್ದಾರೆ. ಕುದೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

## ಸಹಿ ಹಾಕುವುದನ್ನೇ ಮರೆತ ಅಭ್ಯರ್ಥಿ: ನಾಮಪತ್ರ ತಿರಸ್ಕೃತ




ಗಂಗಾವತಿ: ವಿಧಾನಸಭಾ ಚುನಾವಣೆಗೆ ಗಂಗಾವತಿಯ ಅಖಾಡದಿಂದ ಸ್ಪರ್ಧಿಸಬೇಕಿದ್ದ ಪಕ್ಷೇತರ ಅಭ್ಯರ್ಥಿಯೊಬ್ಬರು ತಾವು ಸಲ್ಲಿಸಿದ್ದ ನಾಮಪತ್ರಕ್ಕೆ ಸಹಿ ಹಾಕುವುದನ್ನೇ ಮರೆತು ಎಡವಟ್ಟು ಮಾಡಿಕೊಂಡಿದ್ದಾರೆ.

ಇದರ ಪರಿಣಾಮ ಅಭ್ಯರ್ಥಿಯ ನಾಮಪತ್ರ ತಿರಸ್ಕೃತವಾಗಿದೆ. ಪಕ್ಷೇತರ ಅಭ್ಯರ್ಥಿ ನಾಮಪತ್ರ ಅಸಿಂಧು: ದೇವಪ್ಪ ಎಂಬ ವ್ಯಕ್ತಿ ಪಕ್ಷೇತರರಾಗಿ ನಾಮಪತ್ರ ಸಲ್ಲಿಸಿದ್ದರು. ಆದ–ರೆ, ನಾಮಪತ್ರಗಳ ಕ್ರಮಬದ್ಧತೆ ಪರಿಶೀಲಿಸುವ ಸಂದರ್ಭದಲ್ಲಿ ನಾಮಪತ್ರಕ್ಕೆ ಈ ವ್ಯಕ್ತಿ ಸಹಿ ಮಾಡದಿರುವುದು ಬೆಳಕಿಗೆ ಬಂದಿದೆ. ತಕ್ಷಣವೇ ಅಧಿಕಾ–ರಿಗಳು ನಾಮಪತ್ರ ಅಸಿಂಧುಗೊಳಿಸಿದ್ದಾರೆ.

ಜೊತೆಗೆ ಗಂಗಾವತಿಯ ಅಖಾಡದಿಂದ ಸ್ಪರ್ಧೆ ಮಾಡಲು ಬಯಸಿದ್ದ ಬೆಂಗಳೂರು ಮೂಲದ ಗೀತಾ ಎಂಬುವವರು ತಮ್ಮ ವಿಳಾಸದ ದೃಢೀಕೃತ ದಾಖಲೆಗಳನ್ನು ಸಲ್ಲಿಸದ ಹಿನ್ನೆಲೆ, ಅವರ ನಾಮಪತ್ರವನ್ನು ಚುನಾವಣಾಧಿಕಾರಿಗಳು ತಿರಸ್ಕಾರ ಮಾಡಿದ್ದಾರೆ.

# ಶಾಂತಿ–ಸೌಹಾರ್ದತೆಗೆ ಎಲ್ಲರೂ ಮುಂದಾಗಿ: ಡಾ|| ಖಾಜಿ



ತಾಳಿಕೋಟೆ: ರಮಜಾನ್ ಹಬ್ಬದ ಪ್ರಯುಕ್ತ ಇಲ್ಲಿನ ಈದ್ಗಾ ಮೈದಾನದಲ್ಲಿ ಸಾವಿರಾರು ಮುಸ್ಲೀಂ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಪ್ರಾರ್ಥನೆಯ ನಂತರ ಪರಸ್ಪರ ಶುಭಾಷಯ ವಿನಿಮಯ ಮಾಡಿಕೊಂಡರು.

ಈ ಸಂದರ್ಭದಲ್ಲಿ ಈದ ಪ್ರವಚನ ನೀಡಿದ ಡಾ|| ಮಿನ್‌ಹಾಜುದ್ದೀನ ಖಾಜಿ ಅವರು ನಮ್ಮೆಲ್ಲರ ಸೃಷ್ಠಿಕರ್ತ ಒಬ್ಬನೇ ಆಗಿದ್ದಾನೆ.

ನಾವೆಲ್ಲರೂ ಅವನ ಆಜ್ಞೆಗಳಿಗೆ ಶರಣಾಗಿ ಬಾಳಬೇಕಾಗಿದೆ. ಅವನ ದೃಷ್ಠಿಯಲ್ಲಿ ನಾವೆಲ್ಲರೂ ಸಮಾನರಾಗಿದ್ದೇವೆ.

ನಮ್ಮ ಪೈಕಿ ಪ್ರತಿಯೊಬ್ಬರೂ ಸತ್ಯ ಹಾಗೂ ಪ್ರಾಮಾಣಿಕತೆಯ ಗುಣವನ್ನು ಬೆಳಸಿಕೊಳ್ಳಬೇಕು. ಪ್ರವಾದಿ ಮಹಮ್ಮದರ ಆದರ್ಶಗಳನ್ನು ಅನುದಿನವೂ ಪಾಲಿಸಬೇಕು.

ಪರೋಪಕಾರ ಮಾನವೀಯ ಅನುಕಂಪ ದಂಥ–ಹ ಉದಾತ್ತಗುಣಗಳನ್ನು ಅಳವಡಿಸಿಕೊಂಡು ಸಮಾಜದಲ್ಲಿರುವ ಬಡ ಹಾಗೂ ನಿರ್ಗತಿಕ–ರಿಗೆ ನೆರವಾಗಬೇಕು. ಸಮಾಜದಲ್ಲಿರುವ ಎಲ್ಲ ಧರ್ಮಿಯರೊಂದಿಗೂ ಉತ್ತಮ ಬಾಂಧವ್ಯ ಬೆಳೆಸಿಕೊಂಡು ಶಾಂತಿ ಸಾಮರಸ್ಯದಿಂದ ಜೀವನ ನಡೆಸಬೇಕು ಎಂದರು. ಶಿಕ್ಷಣದಿಂದ ಮಾತ್ರ ಸಮಾಜದ ಸರ್ವಾಂಗೀಣ ಪ್ರಗತಿ ಸಾಧ್ಯ, ಪ್ರತಿಯೊಬ್ಬರೂ ತಮ್ಮ ಮಕ್ಕಳನ್ನು ಶಿಕ್ಷಣವಂಥರಾಗಿ ಮಾಡಲು ಪ್ರಯತ್ನಿಸಬೇಕು.

ಇವರಿಂದ ಸಮಾಜದ ಅಭಿವೃದ್ಧಿ ಆಗುವದರೊಂದಿಗೆ ದೇಶಕ್ಕೆ ಸತ್ಪ್ರಜೆಯನ್ನು ನೀಡಿದಂತಾಗುತ್ತದೆ. ರಮಜಾನ್ ಮಾಸದಲ್ಲಿ ಉಪವಾಸಗಳ ಮೂಲಕ ಪಡೆದುಕೊಂಡ ಶಾಂತಿ, ಸಹನೆಯಂಥಹ ಉದಾತ್ತ ಗುಣಗಳನ್ನು ಜೀವನ ಪೂರ್ತಿ ಅನುಸರಿಸುವಂತಾಗ ಬೇಕೆಂದು ತಿಳಿಸಿದರು.

ಈ ಸಮಯದಲ್ಲಿ ಈದ್ಗಾ ಸಮಿತಿ ಅಧ್ಯಕ್ಷ ಮಾಸೂಮ್‌ಸಾಬ ಕೆಂಭಾವಿ, ಉಪಾಧ್ಯಕ್ಷ ಅಬ್ದುಲ್‌ರಜಾಕ್ ಮನಗೂಳಿ, ಕಾರ್ಯದರ್ಶಿ ಎ.ಡಿ. ಎಕೀನ, ಜಾಮೀಯಾ ಮಸೀದಿ ಅಧ್ಯಕ್ಷ ಅಲ್ಲಾಬಕ್ಷ ನಮಾಜಕಟ್ಟಿ, ಪುರಸಭೆ ಉಪಾಧ್ಯಕ್ಷ ಮುಸ್ತಫಾ ಚೌದ್ರಿ, ಗಣ್ಯರಾದ ಖಾಜಾಹುಸೇನ ಡೋಣಿ, ಗನಿಸಾಬ ಲಾಹೋರಿ, ಫಸಿಯುದ್ದೀನ ಖಾಜಿ, ಸೈಯದ್ ಶಕೀಲಅಹ್ಮದ್ ಖಾಜಿ, ಇಬ್ರಾಹಿಂ ಮನ್ಸೂರ, ಡಾ|| ಎ.ಎ. ನಾಲಬಂದ, ಕೆ.ಆಯ್. ಸಗರ, ಎಂ.ಕೆ. ಚೋರಗಸ್ತಿ, ಮಹೆಬೂಬ ಲಾಹೋರಿ, ಬೀಜಾನಲಿ ನೀರಲಗಿ, ನಿರಂಜನಶಾ ಮಕಾನದಾರ, ಸನಾ ಕೆಂಭಾವಿ, ರಾಜಅಹ್ಮದ್ ಒಂಟಿ, ಸಿಕಂದರ ವಠಾರ, ಅಬ್ದುಲ್‌ಸತ್ತಾರ ಅವಟಿ, ಎ.ಎಸ್. ನಮಾಜಕಟ್ಟಿ, ಹಸನ್‌ಸಾಬ ಮನಗೂಳಿ, ಫಯಾಜುದ್ದೀನ ಖಾಜಿ, ಮಹೆಬೂಬಶ್ಯಾ ಮಕಾನದಾರ, ಮಂಜೂರಲಿ ಬೇಪಾರಿ, ಆರೀಫ ಹೊನ್ನುಟಗಿ, ಮುಜಾಹಿದ್ ನಮಾಜಕಟ್ಟಿ ಇದ್ದರು.

## ಗ್ರಾಮ ಆಡಳಿತ ಅಧಿಕಾರಿ ಸುನೀಲ ಇ.ಡಿ. ಅಮಾನತ್ತುಗೊಳಿಸಿ ಜಿಲ್ಲಾಧಿಕಾರಿ ಆದೇಶ

ಧಾರವಾಡ: ಕರ್ನಾಟಕ ವಿಧಾನ ಸಭೆ ಸಾರ್ವತ್ರಿಕ ಚುನಾವಾಣೆ ಹಿನ್ನೆಲೆಯಲ್ಲಿ ನಿಯೋಜಿತ ಕರ್ತವ್ಯ ನಿರ್ವಹಣೆಯಲ್ಲಿ ನಿಷ್ಕಾಳಜಿ ತೊರಿದ ಮತ್ತು ಚುನಾವಣಾ ಕರ್ತವ್ಯಲೋಪ ಮಾಡಿರುವ ಕಲಘಟಗಿ ತಹಶೀಲ್ದಾರ ಕಚೇರಿಯಲ್ಲಿ ಇರುವ ಗ್ರಾಮ ಆಡಳಿತಾಧಿಕಾರಿ ಸುನೀಲ.ಇ.ಡಿ. ಅವರನ್ನು ತಕ್ಷಣಕ್ಕೆ ಜಾರಿ ಬರುವಂತೆ ಸರ್ಕಾರಿ ಸೇವೆಯಿಂದ ಅಮಾನತ್ತುಗೊಳಿಸಿ ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ಇಂದು ಆದೇಶ ಹೊರಡಿಸಿದ್ದಾರೆ.

ಚುನಾವಣಾ ಕೆಲಸಗಳನ್ನು ನಿರ್ವಹಿಸುವಲ್ಲಿ ನಿರ್ಲಕ್ಷ್ಯವಹಿಸಿ ಕರ್ತವ್ಯಲೋಪ ಮಾಡುವುದಲ್ಲದೆ ಚುನಾವಣಾ ಕಾರ್ಯಕ್ಕೆ ತೊಂದರೆಯುಂಟುಮಾಡಿ, ಪ್ರಜಾಪ್ರತಿನಿಧಿ ಕಾಯ್ದೆ 1951ರ ಕಲಂ 134ರ ಉಲ್ಲಂಘನೆ ಮಾಡಿದ್ದರಿಂದ ಸುನೀಲ ಇ.ಡಿ. ಅವರನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು 1957ರ ನಿಯಮ ಪ್ರಕಾರ ಸದರಿ ಅವರ ಮೇಲಿನ ಇಲಾಖೆ ವಿಚಾರಣಾ ಬಾಕಿ ಇರಿಸಿ ಸರ್ಕಾರಿ ಸೇವೆಯಿಂದ ತಕ್ಷಣಕ್ಕೆ ಜಾರಿಗೆ ಬರುವಂತೆ ಅಮಾನತ್ತುಗೊಳಿಸಿ ಆದೇಶಿಸಿದ್ದಾರೆ.

ಅಮಾನತ್ತು ಆಗಿರುವ ಗ್ರಾಮ ಆಡಳಿತ ಅಧಿಕಾರಿ ಸುನೀಲ ಇ.ಡಿ. ಅವರ ಲೀನ್ ಅನ್ನು ತಹಶೀಲ್ದಾರ ಕಲಘಟಗಿ ಕಾರ್ಯಾಲಯದಿಂದ ತಹಶೀಲ್ದಾರ ನವಲಗುಂದ ಇವರ ಕಾರ್ಯ ವ್ಯಾಪ್ತಿಯಲ್ಲಿ ಖಾಲಿ ಇರುವ ಗ್ರಾಮ ಆಡಳಿತ ಅಧಿಕಾರಿ ಸಾಜಾಕ್ಕೆ ವರ್ಗಾಯಿಸಿದೆ.

ಅಮಾನತ್ತು ಅವಧಿಯಲ್ಲಿ ಆಪಾದಿತ ನೌಕರನು ತಹಶೀಲ್ದಾರ ನವಲಗುಂದ ಇವರ ಪೂರ್ವಾನುಮತಿ ಪಡೆಯದೆ ಕೇಂದ್ರ ಸ್ಥಾನ ಬಿಡತಕ್ಕದಲ್ಲ ಮತ್ತು ನೌಕರನು ನಿಯಮಾನುಸಾರ ಜೀವನಾಂಶ ಭತ್ಯೆ ಪಡೆಯಲು ಅರ್ಹನಿರುತ್ತಾನೆ ಎಂದು ಜಿಲ್ಲಾಧಿಕಾರಿಗಳು ಆದೇಶಲ್ಲಿ ತಿಳಿಸಿದ್ದಾರೆ.

## ಚುನಾವಣಾ ಸಾಮಾನ್ಯ, ವೆಚ್ಚ, ಪೊಲೀಸ್ ವೀಕ್ಷಕರ ಆಗಮನ: ಸಾರ್ವಜನಿಕ ಭೇಟಿಗೆ ಅವಕಾಶ

ಕೊಪ್ಪಳ: ಕರ್ನಾಟಕ ವಿಧಾನಸಭಾ ಸಾರ್ವತ್ರಿಕ ಚುನಾವಣೆ–2023ರ ಹಿನ್ನೆಲೆಯಲ್ಲಿ ಚುನಾವಣಾ ಸಾಮಾನ್ಯ ವೀಕ್ಷಕರು, ವೆಚ್ಚ ವೀಕ್ಷಕರು ಹಾಗೂ ಪೊಲೀಸ್ ವೀಕ್ಷಕರ ಈಗಾಗಲೇ ಕೊಪ್ಪಳ ಜಿಲ್ಲೆಗೆ ಆಗಮಿಸಿ ಕಾರ್ಯಪ್ರವೃತ್ತರಾಗಿದ್ದಾರೆ.

ಸಾರ್ವಜನಿಕರಿಗೆ ಮಾಹಿತಿಗಾಗಿ ಮತ್ತು ಸಾರ್ವಜನಿಕ ಭೇಟಿಗೆ ಅವಕಾಶ ಕಲ್ಪಿಸಲು ಅವರು ತಂಗಿರುವ ಸ್ಥಳ, ಅವರ ದೂರವಾಣಿ ಸಂಖ್ಯೆಗಳನ್ನು ಮತ್ತು ಸಾರ್ವಜನಿಕ ಭೇಟಿಗೆ ಅವಕಾಶ ಕಲ್ಪಿಸಿರುವ ಸ್ಥಳಗಳ ವಿವರವನ್ನು ಪ್ರಚುರಪಡಿಸಲಾಗಿದೆ.

ಕುಷ್ಟಗಿ ಮತ್ತು ಕನಕಗಿರಿ ವಿಧಾನಸಭಾ ಕ್ಷೇತ್ರಗಳ ಸಾಮಾನ್ಯ ವೀಕ್ಷಕರಾದ ಸ್ವಪ್ನಿಲ್ ಎಂ ನಾಯಕ (ಮೊ.: 9380294275) ಅವರು ಕೊಪ್ಪಳ ಪ್ರವಾಸಿ ಮಂದಿರದಲ್ಲಿ ತಂಗಿದ್ದು, ಕುಷ್ಟಗಿ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಕುಷ್ಟಗಿ ಚುನಾವಣಾ ಕಚೇ–ರಿಯಲ್ಲಿ ಸೋಮವಾರ, ಬುಧವಾರ ಮತ್ತು ಶುಕ್ರವಾರ ಬೆಳಗ್ಗೆ 10 ರಿಂದ ಮಧ್ಯಾಹ್ನ 12.30ರವರಗೆ ಅದೇ ರೀತಿ ಕನಕಗಿರಿ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಕನಕಗಿರಿ ಚುನಾವಣಾಧಿಕಾರಿಗಳ ಕಚೇ–ರಿಯಲ್ಲಿ ಸೋಮವಾರ, ಬುಧವಾರ ಮತ್ತು ಶುಕ್ರವಾರ ಮಧ್ಯಾಹ್ನ 2 ರಿಂದ ಸಂಜೆ 4.30ರವರೆಗೆ ಸಾರ್ವಜನಿಕ ಭೇಟಿಗೆ ಅವಕಾಶ ಕಲ್ಪಿಸಲಾಗಿದೆ.

ಯಲಬುರ್ಗಾ ಮತ್ತು ಗಂಗಾವತಿ ವಿಧಾನಸಭಾ ಕ್ಷೇತ್ರಗಳ ಸಾಮಾನ್ಯ ವೀಕ್ಷಕರಾದ ವಿ.ಸಂಪತ್ (ಮೊ. 9380251638) ಅವರು ಕೊಪ್ಪಳ ಪ್ರವಾಸಿ ಮಂದಿರದಲ್ಲಿ ತಂಗಿದ್ದು, ಪ್ರತಿ ದಿನ ಬೆಳಗ್ಗೆ 10ರಿಂದ 11ರವರೆಗೆ ಕೊಪ್ಪಳ ಪ್ರವಾಸಿ ಮಂದಿರದಲ್ಲಿಯೇ ಸಾರ್ವಜನಿಕ ಭೇಟಿಗೆ ಅವಕಾಶ ಕಲ್ಪಿಸಲಾಗಿದೆ.

ಕೊಪ್ಪಳ ವಿಧಾನಸಭಾ ಕ್ಷೇತ್ರದ ಸಾಮಾನ್ಯ ವೀಕ್ಷಕರಾದ ಭಾನು ಪ್ರಕಾಶ ಏತುರು (ಮೊ.9380286007) ಅವರು ಕೊಪ್ಪಳ ಪ್ರವಾಸಿ ಮಂದಿರದಲ್ಲಿ ತಂಗಿದ್ದು, ಕೊಪ್ಪಳ ಪ್ರವಾಸಿ ಮಂದಿರದಲ್ಲಿಯೇ ಪ್ರತಿ ದಿನ ಬೆಳಗ್ಗೆ 9.30ರಿಂದ 11ರವರೆಗೆ ಸಾರ್ವಜನಿಕ ಭೇಟಿಗೆ ಅವಕಾಶ ಕಲ್ಪಿಸಲಾಗಿದೆ.

ಕುಷ್ಟಗಿ ಮತ್ತು ಕನಕಗಿರಿ ವಿಧಾನಸಭಾ ಕ್ಷೇತ್ರಗಳ ಚುನಾವಣಾ ವೆಚ್ಚದ ವೀಕ್ಷಕರಾದ ಜಿ.ವಿವೇಕಾನಂದ (ಮೊ.ಸಂ: 9113026380) ಅವರು ಕುಷ್ಟಗಿ ಪ್ರವಾಸಿ ಮಂದಿರದಲ್ಲಿ ತಂಗಿದ್ದು, ಕುಷ್ಟಗಿ ಪ್ರವಾಸಿ ಮಂದಿರದಲ್ಲಿಯೇ ಕುಷ್ಟಗಿ ಕ್ಷೇತ್ರಕ್ಕೆ ಸಂಬಂಧಿಸಿದ ಸಾರ್ವಜನಿಕ ಭೇಟಿಗೆ ಸೋಮವಾರ, ಬುಧವಾರ ಮತ್ತು ಶುಕ್ರವಾರ ಬೆಳಗ್ಗೆ 9 ರಿಂದ 10ರವರೆಗೆ ಅವಕಾಶ ಕಲ್ಪಿಸಲಾಗಿದೆ. ಮತ್ತು ಕನಕಗಿರಿ ಕ್ಷೇತ್ರಕ್ಕೆ ಸಂಬಂಧಿಸಿದ ಸಾರ್ವಜನಿಕ ಭೇಟಿಗೆ ಸೋಮವಾರ ಬುಧವಾರ ಮತ್ತು ಶುಕ್ರವಾರ ಬೆಳಗ್ಗೆ 10ರಿಂದ ಬೆಳಗ್ಗೆ 11 ಗಂಟೆಯವರೆಗೆ ಅವಕಾಶ ಕಲ್ಪಿಸಲಾಗಿದೆ.

ಗಂಗಾವತಿ ವಿಧಾನಸಭಾ ಕ್ಷೇತ್ರದ ವೆಚ್ಚ ವೀಕ್ಷಕರಾದ ಡಾ.ಎ.ವೆಂಕಟೇಶ ಬಾಬು (ಮೊ:9113005210) ಅವರು ಗಂಗಾವತಿ ಪ್ರವಾಸಿ ಮಂದಿರದಲ್ಲಿ ತಂಗಿದ್ದು, ಪ್ರತಿ ದಿನ ಬೆಳಗ್ಗೆ 10 ರಿಂದ 11 ಗಂಟೆಯವರೆಗೆ ಸಾರ್ವಜನಿಕ ಭೇಟಿಗೆ ಅವಕಾಶ ಕಲ್ಪಿಸಲಾಗಿದೆ.

ಯಲಬುರ್ಗಾ ಮತ್ತು ಕೊಪ್ಪಳ ವಿಧಾನಸಭಾ ಕ್ಷೇತ್ರಗಳ ವೆಚ್ಚ ವೀಕ್ಷಕರಾದ ಎಸ್.ಆರ್.ನೆದುಮಾರನ್ (ಮೊ: 9113022689) ಅವರು ಕುಕನೂರ ಪ್ರವಾಸಿ ಮಂದಿರದಲ್ಲಿ ತಂಗಿದ್ದು ಕೂಕನೂರ ಪ್ರವಾಸಿ ಮಂದಿರದಲ್ಲಿ ಯಲಬುರ್ಗಾ ಕ್ಷೇತ್ರದ ಸಾರ್ವಜನಿಕ ಭೇಟಿಗೆ ಸೋಮವಾರ, ಬುಧವಾರ ಮತ್ತು ಶುಕ್ರವಾರ ಬೆಳಗ್ಗೆ 10 ರಿಂದ 11.30ರವರೆಗೆ ಅವಕಾಶ ಕಲ್ಪಿಸಲಾಗಿದೆ. ಅದೇ ರೀತಿ ಕೊಪ್ಪಳ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ಕೊಪ್ಪಳ ಕ್ಷೇತ್ರಕ್ಕೆ ಸಂಬಂಧಿಸಿದ ಸಾರ್ವಜನಿಕ ಭೇಟಿಗೆ ಮಂಗಳವಾರ, ಗುರುವಾರ ಮತ್ತು ಶನಿವಾರ ಬೆಳಗ್ಗೆ 10 ರಿಂದ 11.30ರವರೆಗೆ ಅವಕಾಶ ಕಲ್ಪಿಸಲಾಗಿದೆ.

ಜಿಲ್ಲೆಯ ಐದು ವಿಧಾನಸಭಾ ಕ್ಷೇತ್ರಗಳ ಪೊಲೀಸ್ ವೀಕ್ಷಕರಾದ ಮನೋಜ್ ತಿವಾರಿ (ಮೊ:8277978606) ಅವರು ಕೊಪ್ಪಳ ಪ್ರವಾಸಿ ಮಂದಿರದಲ್ಲಿ ತಂಗಿದ್ದು, ಕೊಪ್ಪಳ ಪ್ರವಾಸಿ ಮಂದಿರದಲ್ಲಿಯೇ ಬೆಳಗ್ಗೆ 9.30ರಿಂದ 10.30ರವರೆಗೆ ಸಾರ್ವಜನಿಕ ಭೇಟಿಗೆ ಅವಕಾಶ ಕಲ್ಪಿಸಲಾಗಿದೆ ಎಂದು ಅಪರ ಜಿಲ್ಲಾ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಗಳೊಂದಿಗೆ ಪಿಯುಸಿ ಪರೀಕ್ಷೆ ಬರೆದ ತಾಯಿ: ಇಬ್ಬರು ಪಾಸ್



ಮಂಗಳೂರು: ಪಿಯುಸಿ ಪರೀಕ್ಷೆಯನ್ನು ತಾಯಿ ಮತ್ತು ಮಗಳು ಒಟ್ಟಿಗೆ ಬರೆದು ಉತ್ತೀರ್ಣರಾದ ಅಪರೂಪದ ಪ್ರಸಂಗ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬೆಳಕಿಗೆ ಬಂದಿದೆ. ಈ ಬಾರಿಯ ಪಿಯುಸಿ ಪರೀಕ್ಷೆ ಯಲ್ಲಿ ರಾಜ್ಯಕ್ಕೆ ದಕ್ಷಿಣ ಕನ್ನಡ ಜಿಲ್ಲೆ ಪ್ರಥಮ ಸ್ಥಾನ ಪಡೆದಿದ್ದು, ಈ ನಡುವೆ ಇಂತಹ ದೊಂದು ಅಪರೂಪದ ಘಟನೆ ಜನರಲ್ಲಿ ಮಂದಹಾಸ ಮೂಡಿದಿದೆ.

ಸುಳ್ಯದ ತಾಯಿ ಮತ್ತು ಮಗಳು ಒಟ್ಟಿಗೆ ಪಿಯುಸಿ ಪರೀಕ್ಷೆ ಎದುರಿಸಿ ಉತ್ತೀರ್ಣರಾದ ಅಪರೂಪದ ಫಲಿತಾಂಶಕ್ಕೆ ಈ ಬಾರಿಯ ದ್ವಿತೀಯ ಪಿಯುಸಿ ಪರೀಕ್ಷೆ ಸುಳ್ಯ ಸಾಕ್ಷಿಯಾಗಿದೆ.

ಸುಳ್ಯ ಜಯನಗರದ ರಮೇಶ್ ಎಂಬವರ ಪತ್ನಿ ಗೀತಾ ಮತ್ತು ಅವರ ಪುತ್ರಿ ತ್ರಿಶಾ ಒಟ್ಟಿಗೆ ಪಿಯುಸಿ ಪರೀಕ್ಷೆ ಬರೆದು ಈ ಅಪರೂಪದ ಸಾಧನೆದ್ದಾರೆ.

**45ನೇ ವರ್ಷಯದಲ್ಲಿ ಪಿಯುಸಿ ಪಾಸ್**

ಸುಳ್ಯದ ಪೊಲೀಸ್ ಠಾಣೆಯಲ್ಲಿ ಗೃಹರಕ್ಷಕ ದಳದ ಸಿಬ್ಬಂದಿಯಾಗಿರುವ ಗೀತಾ ವೃತ್ತಿ ಜೀವನದಲ್ಲಿ ಪಿಯುಸಿ ಪಾಸ್ ಮಾಡಲೇ ಬೇಕು ಎಂದು ಹಠ ಹೊಂದಿದ್ದರು. ತನ್ನ ಕರ್ತವ್ಯದ ಮಧ್ಯೆಯೂ ಓದು ಮುಂದುವರೆಸಿ ಖಾಸಗಿಯಾಗಿ ದ್ವಿತೀಯ ಪಿಯುಸಿ ಕಲಾ ವಿಭಾಗದಲ್ಲಿ ಪರೀಕ್ಷೆ ಬರೆದು 45ನೇ ವರ್ಷದಲ್ಲಿ ಪಿಯುಸಿ ಪರೀಕ್ಷೆ ಉತ್ತೀರ್ಣರಾಗಿದ್ದಾರೆ.

## ಕರ್ನಾಟಕ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ

# ಜಿಲ್ಲೆಯಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗದಂತೆ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿ ಸೂಚನೆ

ಬೆಳಗಾವಿ: ಜಿಲ್ಲೆಯಲ್ಲಿ ಪ್ರಸಕ್ತ ಬೇಸಿಗೆಯಲ್ಲಿ ಜನರು ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ಅಭಾವ ಉಂಟಾಗದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಅಧಿಕಾ-ರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಕುಡಿಯುವ ನೀರು ಪೂರೈಕೆಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ಕಚೇ-ರಿಯ ಸಭಾಂಗಣದಲ್ಲಿ ಶನಿವಾರ(ಏ.22) ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈಗಾಗಲೇ ಬೇಸಿಗೆ ಆರಂಭಗೊಂಡಿದ್ದು, ಮೇ ಅಂತ್ಯದವರೆಗೆ ಜನ ಮತ್ತು



ಜಾನುವಾರುಗಳಿಗೆ ಕುಡಿಯುವ ನೀರು ಒದಗಿಸಬೇಕಾಗುತ್ತದೆ.

ಆದ್ದರಿಂದ ನೀರಿನ ಅಭಾವ ಉಂಟಾಗದಂತೆ ಕ್ರಮಗಳನ್ನು ಕೈಗೊಳ್ಳಬೇಕು.

ನೀರಾವರಿ, ಹೆಸ್ಕಾಂ ಮತ್ತು ಗ್ರಾಮೀಣ ಕುಡಿಯುವ ನೀರು ಇಲಾಖೆಯ ಅಧಿಕಾರಿಗಳು ಈ ಬಗ್ಗೆ ನಿರಂತರವಾಗಿ ನಿಗಾ ವಹಿಸುವುದರ ಜತೆಗೆ ಕುಡಿಯುವ ನೀರು ಅಭಾವ ನೀಗಿಸುವ ನಿಟ್ಟಿನಲ್ಲಿ ಪರಸ್ಪರ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಕುಡಿಯುವ ನೀರಿನ ಸಮಸ್ಯೆ ನಿರ್ವಹಿಸಲು ಅನುಕೂಲವಾಗುವಂತೆ ತೆರೆದ ಬಾವಿಗಳನ್ನು ತೋಡಬೇಕು; ಕೊಳವೆಬಾವಿಗಳನ್ನು ದುರಸ್ತಿಗೊಳಿಸುವ ಮೂಲಕ ಜನರಿಗೆ ನೀರು ಪೂರೈಸಬೇಕು.

ಇದಲ್ಲದೇ ಸದ್ಯಕ್ಕೆ ಲಭ್ಯವಿರುವ ನೀರನ್ನು ಸಮರ್ಪಕವಾಗಿ ಬಳಕೆ ಮಾಡುವ ಮೂಲಕ ಮಳೆಗಾಲದವರೆಗೆ ಪರಿಸ್ಥಿತಿಯನ್ನು ನಿಭಾಯಿಸಬೇಕು ಯಾವುದೇ ಕಾರಣಕ್ಕೂ ಕುಡಿಯುವ ನೀರಿನ ತೊಂದರೆ ಎದುರಾಗಬಾರದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಇದೇ ವೇಳೆ ಮಾತನಾಡಿದ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹರ್ಷಲ್ ಭೋಯರ್ ಅವರು, ತುರ್ತು ಸಂದರ್ಭದಲ್ಲಿ ಕುಡಿಯುವ ನೀರು ಪೂರೈಸಲು ಅನುಕೂಲವಾಗುವಂತೆ ಕೊಳವೆ ಬಾವಿಗಳನ್ನು ಗುರುತಿಸಬೇಕು; ಅದೇ ರೀತಿ ಖಾಸಗಿ ಬಾವಿ ಮತ್ತು ಕೊಳವೆಬಾವಿಗಳ ಪಟ್ಟಿಯನ್ನು ಸಿದ್ಧಪಡಿಸಿಟ್ಟುಕೊಳ್ಳಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ನೀರಾವರಿ ಇಲಾಖೆಯ ಹಿಪ್ಪರಗಿ ವಿಭಾಗದ ಅಧೀಕ್ಷಕ ಎಂಜಿನಿಯರ್ ರಾಠೋಡ, ಹೆಸ್ಕಾಂ ಅಧೀಕ್ಷಕ ಎಂಜಿನಿಯರ್ ಗಿರಿಧರ್ ಕುಲಕರ್ಣಿ, ಚಿಕ್ಕೋಡಿ ವಿಭಾಗದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯನಿರ್ವಾಹಕ ಎಂಜಿನಿಯರ್ ಬಣಗಾರ ಮತ್ತಿತರರು ಸಭೆಯಲ್ಲಿ ಉಪಸ್ಥಿತರಿದ್ದರು.

## ತೆಗ್ಗಿಹಾಳ ಗ್ರಾಮದ ತೋಟದ ಮನೆಯಲ್ಲಿ ಅಕ್ರಮ ಕುಕ್ಕರ್ ದಾಸ್ತಾನು ಪತ್ತೆ



ಬೆಳಗಾವಿ: ಸವದತ್ತಿ ತಾಲೂಕಿನ ತೆಗ್ಗಿಹಾಳ ಗ್ರಾಮಕ್ಕೆ ಹೊಂದಿಕೊಂಡಂತೆ ಸವದತ್ತಿ ಹಾಗೂ ರಾಮದುರ್ಗ ತಾಲ್ಲೂಕಿನ ಗಡಿ ಅಂಚಿನಲ್ಲಿರುವ ತೋಟದ ಮನೆಯಲ್ಲಿ ಅಕ್ರಮವಾಗಿ ಸಂಗ್ರಹಿಸಿ ಇಡಲಾಗಿದ್ದ ಕುಕ್ಕರ್ ಗಳನ್ನು ವಶಪಡಿಸಿಕೊಳ್ಳಲಾಗಿದೆ.

ಖಚಿತ ಮಾಹಿಯನ್ನು ಆಧರಿಸಿ ಕಾರ್ಯಾಚರಣೆ ನಡೆಸಿದ ಪೊಲೀಸ್ ಹಾಗೂ ಎಫ್.ಎಸ್.ಟಿ. ತಂಡವು ಶನಿವಾರ(ಏ.22) ಮಧ್ಯಾಹ್ನ ತೋಟದ ಮನೆಯ ತಗಡಿನ ಷೆಡ್ ನಲ್ಲಿದ್ದ ಸುಮಾರು 1600 ಕುಕ್ಕರ್ ಗಳನ್ನು ಪತ್ತೆ ಮಾಡಿರುತ್ತದೆ.

ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರ ನಿರ್ದೇಶನದಂತೆ ಎಫ್ . ಎಸ್. ಟಿ ಟೀಮ್ ಹಾಗೂ ಸೌದತ್ತಿ ವಲಯದ ಅಧಿಕಾರಿಗಳ ಸಿಬ್ಬಂದಿಯೊಂದಿಗೆ ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 54ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶೆಡ್ಡಿನ ಬಾಗಿಲನ್ನು ತೆರೆದು ನೋಡುದಾಗ ಕುಕ್ಕರ್ ಪೆಟ್ಟಿಗೆಗಳಿರುವುದು ಕಂಡುಬಂದಿದೆ.

## ಮಂತ್ರಾಲಯದ ರಾಯರ ಮಠದಲ್ಲಿ ರಂಜಾನ್ ಆಚರಿಸಿದ ಮುಸ್ಲಿಂ ಬಾಂಧವರು



ರಾಯಚೂರು: ರಂಜಾನ್ ಹಿನ್ನೆಲೆಯಲ್ಲಿ ಮಂತ್ರಾಲಯ ಗುರುರಾಘವೇಂದ್ರ ಸ್ವಾಮಿ ಮಠದಲ್ಲಿ ರಾಯರ ದರ್ಶನ ಪಡೆದು ಮುಸ್ಲಿಂ ಬಾಂಧವರು ಮಠದಲ್ಲೇ ಹಬ್ಬವನ್ನ ಆಚರಿಸಿದರು.

ಮಂತ್ರಾಲಯ ಸುತ್ತಮುತ್ತಲ ಗ್ರಾಮದ ಮುಸ್ಲಿಂ ಭಕ್ತರು ಶನಿವಾರ ವೃಂದಾವನ ದರ್ಶನ ಪಡೆದರು. ಮಂತ್ರಾಲಯ ಮಠದ ಪೀಠಾಧಿಪತಿ ಸುಬುಧೇಂದ್ರ ತೀರ್ಥ ಸ್ವಾಮಿ ಮುಸ್ಲಿಂ ಭಕ್ತರಿಗೆ ಆಶೀರ್ವಚನ ನೀಡಿದರು. ಅನುಗ್ರಹ ಸಂದೇಶ ನೀಡಿ ಸ್ವಾಮೀಜಿ ಮುಸ್ಲಿಂ ಭಕ್ತರಿಗೆ ಆಶೀರ್ವದಿಸಿದರು.

ಮಠದ ಪ್ರಾಂಗಣದಲ್ಲಿ ಮಂತ್ರಾಕ್ಷತೆ, ಪರಿಮಳ ಪ್ರಸಾದ ನೀಡಿದರು. ಹಿಂದೂ, ಮುಸ್ಲಿಂ ಭಾವಕ್ಯೆತೆಯನ್ನು ಮಂತ್ರಾಲಯ ಮಠ ಮೆರೆದಿದೆ. ಮಂತ್ರಾಲಯ ಮಠಕ್ಕೆ ಸಾಕಷ್ಟು ಸಂಖ್ಯೆಯಲ್ಲಿ ಮುಸ್ಲಿಂ ಭಕ್ತರು ಇರುವುದರಿಂದ ಪವಿತ್ರ ರಂಜಾನ್ ಹಬ್ಬವನ್ನು ಮುಸ್ಲಿಂ ಬಾಂಧವರು ಮಠದಲ್ಲಿ ಆಚರಿಸಿದ್ದಾರೆ.

## ಕಾಂಗ್ರೆಸ್ ಕಾರ್ಯಕರ್ತರನ್ನು ಬಳಸಿಕೊಂಡು ಬಳಿಕ ಮೂಲೆಗುಂಪು

ಹುಕ್ಕೇರಿ : ನಾವೆಲ್ಲ ಕಾಂಗ್ರೆಸ್ ಪಕ್ಷವೇ ತಾಯಿ ಎಂದು ನಂಬಿ ಹಗಲಿರುಳು ದುಡಿದವರು. ಪಕ್ಷದ ಮೇಲೆ ನಮಗೆಲ್ಲ ಅಪಾರ ಗೌರವ-ಕಾಳಜಿ ಇದೆ. ಆದ-ರೆ, ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎ.ಬಿ.ಪಾಟೀಲ ಕಾರ್ಯಕರ್ತರನ್ನು ಬಳಸಿಕೊಂಡು ಬಳಿಕ ಮೂಲೆಗುಂಪು ಮಾಡುತ್ತಿದ್ದಾರೆ ಎಂದು ಬ್ಲಾಕ್ ಕಾಂಗ್ರೆಸ್ ಉಚ್ಚಾಟಿತ ಅಧ್ಯಕ್ಷ ಅಶೋಕ ಅಂಕಲಗಿ ಆರೋಪಿಸಿದರು.

ಪಟ್ಟಣದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕ್ಷೇತ್ರದಲ್ಲಿ ಬಿಜೆಪಿ ವಿರುದ್ಧ ಕಾಂಗ್ರೆಸ್ ಪಕ್ಷವನ್ನು ಪ್ರಾಮಾಣಿಕ ಹಾಗೂ ಪ್ರಬಲವಾಗಿ ಸಂಘಟಿಸಿದ್ದರೂ ಎಬಿ ಅವರ ಒಳಒಪ್ಪಂದ ಪಕ್ಷಕ್ಕೆ ಮುಳುವಾಗಿ ಪರಿಣಮಿಸಿದೆ ಎಂದು ಆಪಾದಿಸಿದರು.

ಹಿರಣ್ಯಕೇಶಿ ಸಕ್ಕರೆ ಕಾರ್ಖಾನೆ ಆಡಳಿತ ಮಂಡಳಿ ಚುನಾವಣೆಯಲ್ಲಿ ಕತ್ತಿ ಸಹೋದರರೊಂದಿಗೆ ಎಬಿ ಕೈಜೋಡಿಸಿ ತಮ್ಮ ಸಹೋದರನನ್ನು ನಿರ್ದೇಶಕರನ್ನಾಗಿ ಮಾಡಿದರು. ಲೋಕಸಭೆ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿ ಪ್ರಕಾಶ ಹುಕ್ಕೇರಿ ವಿರುದ್ಧವಾಗಿ ಬಿಜೆಪಿಯ ಅಣ್ಣಾಸಾಹೇಬ ಜೊಲ್ಲೆ ಪರ ಕೆಲಸ ಮಾಡಿದರು. ಈ ರೀತಿ ಅನೇಕ ಸಂದರ್ಭಗಳಲ್ಲಿ



ವಿರೋಧಿ ಪಾಳಯದೊಂದಿಗೆ ಎಬಿ ಒಳಒಪ್ಪಂದ ಮಾಡಿಕೊಂಡಿದ್ದು ಅವರೊಬ್ಬರು ಹೊಂದಾಣಿಕೆ ರಾಜಕಾರಣದ ಹರಿಕಾರರು ಎಂದು ಅಂಕಲಗಿ ವ್ಯಂಗ್ಯವಾಡಿದರು.

ಸ್ವಂತ ಹಣದಲ್ಲಿ ಪಕ್ಷದ ಕಚೇರಿ ತೆರೆಯಲಾಯಿತು. ವಾರಕ್ಕೊಮ್ಮೆ ಕಚೇರಿಯಲ್ಲಿ ಸಭೆ ಕರೆದರೂ ಎಬಿ ಒಂದೇ ಒಂದು ಸಭೆಗೆ ಬರಲಿಲ್ಲ. ಕಾರ್ಯಕರ್ತರ ಅನಿಸಿಕೆ ಆಲಿಸಲಿಲ್ಲ. ಪಕ್ಷದ ತತ್ವ ಸಿದ್ಧಾಂತ ಹಾಗೂ ಸಂಘಟನೆ ಗಂಧ ಗಾಳಿ ಗೊತ್ತಿಲದಂಥ ರೇಖಾ ಚಿಕ್ಕೋಡಿ, ರಾಜು ಸಿದ್ನಾಳ, ಶಾನೂರ್ ತಹಶೀಲ್ದಾರಂಥ ಕೆಲ ಚಾಡಿಕೋರರ ಮಾತು ಕೇಳಿ ಸಾವಿರಾರು ನಿಷ್ಠಾವಂತ ಕಾರ್ಯಕರ್ತರನ್ನು ಕಡೆಗಣಿಸಿದರು. ಇದಕ್ಕೆ ಎಬಿ ಈ ಚುನಾವಣೆಯಲ್ಲಿ ತಕ್ಕ ಪಾಠ ಕಲಿಯುತ್ತಾರೆ ಎಂದು ಅವರು ಹೇಳಿದರು.

ಹುಕ್ಕೇರಿ ಕ್ಷೇತ್ರದ ಕಾಂಗ್ರೆಸ್ ಪಕ್ಷದಲ್ಲಿ ಪಲ್ಲಕ್ಕಿ ಮೆರವಣಿಗೆ ಮುಗಿದ ಮೇಲೆ ಅದನ್ನು ಹೊತ್ತವರನ್ನು ಒದ್ದು ದೂರ ಇಡುವಂಥ ಪರಿಸ್ಥಿತಿ ಎದುರಾಗಿದೆ. ಇದಕ್ಕೆ ಸೂಕ್ತ ಉತ್ತರ ಕೊಡುವ ಕಾಲ ಈಗ ಸನ್ನಿಹಿತವಾಗಿದೆ. ಇದನ್ನು ಪ್ರತಿಯೊಬ್ಬ ಕಾರ್ಯಕರ್ತರು, ಮತದಾರರು ಸ್ವಾಭಿಮಾನದಿಂದ ಬಳಸಿ ಕೊಳ್ಳಬೇಕು. ಕಾರ್ಯಕರ್ತರ ಕಷ್ಟ-ನೋವುಗಳನ್ನು ಅರಿಯಬೇಕು. ಆದರೆ, ಇಲ್ಲಿನ ನಾಯಕರೆನಿಸಿಕೊಂಡವರು ಕಾರ್ಯಕರ್ತರನ್ನು ಬಳಸಿಕೊಂಡು ಬಳಿಕ ಕೈ ಬೀಡುವುದನ್ನು ರೂಢಿಸಿಕೊಂಡಿದ್ದಾರೆ ಎಂದು ಅವರು ಬೇಸರ ತೋಡಿಕೊಂಡರು.

ಹುಕ್ಕೇರಿ ಬ್ಲಾಕ್‌ಗೆ ವಿಜಯ ರವದಿ, ಸಂಕೇಶ್ವರ ಬ್ಲಾಕ್‌ಗೆ ಸಂತೋಷ ಮುಡಸಿ ಎಂಬ ಪಟ್ಟಣ ಪ್ರದೇಶದ ತಮ್ಮ ಚೇಲಾಗಳನ್ನೇ ನೇಮಿಸಿ ಪಕ್ಷವನ್ನು ಅಧೋಗತಿಗೆ ತಳ್ಳಿದರು. ಇದ-ರಿಂದ ಹಳ್ಳಿಗಳಲ್ಲಿ ಪಕ್ಷದ ಅಸ್ತಿತ್ವವೇ ಇಲ್ಲದಂತಾಗಿದೆ. ಪಕ್ಷ ಕಟ್ಟಿದ ಹಿರಿಯರನ್ನು ಕಣ್ಣೀರು ಹಾಕಿಸಿದರು. ವೈಯಕ್ತಿಕ ಈರ್ಷೆ ರಾಜಕಾರಣ ಮಾಡುವ ಎಬಿ ವರ್ತನೆ ನಮಗೆಲ್ಲ ಬೇಸರ ತ-ರಿಸಿದೆ ಎಂದು ಅವರು ಹೇಳಿದರು.

## ಹಾಸ್ಟೆಲ್‌ನಲ್ಲಿ ವಿದ್ಯಾರ್ಥಿ ಆತ್ಮಹತ್ಯೆ



ಕಲಬುರಗಿ: ಜೇವರ್ಗಿ ಪಟ್ಟಣದಲ್ಲಿನ ಬಿಸಿಎಂ ಹಾಸ್ಟೆಲ್ ನಲ್ಲಿ ವಿದ್ಯಾರ್ಥಿ ಯೊಬ್ಬ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಡೆದಿದೆ. ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿ ಯನ್ನು ಸಿದ್ದುಪ್ರಸಾದ್ ಶಹಾಪುರ (23) ಎಂದು ಗುರುತಿಸಲಾಗಿದೆ. ವಿದ್ಯಾರ್ಥಿ ಜೇವರ್ಗಿ ತಾಲೂಕಿನ ಬೀರಾಳ ಬಿ ಗ್ರಾಮದ ನಿವಾಸಿ. ಬಿಕಾಂ ಮುಗಿದು ಎರಡು ವರ್ಷ ಆಗಿದೆ.ಹಾಸ್ಟೆಲ್ ನ ಹಳೆಯ ವಿದ್ಯಾರ್ಥಿ ಆಗಿದ್ದ ಎನ್ನಲಾಗಿದೆ. ಆರ್ಥಿಕ ಸಮಸ್ಯೆ ಇರುವುದರಿಂದ ಹಾಸ್ಟೆಲ್ ನಲ್ಲಿ ವಾಸವಾಗಿದ್ದ. ಕುಟುಂಬದ ಮೂಲಗಳ ಪ್ರಕಾರ ಸಾಲ ಮಾಡಿಕೊಂಡಿದ್ದ.ಮೂರು ದಿನಗಳ ಹಿಂದೆ ಸುಮಾರು ಮೂರು ಲಕ್ಷ ಸಾಲವನ್ನು ಕುಟುಂಬ ಸದಸ್ಯರು ಕಟ್ಟಿದ್ದರಾದರೂ ಆತ್ಮಹತ್ಯೆ ಮಾಡಿಕೊಂಡಿದ್ದಾನೆಂದು ಪೋಲಿಸರು ತಿಳಿಸಿದ್ದಾರೆ. ಪೊಲೀಸರು ಪರಿಶೀಲನೆ ಮಾಡಿದ್ದಾರೆ. ಜೇವರ್ಗಿ ಪೊಲಿಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು ಪ್ರಕರಣ ದಾಖಲಾಗಿದೆ.

## ಮಗಳ ಜನ್ಮದಿನ : ರೋಗಿಗಳಿಗೆ ಹಣ್ಣು ಹಂಪಲ ವಿತರಣೆ



ತಾಳಿಕೋಟೆ: ತಾಲೂಕಿನ ಅಸ್ಕಿ ಗ್ರಾಮದ ಯುವ ಮುಖಂಡರಾದ ಶಿವನಗೌಡ ಬಿರಾದಾರ ಅವರು ತಮ್ಮ ಮಗಳಾದ ನಿಧಿ ಅವಳ ಮೊದಲನೇ ವರ್ಷದ ಜನ್ಮದಿನದ ನಿಮಿತ್ಯವಾಗಿ ಶನಿವಾರರಂದು ತಾಳಿಕೋಟೆ ಪಟ್ಟಣದ ಸಮೂದಾಯ ಆರೋಗ್ಯ ಕೇಂದ್ರದಲ್ಲಿ ದಾಖಲಾದ ರೋಗಿಗಳಿಗೆ ಹಣ್ಣು ಹಂಪಲ, ಬ್ರೇಡ್, ಬಿಸ್ಕೀಟ್‌ಗಳನ್ನು ವಿತರಿಸಿ ವಿನೂತನವಾಗಿ ಜನ್ಮದಿನವನ್ನು ಆಚರಿಸಿದರು.

ಈ ಸಮಯದಲ್ಲಿ ಸ್ನೇಹಿತರಾದ ಗ್ರಾಂಪಂ ಸದಸ್ಯ ಕಿರಣಗೌಡ ಬಿರಾದಾರ, ದೇವರಡ್ಡಿ ಬಿರಾದಾರ, ಬಾಲು ಗೊಡ್ಡೇಮ್ಮಿ, ಪ್ರಭುಗೌಡ ಬಿರಾದಾರ, ಮೊದಲಾದವರು ಇದ್ದರು.

## ವಿರಕ್ತ ಮಠಗಳಿಂದ ಬಸವಾದಿ ಶರಣರ ಸಂದೇಶ ಜೀವಂತ

ಹುಕ್ಕೇರಿ: ನಾಡಿನಲ್ಲಿ ವಿರಕ್ತ ಮಠಗಳು ಇರುವುದರಿಂದ ಬಸವಾದಿ ಶರಣರ ತತ್ವ, ಸಂದೇಶಗಳು ಇನ್ನೂ ಉಳಿದುಕೊಂಡಿವೆ. ಶರಣಗಳ ವಚನಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ತೇರದಾಳ ಶಿವಕುಮಾರ ಸ್ವಾಮೀಜಿ ಹೇಳಿದರು.

ಪಟ್ಟಣದ ಶಿವಲಿಂಗೇಶ್ವರ ಪ್ರಾಥ-ಮಿಕ ಶಾಲೆಯ ಮೈದಾನದಲ್ಲಿ ವಿರಕ್ತಮಠ ವತಿಯಿಂದ ಬಸವ ಜಯಂತಿ ನಿಮಿತ್ತ ಏರ್ಪಡಿಸಿದ್ದ ಬಸವ ದರ್ಶನ ಪ್ರವಚನದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ವಚನಗಳನ್ನು ಓದಿದರೆ ಸಾಲದು ಅವುಗಳಲ್ಲಿನ ತತ್ವ, ಸಂದೇಶಗಳನ್ನು ಅಳವಡಿಸಿಕೊಂಡರೆ ಉತ್ತಮ ಜೀವನ ನಡೆಸಲು ಸಾಧ್ಯ ಎಂದರು.

12 ನೇ ಶತಮಾನದ ಶರಣರು ಸರಳ ಕನ್ನಡ ಭಾಷೆಯಲ್ಲೇ ವಚನಗಳನ್ನು ರಚಿಸುವ ಮೂಲಕ ಸಮಾಜದಲ್ಲಿರುವ ಮೂಢನಂಬಿಕೆ ತೊಡೆದು ಹಾಕಿದರು. ಸಮಾಜ ಸುಧಾರಣೆಗೆ ಶ್ರಮಿಸಿದರು. ಬಸವೇಶ್ವರರು ರಚಿಸಿರುವ ಸಪ್ತ ಸೂತ್ರದ ವಚನದಲ್ಲಿರುವ ಸಂದೇಶವನ್ನು



ಪ್ರತಿಯೊಬ್ಬರೂ ಪಾಲಿಸಿದರೆ ಸುಂದರ ಸಮಾಜ ನಿರ್ಮಾಣವಾಗುತ್ತದೆ. ಸರ್ವರಲ್ಲೂ ನೆಮ್ಮದಿ ಮೂಡುತ್ತದೆ ಎಂದು ಅವರು ಹೇಳಿದರು.

ನೇತೃತ್ವ ವಹಿಸಿದ್ದ ವಿರಕ್ತಮಠದ ಶಿವಬಸವ ಸ್ವಾಮೀಜಿ ಮಾತನಾಡಿ, ನೆಮ್ಮದಿ ಜೀವನಕ್ಕೆ ಪ್ರವಚನ ಪೂರಕ ಸರಕು ಆಗಿದೆ. ಬಸವಾದಿ ಶರಣರ ಆಧ್ಯಾತ್ಮದಲ್ಲಿ ಬದುಕಿನ ಜೀವಂತಿ-ಕೆಯಿದೆ. ಬಸವತತ್ವ, ಪರಂಪರೆ, ಇತಿಹಾಸ, ಸ್ತ್ರೀಕುಲದ ರಕ್ಷಣೆ ಕುರಿತು ಪ್ರತಿಯೊಬ್ಬರೂ ತಿಳಿದುಕೊಳ್ಳುವ ಅಗತ್ಯವಿದೆ ಎಂದರು.

ಹಿರೇಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಸಿ.ಜಿ.ಪಾಟೀಲ, ಡಾ.ರಾಜಶೇಖರ ಇಚ್ಚಂಗಿ, ರಮೇಶ ಹುಂಜಿ, ಶಿವಾನಂದ ಜಿರಲಿ, ಮಹಾದೇವ ಕುಂಬಾರ, ವಿಜಯ ಹಟ್ಟಿಯವರ, ಎಂ.ಜಿ.ಕೊಣ್ಣೂರ ಮತ್ತಿತರರು ಉಪಸ್ಥಿತರಿದ್ದರು. ಪ್ರವಚನಕ್ಕೆ ಬಸವನಕೊಪ್ಪದ ಗದಗಯ್ಯ ಹಿರೇಮಠ ಸಂಗೀತ ನುಡಿಸಿದರೆ, ಗದಗ ಪಂಚಾಕ್ಷರಿ ಹೂಗಾರ ತಬಲಾ ಸಾಥ್ ನೀಡಿದರು.

## ಶಿವ ಜಯಂತಿ ನಿಮಿತ್ತ ರಾಜಹಂಸಗಡ ಕೋಟೆಗೆ ತೆರಳಿ ನಮನ ಸಲ್ಲಿಸಿದ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್

ಬೆಳಗಾವಿ: ಹಿಂದವೀ ಸ್ವರಾಜ್ ಸಂಸ್ಥಾಪಕ, ಹಿಂದೂ ಹೃದಯ ಸಾಮ್ರಾಟ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಯ ಪ್ರಯುಕ್ತ ಶನಿವಾರ ಬೆಳಗಾವಿ ಗ್ರಾಮೀಣ ಕ್ಷೇತ್ರದ ರಾಜಹಂಸಗಡ ಕೋಟೆಗೆ ತೆರಳಿದ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್, ಬೃಹದಾಕಾರದ ಶ್ರೀ ಛತ್ರಪತಿ ಶಿವಾಜಿ ಮಹಾರಾಜರ ಮೂರ್ತಿಗೆ ಮಾಲಾರ್ಪಣೆ ಮಾಡಿ, ಭಕ್ತಿಪೂರ್ವಕ ನಮನಗಳನ್ನು ಸಲ್ಲಿಸಿದರು.

ಶಾಸಕರಾದ ನಂತರ ರಾಜಹಂಸಗಡ ಕೋಟೆಯಲ್ಲಿ ದೇಶದಲ್ಲೇ ಬೃಹತ್ತಾದ ಛತ್ರಪತಿ ಶಿವಾಜಿ ಮೂರ್ತಿ ಸ್ಥಾಪಿಸಬೇಕೆನ್ನುವ ಕನಸು ಹೊತ್ತು, ಕಷ್ಟ, ಕೋಟಲೆಗಳನ್ನು ಎದುರಿಸಿ ತಮ್ಮ ಛಲ ಸಾಧಿಸಿದ ಲಕ್ಷ್ಮೀ ಹೆಬ್ಬಾಳಕರ್, ಅದೇ ಸ್ಥಳಕ್ಕೆ ತೆರಳಿ ಇಂದು ಶಿವಾಜಿ ಮಹಾರಾಜರಿಗೆ ಗೌರವ ಸಲ್ಲಿಸುವಾಗ ಗದ್ಗದಿತರಾದರು. ಶಿವಾಜಿಯ ಪಾದಗಳಿಗೆ ವಂದಿಸಿ ಧನ್ಯತಾಭಾವ ಮೆರೆದರು.



ತಮ್ಮ ಜೀವನದಲ್ಲಿ ಇಂತಹ ಅವಿಸ್ಮರಣೀಯ ಕಾರ್ಯ ನೆರವೇರಿಸುವ ಭಾಗ್ಯ ಸಿಕ್ಕಿದ್ದಕ್ಕಾಗಿ ಸಾರ್ಥಕತೆಯ ಕ್ಷಣಗಳನ್ನು ಅನುಭವಿಸಿದರು. ಶಿವಾಜಿ ಮೂರ್ತಿ ಸ್ಥಾಪಿಸಬೇಕೆನ್ನುವ ಯೋಚನೆ ಬಂದಾಗಿನಿಂದ ಅದು ಈಡೇರುವವರೆಗೆ ತಾವು ಸವೆಸಿದ ಹಾದಿಯನ್ನು ಅಲ್ಲಿ ಸೇರಿದ್ದ ಜನರೆದುರು ಹಂಚಿಕೊಂಡು ಭಾವಪರವಶರಾದರು. ಅವರಿಗೆ ಅರಿವಿಲ್ಲದೆ ಅವರ ಕಣ್ಣಿನಿಂದ ಆನಂದ ಭಾಷ್ಪಗಳು ಸುರಿದವು.

ಛತ್ರಪತಿ ಶಿವಾಜಿ ಮಹಾರಾಜರ ಶೌರ್ಯ, ಪರಾಕ್ರಮಗಳು, ದಿಟ್ಟ ಹೋರಾಟ ಹಾಗೂ ಅವರ ಸಾಧನೆಗಳು ಸದಾಕಾಲವೂ ಆದರ್ಶಮಯ. ಇಲ್ಲಿನ ಅತ್ಯಂತ ಸುಂದರವಾದ ಮೂರ್ತಿ ನಮ್ಮ ಮುಂದಿನ ಪೀಳಿಗೆಗೆ ಸದಾ ಸ್ಫೂರ್ತಿದಾಯಕವಾಗಿರುತ್ತವೆ ಎನ್ನುವ ಆಶಾಭಾವ ಹೊಂದಿದ್ದೇನೆ ಎಂದು ಲಕ್ಷ್ಮೀ ಹೆಬ್ಬಾಳಕರ್ ಈ ಸಂದರ್ಭದಲ್ಲಿ ತಿಳಿಸಿದರು.

ಪ್ರವಾಸಿ ತಾಣವಾಗಿ ಅಭಿವೃದ್ಧಿ ಯಾಗಿರುವ ರಾಜಹಂಸಗಡದಲ್ಲಿ ಶಿವಜಯಂತಿ ನಿಮಿತ್ತ ಶನಿವಾರವೂ ಪ್ರವಾಸಿಗರ ದಂಡೇ ಹರಿದುಬಂದಿತ್ತು.

## ಕುಷ್ಟಗಿ: ಮಾದರಿ ಮತಗಟ್ಟೆಗಳ ಪರಿಶೀಲನೆ



ಕೊಪ್ಪಳ : ವಿಧಾನ ಸಭಾ ಚುನಾ ವಣೆ ಹಿನ್ನೆಲೆ ಯಲ್ಲಿ ಕುಷ್ಟಗಿ ತಾಲೂಕಿನ ಬೀಜ ಕಲ್, ತಳುವ ಗೇರಿ, ಕಂದ ಕೂರ ಗ್ರಾಮ ಪಂಚಾಯತಿ ವ್ಯಾಪ್ತಿ ಯ ಕುರಬನಾಳ, ವಣಗೇರಿ, ಹೆಸರೂರು ಗ್ರಾಮಗಳಿಗೆ ಕುಷ್ಟಗಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಹನುಮಂತಗೌಡ ಅವರು ಏಪ್ರೀಲ್ 22ರಂದು ಭೇಟಿ ನೀಡಿ ಮಾದರಿ ಮತಗಟ್ಟೆ ಕೇಂದ್ರ, ಯುವ ಮತಗಟ್ಟೆ ಕೇಂದ್ರಗಳ ಸಿದ್ಧತೆ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯತ್ ಸಿಬ್ಬಂದಿ, ಗ್ರಾಮ ಪಂಚಾಯತಿ ಸಿಬ್ಬಂದಿ ಹಾಗೂ ಇತರರು ಹಾಜ-ರಿದ್ದರು.

## ದೇಶಕ್ಕೆ ಶಿವಾಜಿ ಮಹಾರಾಜರ ಕೊಡುಗೆ ಅಪಾರ: ಯುವ ನಾಯಕ ರಾಹುಲ್ ಜಾರಕಿಹೊಳಿ



ಯಮಕನಮರಡಿ: ಯಮಕನಮರಡಿ ಮತಕ್ಷೇತ್ರದ ಪಾಶ್ಚಾಪೂರ ಗ್ರಾಮದಲ್ಲಿ ಶ್ರೀ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮದಲ್ಲಿ ಯುವ ನಾಯಕ ರಾಹುಲ್ ಜಾರಕಿಹೊಳಿ ಭಾಗವಹಿಸಿ, ಶಿವಾಜಿ ಮಹಾರಾಜರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು.

ಈ ವೇಳೆ ಯುವ ನಾಯಕ ರಾಹುಲ್ ಜಾರಕಿಹೊಳಿ ಅವರು ಮಾತನಾಡಿ, ದೃಢ ಸಂಕಲ್ಪ, ಮಹತ್ವಾಕಾಂಕ್ಷೆ, ನಾಯಕತ್ವ, ಮತ್ತು ದೂರದೃಷ್ಟಿಗೆ ಉದಾಹರಣೆಯಂತಿದ್ದ ಜನರ ರಾಜ ಎಂದೇ ಪ್ರಸಿದ್ಧಿ ಪಡೆದ ಛತ್ರಪತಿ ಶ್ರೀ ಶಿವಾಜಿ ಮಹಾರಾಜರ ಹೋರಾಟ ನಮಗೆ ಸ್ಪೂರ್ತಿ ಆಗಬೇಕಿದೆ ಎಂದರು.

ಅವರ ನಡೆ, ನುಡಿ ಹೋರಾಟ ಹಾದಿವನ್ನು ಯುವಕರು ತಿಳಿದುಕೊಳ್ಳಬೇಕಿದೆ. ಶಿವಾಜಿ ಮಹಾರಾಜರು ದೇಶಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಭಾರತವನ್ನು ಸಂಸ್ಕೃತ , ಸಂಪತ್ಭರಿತ ನಾಡಾಗಿಸಲು ಬಹಳಷ್ಟು ಹೋರಾಟ ಮಾಡಿದ್ದಾರೆ. ಶಿವಾಜಿ ಮಹಾರಾಜರು ಕಟ್ಟಿ ಬೆಳೆಸಿದ ಸಾಮ್ರಾಜ್ಯ ಎಂದೆಂದಿಗೂ ಅಜರಾಮರ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಂಜುಗೌಡ ಪಾಟೀಲ್ಬ ಶರಪರಾಜ ಪಾಶ್ಚಾಪೂಚರ ಗಣಿ ದರ್ಗಾ , ಅರ್ಜುನ್ ದಳವೇಕಾರ, ಸಚೀನ ಯಮಕನಮರಡಿ , ಹಾಗೂ ಗ್ರಾಮಸ್ಥರು ಯುವಕರು ಉಪಸ್ಥಿತರಿದ್ದರು.

## ಮಾಧ್ಯಮ ಕಣ್ಗಾವಲು ಘಟಕಕ್ಕೆ ಚುನಾವಣಾ ವೀಕ್ಷಕರ ಭೇಟಿ

ಬೆಳಗಾವಿ: ವಿಧಾನಸಭೆ ಚುನಾವಣೆ ಹಿನ್ನೆಲೆಯಲ್ಲಿ ಆರಂಭಿಸಲಾಗಿರುವ ಮಾಧ್ಯಮ ಕಣ್ಗಾವಲು ಘಟಕಕ್ಕೆ ಗೋಕಾಕ ಹಾಗೂ ಯಮಕನಮರಡಿ ವಿಧಾನಸಭಾ ಮತಕ್ಷೇತ್ರಗಳ ಸಾಮಾನ್ಯ ವೀಕ್ಷಕರಾದ ಹಿರಿಯ ಐ.ಎ.ಎಸ್. ಅಧಿಕಾರಿ ಎಸ್.ಮಾಲಾರವಿಜ್ಞ ಅವರು ಭೇಟಿ ಪರಿಶೀಲಿಸಿದರು.

ಎಲೆಕ್ಟ್ರಾನಿಕ್ ಹಾಗೂ ಮುದ್ರಣ ಮಾಧ್ಯಮ ಗಳ ಪ್ರಸಾರವಾಗುವ ಸುದ್ದಿಗಳ ಮೇಲೆ ನಿಗಾ ವಹಿಸಬೇಕು.

ಪೇಡ್ ನ್ಯೂಸ್ ಅಥವಾ ಜಾಹೀರಾತು ಕಂಡುಬಂದರೆ ಅದಕ್ಕೆ ಸಂಬಂಧಿಸಿದ ವೆಚ್ಚವನ್ನು ಅಭ್ಯರ್ಥಿಗಳ ಚುನಾವಣಾ ವೆಚ್ಚಕ್ಕೆ ಸೇರಿಸಬೇಕು ಎಂದು ನಿರ್ದೇಶನ ನೀಡಿದರು.

ಇದಲ್ಲದೇ ನೀತಿಸಂಹಿತೆ ಉಲ್ಲಂಘನೆಗೆ ಸಂಬಂಧಿಸಿದಂತೆ ವರದಿಗಳು ಪ್ರಸಾರವಾದರೆ ಅವುಗಳನ್ನು ಮಾದರಿ ನೀತಿಸಂಹಿತೆ ನೋಡಲ್ ಅಧಿಕಾರಿಗಳು ಹಾಗೂ ಸಂಬಂಧಿಸಿದ ಮತಕ್ಷೇತ್ರಗಳ ಚುನಾವಣಾಧಿಕಾರಿಗಳ ಗಮನಕ್ಕೆ ತರುವಂತೆ ತಿಳಿಸಿದರು.



ಜಿಲ್ಲಾ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಘಟಕದ ನೋಡಲ್ ಅಧಿಕಾರಿಯಾಗಿರುವ ವಾರ್ತಾ ಇಲಾಖೆಯ ಉಪ ನಿರ್ದೇಶಕ ಗುರುನಾಥ ಕಡಬೂರ ಅವರು, ಮಾಧ್ಯಮ ಕಣ್ಗಾವಲು ಘಟಕದ ಕಾರ್ಯನಿರ್ವಹಣೆ ಕುರಿತು ಮಾಹಿತಿಯನ್ನು ನೀಡಿದರು.

ಜಿಲ್ಲೆಯ ಎಲ್ಲಾ ಹದಿನೆಂಟು ಮತಕ್ಷೇತ್ರಗಳ ಅಭ್ಯರ್ಥಿಗಳ ಚುನಾವಣಾ ಜಾಹೀರಾತು ಹಾಗೂ ನೀತಿಸಂಹಿತೆ ಉಲ್ಲಂಘನೆ ಕುರಿತು ನಿಗಾ ವಹಿಸಲಾಗುತ್ತಿದೆ ಎಂದು ವಿವ-ರಿಸಿದರು.

ಗೋಕಾಕ ಮತಕ್ಷೇತ್ರದ ಚುನಾವಣಾಧಿಕಾರಿ ಗೀತಾ ಕೌಲಗಿ ಮತ್ತು ಯಮಕನಮರಡಿ ಮತಕ್ಷೇತ್ರದ ಚುನಾವಣಾಧಿಕಾರಿ ಬಲರಾಮ್ ಚವಾಣ ಹಾಗೂ ಮಾಧ್ಯಮ ಕಣ್ಗಾವಲು ಘಟಕದ ಅಧಿಕಾರಿ ಶ್ರೀದೇವಿ ನಾಗನೂರ, ಸುನೀಲ್ ಪಾಟೀಲ, ಹೊಳೆಪ್ಪ ನಾಯಕ, ಆರ್. ಎಸ್. ವಾಲಿಶೆಟ್ಟಿ, ಲಕ್ಷ್ಮಣ ತಳವಾರ, ಮಹಾಂತೇಶ್ ಪತ್ತಾರ, ಅರುಣ ನೇಸರಗಿ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತ-ರಿದ್ದರು.

## ಗೋಪಾಲಜಿ ಪಿಯು ಕಾಲೇಜಿನ ವಿದ್ಯಾರ್ಥಿಗಳ ಸಾಧನೆ

ಗೋಪಾಲಜಿ ಇಂಟಗ್ರೇಟೆಡ್ ಪಿ.ಯು ಕಾಲೇಜಿನ 2022-2023ನೇ ಸಾಲಿನ ದ್ವಿತೀಯ ಪಿಯುಸಿ ಫಲಿತಾಂಶ 89% ಆಗಿದ್ದು ವಾಣಿಜ್ಯ ವಿಭಾಗದಲ್ಲಿ 93.93% ವಿಜ್ಞಾನ ವಿಭಾಗದಲ್ಲಿ 84% ಆಗಿದೆ.

ವಾಣಿಜ್ಯ ವಿಭಾಗದಲ್ಲಿ ಅತಿ ಹೆಚ್ಚು ಅಂಕಪಡೆದ ವಿದ್ಯಾರ್ಥಿಗಳು

1) ಆಲಿಷಾ ಮುಲ್ಲಾ - 90.16% 2) ಭಾರತಿ ಹುಲಮನಿ- 89.83% 3) ಸುಕನ್ಯಾ ಹಲಕರ್ಣಿ- 86.50%

ವಿಜ್ಞಾನ ವಿಭಾಗದಲ್ಲಿ ಅತಿಹೆಚ್ಚು ಅಂಕಪಡೆದ ವಿದ್ಯಾರ್ಥಿಗಳು 1) ರಜತ ಕುಲಕರ್ಣಿ- 94% 2) ಅನಿಲ ಹುದಲ - 92.83% 3) ಶಿಫಾ ಘನಿಬಂದ - 87.50%. ಹೆಚ್ಚು ಅಂಕಗಳಿಸಿದ ಮತ್ತು ಉತ್ತೀರ್ಣರಾದ ಎಲ್ಲ ವಿದ್ಯಾರ್ಥಿಗಳಿಗೆ ಹಾಗೂ ಅವರ ಪಾಲಕರಿಗೆ ಗೋಪಾಲಜಿ ಇಂಟಿಗ್ರೇಟೆಡ್ ಪಿಯು ಕಾಲೇಜಿನ ನಿರ್ವಹಣಾ ಮಂಡಳಿ, ಬೋದಕ, ಬೋದಕೇತರ ವರ್ಗದಿಂದ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸುತ್ತವೆ.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089